PRGI No.: KARKAN/2023/86346

# ವಿಜಯ ವಿಶ್ವವಾಣಿ

VIJAYA VISHWAVANI Kannada Daily
ವಿಜಯ ಧ್ವನಿ
ಕನ್ನಡ ದಿನಪತ್ರಿಕೆ
₹1

ಬೆಂಗಳೂರು * ಬೆಂಗಳೂರು ಗ್ರಾಮಾಂತರ * ಚಿಕ್ಕಬಳ್ಳಾಪುರ * ಕೋಲಾರ * ಮಂಡ್ಯ * ರಾಮನಗರ * ತುಮಕೂರು * ಚಾಮರಾಜನಗರ * ಉತ್ತರ ಕರ್ನಾಟಕ * ಕಲಬುರ್ಗಿ * ಯಾದಗಿರಿ * ಬೀದರ್ * ರಾಯಚೂರು

Volume-2 | ಸಂಪುಟ–2 | Issue- 884 | ಸಂಚಿಕೆ–884 | Friday, April 10, 2026 | ಶುಕ್ರವಾರ, ಏಪ್ರಿಲ್ 10, 2026 | Pages- 8 | ಪುಟಗಳು–8

**ಶುಭ ಮುಂಜಾವು**

ನನ್ನ ಕಾರ್ಯದಲ್ಲಿ ಯಶಸ್ಸು ಸಿಗಲಿ ಎಂದು ಭಗವಂತನಲ್ಲಿ ಬೇಡಿಕೊಳ್ಳುವುದಕ್ಕಿಂತ; ನಾನು ಮಾಡುವ ಕಾರ್ಯದಲ್ಲಿ ನನಗೆ ವಿಧೇಯತೆ ದಯಪಾಲಿಸು ಎಂದು ಬೇಡುತ್ತೇನೆ.
–ಮದರ್ ಥೆರೆಸಾ

ಯಾವುದೇ ಸಂಸ್ಕೃತಿ ತನ್ನ ವೈಶಿಷ್ಟ್ಯವನ್ನು ಉಳಿಸಿಕೊಳ್ಳದಿದ್ದರೆ ಅದು ಹೆಚ್ಚು ಕಾಲ ಉಳಿಯದು.
–ಮಹಾತ್ಮ ಗಾಂಧಿ

ಬಿಜೆಪಿ ನಾಯಕರಿಂದ ರಾಜಕೀಯ ತೆವಲುಗಳನ್ನು ತೀರಿಸಿಕೊಳ್ಳಲು ಪ್ರಯತ್ನ 02
ಆಹಾರ ಗೋದಾಮಿಗೆ ಬೆಂಕಿ: ಕೋಟ್ಯಂತರ ವಸ್ತುಗಳು ಬೆಂಕಿಗಾಹುತಿ 06
ವಿಧಾನಸಭಾ ಚುನಾವಣೆಯಲ್ಲೂ ಮಹಿಳೆಯರಿಗೆ ಮೀಸಲಾತಿ ಜಾರಿ 08

# ರೈಲ್ವೆ ಮಾರ್ಗ ಯೋಜನೆಗೆ ಹಣವಿಲ್ಲವೆಂದು ಪತ್ರ ಬರೆದ ಸಿಎಂ: ವಿ.ಸೋಮಣ್ಣ ಆರೋಪ

ಮಂಡ್ಯ: 'ಕನಕಪುರ– ಮಳವಳ್ಳಿ ರೈಲ್ವೆ ಮಾರ್ಗ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಮ್ಮ ಸರ್ಕಾರದ ಬಳಿ ಹಣವಿಲ್ಲ. ಹೀಗಾಗಿ ಯೋಜನೆ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ' ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಗಂಭೀರ ಆರೋಪ ಮಾಡಿದರು.

ಬೆಂಗಳೂರು ಮತ್ತು ಮೈಸೂರು ನಡುವಿನ ರೈಲು ಮಾರ್ಗದಲ್ಲಿ ವಿಂಡೋ ಟ್ರಯಲಿಂಗ್ ಪರಿವೀಕ್ಷಣೆಗಾಗಿ ಮಂಡ್ಯ ರೈಲ್ವೆ ನಿಲ್ದಾಣಕ್ಕೆ ಗುರುವಾರ ಬಂದ ಸಂದರ್ಭದಲ್ಲಿ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು. 'ನಾವು ಅಧಿಕಾರಕ್ಕೆ ಬಂದ ತಕ್ಷಣವೇ ಕನಕಪುರ– ಮಳವಳ್ಳಿ ರೈಲ್ವೆ ಮಾರ್ಗ ಯೋಜನೆ ಕೈಗೆತ್ತಿಕೊಳ್ಳ ಲಾಗಿತ್ತು. ಆದರೆ, ರಾಜ್ಯ ಸರ್ಕಾರದಿಂದ ಸಹಕಾರ ಸಿಕ್ಕಿಲ್ಲ' ಎಂದರು.

ಜನಸಾಮಾನ್ಯರಿಗೆ ತೊಂದರೆ ಆಗದ ರೀತಿಯಲ್ಲಿ ರೈಲ್ವೆ ನಿಲ್ದಾಣ ಪರಿಶೀಲನೆ ಮಾಡಲಾಗುತ್ತಿದೆ. ಮಂಡ್ಯ ನಗರಕ್ಕೆ ಬಸ್‌ಗಳ ವ್ಯವಸ್ಥೆ ಮತ್ತು ಮೆಮು (ಮೇನ್‌ಲೈನ್ ಎಲೆಕ್ಟ್ರಿಕ್ ಮಲ್ಟಿಪಲ್ ಯೂನಿಟ್) ರೈಲು ಬೇಕೆನ್ನುವ ಬೇಡಿಕೆ ಇದೆ. ಮಂಡ್ಯ ರೈಲ್ವೆ ನಿಲ್ದಾಣದ ಅಭಿವೃದ್ಧಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರು.25 ಕೋಟಿ ಕೊಟ್ಟಿದ್ದಾರೆ ಎಂದು ಹೇಳಿದರು.




' ಮಂಗಳೂರು–ಕುಕ್ಕೆ ಸುಬ್ರಹ್ಮಣ್ಯ ನಡುವಿನ 51 ಕಿ.ಮೀ. ಪ್ರಯಾಸದ ರೈಲು ಮಾರ್ಗವನ್ನು ವಿದ್ಯುದೀಕರಣ ಮಾಡಿದ್ದು ನಮ್ಮ ಸಾಧನೆ. ರೂ.6 ಸಾವಿರ ಕೋಟಿ ವೆಚ್ಚದಲ್ಲಿ ಮೆಗಾ ಕೋಚಿಂಗ್ ಕೇಂದ್ರ ನಿರ್ಮಾಣಕ್ಕೂ ಯೋಜನೆ ರೂಪಿಸಿದ್ದೇವೆ' ಕಳೆದ ಹತ್ತು ವರ್ಷದಲ್ಲಿ ರಾಜ್ಯದಲ್ಲಿ 707 ಹೊಸ ರೈಲ್ವೆ ಸೇತುವೆಗಳನ್ನು ನಿರ್ಮಿಸಲಾಗುತ್ತಿದೆ. ಎಲ್ಲೆಲ್ಲಿ ಅಗತ್ಯವಿದೆಯೋ ಅಲ್ಲೆಲ್ಲ ನಿರ್ಮಾಣಕ್ಕೆ ಸೂಚಿಸಿದ್ದು, ವೆಚ್ಚವನ್ನು ಕೇಂದ್ರವೇ ಭರಿಸಲಿದೆ' ಎಂದರು.

ಬೆಂಗಳೂರು– ಮೈಸೂರು ನಡುವೆ ಸಂಚರಿಸುವ ರೈಲುಗಳ ಗರಿಷ್ಠ ವೇಗವನ್ನು 110 ರಿಂದ 135 ಕಿ.ಮೀ.ಗೆ ಹೆಚ್ಚಿಸಿದ್ದು, ಇದರಿಂದ ಈ ಎರಡು ನಗರಗಳ ನಡುವಿನ ಪ್ರಯಾಣದ ಅವಧಿ ಒಂದು ಗಂಟೆಗೆ ಇಳಿಯಲಿದೆ' ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ಬೆಂಗಳೂರಿಗೆ ಪರ್ಯಾಯವಾಗಿ ಮೈಸೂರು, ತುಮಕೂರಿನಂತಹ ನಗರಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ. ರಾಜಧಾನಿಯಿಂದ ಮೈಸೂರಿಗೆ ಸದ್ಯದಲ್ಲೇ ಇನ್ನೂ ಎರಡು ಮೆಮು ರೈಲುಗಳು ಸಂಚರಿಸಲಿವೆ' ಎಂದರು.

ಮೈಸೂರಿನಿಂದ ಬೆಂಗಳೂರು ರೈಲ್ವೆ ಮಾರ್ಗದಲ್ಲಿ ಜನರಿಗೆ ತೊಂದರೆ ಆಗಿರುವ ಬಗ್ಗೆ ಮಾಹಿತಿ ಇದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳ ಜತೆ ಸಭೆ ಮಾಡಿ ಕ್ರಮ ವಹಿಸಲಾಗುತ್ತಿದೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರೂ ಚರ್ಚೆ ಮಾಡಿದ್ದು ನಿಮ್ಮ ಕನಸು ನಿವಾರಣೆ ಮಾಡುತ್ತಾರೆ ಎಂದರು.

ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ, ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಒಳಗೊಂಡ ತಂಡವು ಗುರುವಾರ ವಿಶೇಷ ರೈಲಿನಲ್ಲಿ ಬೆಂಗಳೂರು–ಮೈಸೂರು ನಡುವೆ ಪ್ರಯಾಣಿಸಿತು.

ಬೆಳಿಗ್ಗೆ 10ಕ್ಕೆ ಬೆಂಗಳೂರು ಕೆಎಸ್‌ಆರ್ ನಿಲ್ದಾಣದಿಂದ ಆರಂಭಗೊಂಡ ಪ್ರಯಾಣವು ಮಧ್ಯಾಹ್ನ 2.45ರ ವೇಳೆಗೆ ಮೈಸೂರಿನಲ್ಲಿ ಮುಕ್ತಾಯಗೊಂಡಿತು. ನಡುವೆ ಎಂಟು ನಿಲ್ದಾಣಗಳಿಗೆ ಭೇಟಿ ಕೊಟ್ಟು ಜನರ ಅಹವಾಲು ಆಲಿಸಿತು. ನಿಲ್ದಾಣದಲ್ಲಿನ ಮೂಲ ಸೌಕರ್ಯಗಳನ್ನು ಪರಿಶೀಲಿಸಿತು.

'ನಿಲ್ದಾಣಗಳಿಗೆ ಭೇಟಿ ನೀಡಿ ಪ್ರಯಾಣಿಕರ ಸಮಸ್ಯೆ ಆಲಿಸಿದ್ದೇವೆ. ಕೆಲವೆಡೆ ಎಕ್ಸ್‌ಪ್ರೆಸ್ ರೈಲುಗಳ ನಿಲುಗಡೆಗೆ ಮನವಿ ಮಾಡಿದ್ದಾರೆ. ಅಭಿವೃದ್ಧಿ ಕಾಮಗಾರಿಗಳಿಂದ ಒಂದೆರಡು ಕಡೆ ತೊಂದರೆ ಆಗಿದ್ದು, ಸದ್ಯದಲ್ಲೇ ಸರಿಹೋಗಲಿದೆ' ಎಂದು ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಸಂಸದ ಯದುವೀರ್ ಒಡೆಯರ್, ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು, ಡಿ.ಸಿ. ತಮ್ಮಣ್ಣ ಇತರರಿದ್ದರು. ವಿಶೇಷ ರೈಲಿನ ಮೂಲಕ ಮಂಡ್ಯ ರೈಲ್ವೆ ನಿಲ್ದಾಣಕ್ಕೆ ಆಗಮಿಸಿದ ಕೇಂದ್ರ ಸಚಿವರನ್ನು ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಸ್ವಾಗತಿಸಿ ಅಭಿನಂದನೆ ಸಲ್ಲಿಸಿದರು.

ನಂತರ ಸಚಿವರು ಹಾಗೂ ಅಧಿಕಾರಿಗಳು ಮಂಡ್ಯ ರೈಲ್ವೆ ನಿಲ್ದಾಣದ ಆಧುನೀಕರಣ, ಅಗತ್ಯ ಅನುದಾನ, ಕಾಮಗಾರಿ, ಸೌಲಭ್ಯ ಹಾಗೂ ರೈಲ್ವೆ ಮಾರ್ಗಗಳ ಪರಿಶೀಲಿಸಿದರು. ಅಂತೆಯೇ ಅಧಿಕಾರಿಗಳು, ಸ್ಥಳೀಯರ ಜತೆ ಸಮಾಲೋಚನೆ ನಡೆಸಿದರು.

## ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ: ಉಡುಪಿ ಪ್ರಥಮ, ಕಲ್ಬುರ್ಗಿ ಕೊನೆ ಸ್ಥಾನ

ಬೆಂಗಳೂರು: ಲಕ್ಷಾಂತರ ವಿದ್ಯಾರ್ಥಿಗಳು ಕಾತರದಿಂದ ಕಾಯುತ್ತಿರುವ 2025–26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಗುರುವಾರ ಪ್ರಕಟವಾಗಿದ್ದು, ಫಲಿತಾಂಶದಲ್ಲಿ ಈ ಬಾರಿ ದಾಖಲೆಯ ಹೆಚ್ಚಳವಾಗಿದೆ.

ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶದಲ್ಲಿ ದಾಖಲೆ ಮಟ್ಟದಲ್ಲಿ ಏರಿಕೆ ಕಂಡಿದ್ದು, ಕಳೆದ ವರ್ಷಕ್ಕಿಂತ ಶೇ. 12 ರಷ್ಟು ಹೆಚ್ಚು ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ.

ಈ ವರ್ಷ ಶೇ.86ರಷ್ಟು ಮಕ್ಕಳು ಉತ್ತೀರ್ಣರಾಗಿ ದ್ದಾರೆ. ಅಂದರೆ 7,10,363 ವಿದ್ಯಾರ್ಥಿಗಳ ಪೈಕಿ 6.10 ಲಕ್ಷ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಳೆದ ವರ್ಷ ಶೇ.73.45ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದರು. ಇದರೊಂದಿಗೆ ಈ ಬಾರಿ ಪಿಯುಸಿ ಫಲಿತಾಂಶದಲ್ಲಿ ಭಾರೀ ಸುಧಾರಣೆ ಕಂಡು ಬಂದಿದೆ.

ವಾಣಿಜ್ಯ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ 600 ಅಂಕಗಳಿಗೆ 600 ಅಂಕ ಪಡೆದು ಸಾಧನೆ ಮಾಡಿದ್ದಾರೆ. ಈ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

## ಯೋಗೇಶ್‌ಗೌಡ ಕೊಲೆ ಪ್ರಕರಣದ ತೀರ್ಪು ಪ್ರಕಟಣೆ ಏಪ್ರಿಲ್ 15ಕ್ಕೆ ಮುಂದೂಡಿಕೆ

ಬೆಂಗಳೂರು: ಧಾರವಾಡ ಜಿಲ್ಲೆಯ ಹೆಬ್ಬಳ್ಳಿ ಜಿಲ್ಲಾ ಪಂಚಾಯಿತಿ ಕ್ಷೇತ್ರದ ಬಿಜೆಪಿ ಸದಸ್ಯರಾಗಿದ್ದ ಯೋಗೇಶ್‌ಗೌಡ ಕೊಲೆ ಪ್ರಕರಣದ ತೀರ್ಪನ್ನು ಜನಪ್ರತಿನಿಧಿಗಳ ವಿಶೇಷ ಸೆಷನ್ಸ್ ನ್ಯಾಯಾಲಯ ಇದೇ 15ಕ್ಕೆ ಪ್ರಕಟಿಸಲಿದೆ.




ಧಾರವಾಡ ವಿಧಾನ ಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ವಿನಯ ಕುಲಕರ್ಣಿ ಆರೋಪಿಯಾಗಿರುವ ಈ ಪ್ರಕರಣದ ವಿಚಾರಣೆಯನ್ನು, 'ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಇತ್ತೀಚೆಗಷ್ಟೇ ಮುಕ್ತಾಯಗೊಳಿಸಿ ತೀರ್ಪನ್ನು ಗುರುವಾರಕ್ಕೆ (ಮಾ.9) ಕಾಯ್ದಿರಿಸಿದ್ದರು.

ಬೆಳಿಗ್ಗೆ ಪ್ರಕರಣದ 15ನೇ ಆರೋಪಿಯಾಗಿರುವ ಶಾಸಕ ವಿನಯ ಕುಲಕರ್ಣಿ ಸೇರಿದಂತೆ ಎಲ್ಲ 21 ಆರೋಪಿಗಳು ನ್ಯಾಯಾಲಯಕ್ಕೆ ಹಾಜರಾಗಿದ್ದರು. ಈ ವೇಳೆ ನ್ಯಾಯಾಧೀಶರು ತೀರ್ಪನ್ನು ಇದೇ 15ಕ್ಕೆ ಮುಂದೂಡಿ ಆದೇಶಿಸಿದರು.

ಧಾರವಾಡ ಉಪನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2016ರ ಜೂನ್ 15ರಂದು ಯೋಗೇಶ್ ಗೌಡ ಗೌಡರ್ ಕೊಲೆ ನಡೆದಿತ್ತು. ಈ ಪ್ರಕರಣವನ್ನು ಸಿಬಿಐ ತನಿಖೆ ನಡೆಸಿದ್ದು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಲಾಗಿತ್ತು.

## ಹಿಜ್ಬುಲ್ಲಾ ಉಗ್ರ ಸಂಘಟನೆಯ ಪ್ರಧಾನ ಕಾರ್ಯದರ್ಶಿ ನಯೀಮ್ ಖಾಸಿಮ್ ಹತ್ಯೆ!

ಇಸ್ರೇಲ್‌ನ ಐಡಿಎಫ್ ಪಡೆ ನಿನ್ನೆ ರಾತ್ರಿ ಬೈರುತ್‌ನಲ್ಲಿ ನಡೆಸಿದ ವೈಮಾನಿಕ ದಾಳಿಯಲ್ಲಿ ಹಿಜ್ಬೊಲ್ಲಾ ಪ್ರಧಾನ ಕಾರ್ಯದರ್ಶಿ ನಯೀಮ್ ಖಾಸಿಮ್ ನಿನ್ನೆ ರಾತ್ರಿ ಬೈರುತ್‌ನಲ್ಲಿ ನಡೆದ ದಾಳಿಯಲ್ಲಿ ಹತ್ಯೆಯಾಗಿದ್ದಾನೆ ಎಂದು ಇಸ್ರೇಲಿ ಸೇನೆಯ ವಕ್ತಾರ ಅವಿಚೇ ಅಡ್ರೇ ಟ್ವೀಟ್ ಮಾಡಿದ್ದಾರೆ.



ಇಸ್ರೇಲ್ ರಕ್ಷಣಾ ಪಡೆಗಳು ಬೈರುತ್‌ನಲ್ಲಿ ಹಿಜ್ಬೊಲ್ಲಾ ಪ್ರಧಾನ ಕಾರ್ಯದರ್ಶಿ ನಯೀಮ್ ಖಾಸಿಮ್ ಅವರನ್ನು ನಿರ್ಮೂಲನೆ ಮಾಡಿದೆ.

ಅದೇ ಸಮಯ ದಲ್ಲಿ ದಕ್ಷಿಣ ಲೆಬನಾನ್‌ನಲ್ಲಿನ ಹಲವಾರು ಭಯೋ ತ್ಪಾದಕ ಮೂಲಸೌಕರ್ಯಗಳನ್ನು ಗುರಿಯಾಗಿಸಿ ಕೊಂಡಿತ್ತು. ದಾಳಿಯ ಸಮಯದಲ್ಲಿ, ಹೆಜ್ಬೊಲ್ಲಾ ಪ್ರಧಾನ ಕಾರ್ಯದರ್ಶಿಯ ವೈಯಕ್ತಿಕ ಕಾರ್ಯ ದರ್ಶಿ ಮತ್ತು ಸೋದರಳಿಯ ಅಲಿ ಯೂಸೆಫ್ ಹರ್ಷಿ ಕೂಡ ಹತ್ಯೆಯಾಗಿದ್ದಾರೆ ಎಂದು ಅವರು ಹೇಳಿದರು. ನಯೀಮ್ ಖಾಸಿಮ್‌ಗೆ ಕಚೇರಿ ನಿರ್ವಹಣೆ ಮತ್ತು ಭದ್ರತೆಯನ್ನು ಒದಗಿಸುವಲ್ಲಿ ಹರ್ಷಿ ಪ್ರಮುಖ ಪಾತ್ರವಹಿಸುತ್ತಿದ್ದರು.

ಹೆಜ್ಬೊಲ್ಲಾ ವಿರುದ್ಧ ಇಸ್ರೇಲಿ ವಾಯುದಾಳಿ ನಡೆಸಿದ ನಂತರ ಇರಾನ್ ಬುಧವಾರ ಮತ್ತೆ ಹಾರ್ಮುಜ್ ಜಲಸಂಧಿಯನ್ನು ಮುಚ್ಚಿದೆ. ಏತನ್ಮಧ್ಯೆ, ಜಾಗತಿಕ ತೈಲ ಸಾಗಣೆಗೆ ಪ್ರಮುಖ ಜಲಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ಇರಾನ್ ತಕ್ಷಣ ಮತ್ತೆ ತೆರೆಯಬೇಕೆಂದು ಅಮೆರಿಕ ಒತ್ತಾಯಿಸಿದೆ. ಲೆಬನಾನ್ ಮೇಲಿನ ಇಸ್ರೇಲಿ ದಾಳಿಗೆ ಪ್ರತಿಕ್ರಿಯೆಯಾಗಿ ಇರಾನ್ ತೆಗೆದುಕೊಂಡ ಕ್ರಮಗಳು ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಕದನ ವಿರಾಮ ಒಪ್ಪಂದವನ್ನು ಉಳಿಸಿಕೊಳ್ಳಲು ಸಾಧ್ಯವಾಗುತ್ತದೆಯೇ ಎಂಬ ಬಗ್ಗೆ ಅನುಮಾನಗಳನ್ನು ಹುಟ್ಟುಹಾಕಿದೆ.

# ಲೆಬನಾನ್ ಮೇಲೆ ಇಸ್ರೇಲ್ ಭೀಕರ ಕ್ಷಿಪಣಿ ದಾಳಿ: ಮತ್ತೆ ಹೊರ್ಮುಜ್ ಮುಚ್ಚಿದ ಇರಾನ್

ವಾಷಿಂಗ್ಟನ್/ಟೆಹರಾನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಜೊತೆ ಕದನ ವಿರಾಮ ಘೋಷಿಸಿ 24 ಗಂಟೆ ಕಳೆಯುವ ಮುನ್ನವೇ ಲೆಬನಾನ್ ಮೇಲೆ ಇಸ್ರೇಲ್ ಭೀಕರ ದಾಳಿ ನಡೆಸಿದೆ. ಇದಕ್ಕೆ ಪ್ರತೀಕಾರವಾಗಿ ಇರಾನ್, ಹೊರ್ಮುಜ್ ಜಲಸಂಧಿಯನ್ನು ಮುಚ್ಚಿದೆ.

ಅಮೆರಿಕ ಮತ್ತು ಇರಾನ್ ನಡುವೆ ಎರಡು ವಾರಗಳ ಕದನ ವಿರಾಮವನ್ನು ಬುಧವಾರ ಘೋಷಿಸಲಾಗಿತ್ತು. ಈ ಒಪ್ಪಂದದ ಭಾಗವಾಗಿ ಜಾಗತಿಕ ಇಂಧನ ಪೂರೈಕೆಯನ್ನು ಸುಗಮಗೊಳಿಸಲು ಹೊರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಲು ಇರಾನ್ ಒಪ್ಪಿಕೊಂಡಿತ್ತು. ಆದರೆ, ಇಸ್ರೇಲ್ ಸೇನೆ ಕೇವಲ ಹತ್ತೇ ನಿಮಿಷಗಳಲ್ಲಿ ಲೆಬನಾನ್ ಮೇಲೆ 100ಕ್ಕೂ ಹೆಚ್ಚು ಕ್ಷಿಪಣಿ ದಾಳಿಗಳನ್ನು ನಡೆಸಿದೆ.

ಲೆಬನಾನ್ ಮತ್ತು ಹಿಜ್ಬುಲ್ಲಾ ವಿರುದ್ಧ ಇಸ್ರೇಲ್ ಸೇನಾ ಕಾರ್ಯಾಚರಣೆಯನ್ನು ಮುಂದುವರಿಸಿದೆ. ದಾಳಿಯಲ್ಲಿ 112 ಮಂದಿ ಮೃತಪಟ್ಟಿದ್ದು, 837 ಮಂದಿ ಗಾಯಗೊಂಡಿದ್ದಾರೆ. ಇದು ಇರಾನ್ನ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಇರಾನ್ ಜೊತೆಗಿನ ಅಮೆರಿಕದ ಕದನ ವಿರಾಮ ನಿರ್ಧಾರವನ್ನು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಬಹಿರಂಗವಾಗಿ ಬೆಂಬಲಿಸಿದ್ದಾರೆಯಾದರೂ, ಈ ಒಪ್ಪಂದವು ಲೆಬನಾನ್ ಅನ್ನು ಒಳಗೊಂಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

'ಇರಾನ್ ತಕ್ಷಣವೇ ಹೊರ್ಮುಜ್ ಜಲಸಂಧಿಯನ್ನು ಹಡಗುಗಳ ಸಂಚಾರಕ್ಕೆ ಮುಕ್ತಗೊಳಿಸುವುದು ಮತ್ತು ಅಮೆರಿಕ, ಇಸ್ರೇಲ್ ಮೇಲಿನ ದಾಳಿಗಳನ್ನು ನಿಲ್ಲಿಸುವ ಷರತ್ತಿನ ಆಧಾರದ ಮೇಲೆ, ಇರಾನ್ ಮೇಲಿನ ದಾಳಿಯನ್ನು ಎರಡು ವಾರಗಳ ಕಾಲ ನಿಲ್ಲಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಿರ್ಧಾರವನ್ನು ಬೆಂಬಲಿಸುತ್ತೇವೆ' ಎಂದೂ ನೆತನ್ಯಾಹು ತಿಳಿಸಿದ್ದಾರೆ.

'ಅಮೆರಿಕ, ಇಸ್ರೇಲ್, ಅರಬ್ ರಾಷ್ಟ್ರಗಳು ಸೇರಿದಂತೆ ಇಡೀ ಜಗತ್ತಿಗೆ ಇರಾನ್‌ನಿಂದ ಪರಮಾಣು, ಕ್ಷಿಪಣಿ ಮತ್ತು ಭಯೋತ್ಪಾದನೆಯ ಬೆದರಿಕೆ ಇಲ್ಲದಂತೆ ಮಾಡುವ ಅಮೆರಿಕದ ಪ್ರಯತ್ನವನ್ನೂ ಇಸ್ರೇಲ್ ಬೆಂಬಲಿಸುತ್ತದೆ. ಆದರೆ, ಇರಾನ್ ಬೆಂಬಲಿತ ಹಿಜ್ಬುಲ್ಲಾ ಸಂಘಟನೆಯ ಬೆದರಿಕೆಯನ್ನು ಹತ್ತಿಕ್ಕುವ ಉದ್ದೇಶದಿಂದ ದಕ್ಷಿಣ ಲೆಬನಾನ್‌ನಲ್ಲಿ ಆಕ್ರಮಣಕಾರಿ ಕಾರ್ಯಾಚರಣೆಯನ್ನು ಮುಂದುವರಿಸುತ್ತೇವೆ' ಎಂದು ನೆತನ್ಯಾಹು ಹೇಳಿದ್ದಾರೆ.

# ಮಹಿಳಾ ಮೀಸಲಾತಿ ಕಾಯ್ದೆ ತಿದ್ದುಪಡಿ ಬಗ್ಗೆ ಚರ್ಚೆಗೆ ಕಾಂಗ್ರೆಸ್ ಕಾರ್ಯಕಾರಿ ಸಭೆ




ನವದೆಹಲಿ: ಮಹಿಳಾ ಮೀಸಲಾತಿ ಕಾಯ್ದೆ ತಿದ್ದುಪಡಿ, ಸಂಭವನೀಯ ಕ್ಷೇತ್ರ ಪುನರ್ ವಿಂಗಡಣೆ ಹಾಗೂ ಪಶ್ಚಿಮ ಏಷ್ಯಾ ಸಂಘರ್ಷ ಸಂಬಂಧ ಚರ್ಚಿಸಲು ಕಾಂಗ್ರೆಸ್ ಶುಕ್ರವಾರ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

2029ರ ಲೋಕಸಭಾ ಚುನಾವಣೆಗೂ ಮುನ್ನವೇ ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೆ ತರಲು ಕೇಂದ್ರ ಸರ್ಕಾರ ಮುಂದಾಗಿದ್ದು, ಅದಕ್ಕಾಗಿ ಕಾಯ್ದೆಗೆ ತಿದ್ದುಪಡಿ ತರಲು ವಿಶೇಷ ಅಧಿವೇಶನ ಕರೆದಿದೆ. ಅದಕ್ಕೂ ಮುನ್ನ ಕಾಂಗ್ರೆಸ್ನ ಕಾರ್ಯಕಾರಿ ಸಮಿತಿ ಸಭೆ ಸೇರಲಿದೆ.

ನವದೆಹಲಿಯಲ್ಲಿರುವ ಪಕ್ಷದ ಪ್ರಧಾನ ಕಚೇರಿ 'ಇಂದಿರಾ ಭವನ'ದಲ್ಲಿ ಸಂಜೆ 3 ಗಂಟೆಗೆ ಸಭೆ ನಡೆಯಲಿದೆ.

ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ನಾಯಕಿ ಸೋನಿಯಾ ಗಾಂಧಿ, ಸಂಘಟನಾ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸೇರಿ ಪ್ರಮುಖ ನಾಯಕರು ಭಾಗಿಯಾಗಲಿದ್ದಾರೆ. ಈ ಎಲ್ಲಾ ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

# ಯುರೇನಿಯಂ ಒಪ್ಪಿಸದಿದ್ದರೆ ಇರಾನ್ ಮೇಲೆ ಮತ್ತೆ ದಾಳಿ ಮಾಡೇ ಮಾಡ್ತೀವಿ: ಅಮೆರಿಕ ವಾರ್ನ್

ವಾಷಿಂಗ್ಟನ್: ಇರಾನ್ ತನ್ನ ಬಳಿ ಇರುವ ಯುರೇನಿಯಂ ಅನ್ನು ಹಸ್ತಾಂತರಿಸಬೇಕು, ಇಲ್ಲದಿದ್ದರೆ ಅಮೆರಿಕ ಮತ್ತು ಇಸ್ರೇಲ್ನಿಂದ ಮರು ದಾಳಿ ಅಥವಾ ಭೂಸೇನೆ ಕಾರ್ಯಾಚರಣೆ ಎದುರಿಸಬೇಕಾಗುತ್ತದೆ ಎಂದು ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಎಚ್ಚರಿಸಿದ್ದಾರೆ.

ಇರಾನ್ ತನ್ನ ಸಮೃದ್ಧ ಯುರೇನಿಯಂ ಅನ್ನು ಹಸ್ತಾಂತರಿಸುವಂತೆ ಅಮೆರಿಕ ಒತ್ತಾಯಿಸಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಹೆಗ್ಸೆತ್, 'ಇರಾನ್ ಸ್ವಯಂಪ್ರೇರಿತವಾಗಿ ಯುರೇನಿಯಂ ಅನ್ನು ನೀಡಿದರೆ ಒಳ್ಳೆಯದು. ಇಲ್ಲದಿದ್ದರೆ ನಾವೇ ವಶಪಡಿಸಿಕೊಳ್ಳುತ್ತೇವೆ' ಎಂದಿದ್ದಾರೆ.

'ಕಳೆದ ವರ್ಷ ಇಸ್ರೇಲ್ನ 12 ದಿನಗಳ ಯುದ್ಧದ ಸಂದರ್ಭದಲ್ಲಿ ಅಮೆರಿಕ ನಡೆಸಿದ 'ಮಿಡ್ನೈಟ್ ಹ್ಯಾಮರ್' ಬಾಂಬ್ ದಾಳಿಯಂತಹ ಕಾರ್ಯಾಚರಣೆ ನಡೆಸುವ ಆಯ್ಕೆಯೂ ನಮ್ಮ ಮುಂದಿದೆ' ಎಂದೂ ಅವರು ಹೇಳಿದ್ದಾರೆ.

ಅಮೆರಿಕ, ಇಸ್ರೇಲ್ ಹಾಗೂ ಇರಾನ್ ಎರಡು ವಾರಗಳ ತಾತ್ಕಾಲಿಕ ಕದನ ವಿರಾಮಕ್ಕೆ ಬುಧವಾರ ಸಮ್ಮತಿಸಿದ್ದವು. ಇರಾನ್ ಯುರೇನಿಯಂ ಅನ್ನು ಹಸ್ತಾಂತರಿಸಬೇಕು ಎಂದು ಪೀಟ್ ಹೆಗ್ಸೆತ್ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಒತ್ತಾಯಿಸಿದ್ದಾರೆ.

'ಇರಾನ್ ತನ್ನ ಎಲ್ಲಾ ಸಮೃದ್ಧೀಕರಿಸಿದ ಯುರೇನಿಯಂ ಅನ್ನು ಒಪ್ಪಂದದ ಮೂಲಕ ದೇಶದಿಂದ ಹೊರಹಾಕಬೇಕು' ಎಂದು ನೆತನ್ಯಾಹು ಆಗ್ರಹಿಸಿದ್ದಾರೆ. ಕದನ ವಿರಾಮ ಒಪ್ಪಂದದ ಭಾಗವಾಗಿ ಇರಾನ್‌ಗೆ ಯುರೇನಿಯಂ ಸಮೃದ್ಧಗೊಳಿಸಲು ಅವಕಾಶವಿದೆಯೇ ಎಂಬ ಬಗ್ಗೆ ಗೊಂದಲ ಮುಂದುವರಿದಿದೆ.

ಅಸೋಸಿಯೇಟೆಡ್ ಪ್ರೆಸ್ ಪ್ರಕಾರ, ಪರ್ಷಿಯನ್ ಭಾಷೆಯ ಒಪ್ಪಂದದ ಪ್ರತಿಯಲ್ಲಿ 'ಸಮೃದ್ಧಗೊಳಿಸುವಿಕೆಗೆ ಅಂಗೀಕಾರ' ಎಂಬ ಅಂಶವಿದೆ. ಆದರೆ, ಇಂಗ್ಲಿಷ್ ಆವೃತ್ತಿಯಲ್ಲಿ ಅದು ಇಲ್ಲ. ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಾಖಿರ್ ಖಾಲೀಬಾಫ್ ಮಾತನಾಡಿ, ಅಮೆರಿಕ ಈ ಹಕ್ಕನ್ನು ನಿರಾಕರಿಸುವ ಮೂಲಕ ಒಪ್ಪಂದ ಉಲ್ಲಂಘಿಸಿದೆ ಎಂದು ದೂರಿದ್ದಾರೆ.

ಇದೇ ವೇಳೆ ಟ್ರಂಪ್ ತಮ್ಮ ಒಡೆತನದ ಸಾಮಾಜಿಕ ಮಾಧ್ಯಮ 'ಟ್ರೂಥ್ ಸೋಷಿಯಲ್'ನಲ್ಲಿ ಪೋಸ್ಟ್ ಮಾಡಿದ್ದು, 'ಇರಾನ್ನಲ್ಲಿ ಯಾವುದೇ ಯುರೇನಿಯಂ ಸಮೃದ್ಧಗೊಳಿಸುವಿಕೆ ನಡೆಯುವುದಿಲ್ಲ. ಅಮೆರಿಕವು ಇರಾನ್ ಜೊತೆ ಸೇರಿ ಭೂಮಿಯ ಆಳದಲ್ಲಿ ಹೂತುಹಾಕಲಾದ ಎಲ್ಲಾ ಅಣು ತ್ಯಾಜ್ಯವನ್ನು ಹೊರತೆಗೆಯಲಿದೆ' ಎಂದು ಹೇಳಿದ್ದಾರೆ.

ಭೂಸೇನೆ ಕಾರ್ಯಾಚರಣೆ ಭೀತಿ: ಟ್ರಂಪ್ ಅವರ ಕೋರಿಕೆಯ ಮೇರೆಗೆ ಅಮೆರಿಕದ ಭೂಸೇನೆ ಇರಾನ್ನೊಳಗೆ ನುಗ್ಗಿ ಯುರೇನಿಯಂ ದಾಸ್ತಾನುಗಳನ್ನು ವಶಪಡಿಸಿಕೊಳ್ಳುವ ವಿಶೇಷ ಕಾರ್ಯಾಚರಣೆಯ ಯೋಜನೆಯನ್ನು ಸಿದ್ಧಪಡಿಸಿದೆ ಎಂದು 'ವಾಷಿಂಗ್ಟನ್ ಪೋಸ್ಟ್' ವರದಿ ಮಾಡಿದೆ.

ಈ ಯೋಜನೆಯು ಅತ್ಯಂತ ಅಪಾಯಕಾರಿಯಾಗಿದ್ದು, ಸಾವಿರಾರು ಸೈನಿಕರು ರಹಸ್ಯವಾಗಿ ಇರಾನ್ ಒಳಗೆ ಪ್ರವೇಶಿಸಬೇಕಾಗುತ್ತದೆ. ಭೂಗತವಾಗಿರುವ ವಿಕಿರಣಶೀಲ ವಸ್ತುಗಳನ್ನು ಹೊರತೆಗೆಯಲು ರಹಸ್ಯ ರನ್‌ವೇ ನಿರ್ಮಿಸಿ ವಿಮಾನದ ಮೂಲಕ ಸಾಗಿಸಬೇಕಾಗುತ್ತದೆ. ತಜ್ಞರ ಪ್ರಕಾರ ಇದು ಅತ್ಯಂತ ಅವಾಸ್ತವಿಕ ಯೋಜನೆಯಾಗಿದ್ದು, ಪೂರ್ಣಗೊಳ್ಳಲು ವಾರಗಳ ಸಮಯ ಬೇಕಾಗಬಹುದು.

ಇಸ್ರೇಲ್ ಬುಧವಾರ ಲೆಬನಾನ್ ಮೇಲೆ ನಡೆಸಿದ ಭೀಕರ ದಾಳಿಯಿಂದಾಗಿ ಕದನ ವಿರಾಮ ಒಪ್ಪಂದವು ಅಳಿವಿನ ಅಂಚಿನಲ್ಲಿದೆ. ಈ ದಾಳಿಗೆ ಪ್ರತಿಕ್ರಿಯೆಯಾಗಿ ಇರಾನ್ ಮತ್ತೆ ಹೊರ್ಮುಜ್ ಜಲಸಂಧಿಯನ್ನು ಮುಚ್ಚಿದೆ ಎಂದು ವರದಿಯಾಗಿದೆ.

'ಕದನ ವಿರಾಮವೋ ಅಥವಾ ಇಸ್ರೇಲ್ ಮೂಲಕ ಯುದ್ಧವೋ ಎಂಬುದನ್ನು ಅಮೆರಿಕವೇ ನಿರ್ಧರಿಸಲಿ. ಎರಡೂ ಒಟ್ಟಿಗೆ ಸಾಧ್ಯವಿಲ್ಲ. ಈಗ ಚೆಂಡು ಅಮೆರಿಕದ ಅಂಗಳದಲ್ಲಿದೆ' ಎಂದು ಇರಾನ್ ವಿದೇಶಾಂಗ ಸಚಿವ ಸೈಯದ್ ಅಬ್ಬಾಸ್ ಅರಾಗ್ಚಿ ವಾಗ್ದಾಳಿ ನಡೆಸಿದ್ದಾರೆ.

# ಅಮೆರಿಕ ಸೇನೆ ಇರಾನ್ ಸುತ್ತಮುತ್ತಲೇ ಮೊಕ್ಕಾಂ ಹೂಡಿದೆ: ಡೊನಾಲ್ಡ್ ಟ್ರಂಪ್

ವಾಷಿಂಗ್ಟನ್: ಇರಾನ್ ಮತ್ತು ಅಮೆರಿಕ ನಡುವೆ ಎರಡು ವಾರಗಳ ಕದನ ವಿರಾಮ ಜಾರಿಯಲ್ಲಿದ್ದರೂ, ಒಪ್ಪಂದ ಅಂತಿಮವಾಗುವವರೆಗೂ ಇರಾನ್ ಸುತ್ತಮುತ್ತ ಸೇನಾಪಡೆಗಳ ನಿಯೋಜನೆ ಮುಂದುವರಿಯಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಈ ಕುರಿತು ಟ್ರಂಪ್ ತಮ್ಮ ಒಡೆತನದ ಸಾಮಾಜಿಕ ಮಾಧ್ಯಮ 'ಟ್ರೂಥ್ ಸೋಷಿಯಲ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

'ಉಭಯ ರಾಷ್ಟ್ರಗಳ ನಡುವೆ ಅಂತಿಮ ಒಪ್ಪಂದ ಏರ್ಪಡುವವರೆಗೆ ಅಮೆರಿಕದ ಪಡೆಗಳು ಇರಾನ್ ಒಳಗೆ ಮತ್ತು ಸುತ್ತಮುತ್ತಲೇ ಇರಲಿವೆ ಎಂದು ಹೇಳಿದ್ದಾರೆ. ಈ ಮೂಲಕ ಈಗಿನ ಕದನ ವಿರಾಮವು ತಾತ್ಕಾಲಿಕ ಮತ್ತು ಮುಂದಿನ ದಿನಗಳಲ್ಲಿ ಪರಿಸ್ಥಿತಿ ಬದಲಾಗಬಹುದು' ಎಂಬ ಸುಳಿವನ್ನು ಟ್ರಂಪ್ ನೀಡಿದ್ದಾರೆ.

'ಈಗಾಗಲೇ ಗಣನೀಯವಾಗಿ ದುರ್ಬಲಗೊಂಡಿರುವ ಶತ್ರುವನ್ನು ಸಂಹಾರ ಮಾಡಲು ಮತ್ತು ನಾಶಪಡಿಸಲು ಅಗತ್ಯವಿರುವ ಹೆಚ್ಚುವರಿ ಮದ್ದುಗುಂಡು, ಶಸ್ತ್ರಾಸ್ತ್ರ ಹಾಗೂ ಇತರ ಯುದ್ಧೋಪಕರಣಗಳೊಂದಿಗೆ ನಮ್ಮ ಹಡಗುಗಳು, ವಿಮಾನಗಳು ಮತ್ತು ಸೇನಾ ಸಿಬ್ಬಂದಿ ಇರಾನ್ ಒಳಗೆ ಮತ್ತು ಸುತ್ತಮುತ್ತಲೇ ಮೊಕ್ಕಾಂ ಹೂಡಿದ್ದಾರೆ. 'ನಿಜವಾದ ಒಪ್ಪಂದ'ವು ಸಂಪೂರ್ಣವಾಗಿ ಜಾರಿಯಾಗುವವರೆಗೂ ಅವರು ಅಲ್ಲಿಯೇ ಇರಲಿದ್ದಾರೆ' ಎಂದಿದ್ದಾರೆ.

ಅಮೆರಿಕ, ಇಸ್ರೇಲ್ ಹಾಗೂ ಇರಾನ್ ಎರಡು ವಾರಗಳ ತಾತ್ಕಾಲಿಕ ಕದನ ವಿರಾಮಕ್ಕೆ ಬುಧವಾರ ಸಮ್ಮತಿಸಿವೆ. ಇದರಿಂದಾಗಿ ಕಳೆದ 40 ದಿನಗಳಿಂದ ನಡೆಯುತ್ತಿದ್ದ ಯುದ್ಧದಿಂದ ನಲುಗಿದ್ದ ಪಶ್ಚಿಮ ಏಷ್ಯಾ ಸೇರಿ ವಿಶ್ವವೇ ಸದ್ಯದ ಮಟ್ಟಿಗೆ ನಿಟ್ಟುಸಿರು ಬಿಡುವಂತಾಗಿದೆ.

## ಪಶ್ಚಿಮ ಬಂಗಾಳ ಚುನಾವಣೆ, ಜನತೆಗೆ 6 ಭರವಸೆಗಳ ಕೊಟ್ಟ ಪ್ರಧಾನಿ ಮೋದಿ

ಕೋಲ್ಕತ್ತಾ, ಏಪ್ರಿಲ್ 09: ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಜನತೆಗೆ ಪ್ರಧಾನಿ ನರೇಂದ್ರ ಮೋದಿ 6 ಭರವಸೆಗಳನ್ನು ಕೊಟ್ಟಿದ್ದಾರೆ. ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಭ್ರಷ್ಟರನ್ನು ಜೈಲಿಗೆ ಕಳುಹಿಸಲಾಗುತ್ತದೆ ಮತ್ತು ಎಲ್ಲಾ ಹಳೆಯ ಹಗರಣದ ಕಡತಗಳನ್ನು ಮತ್ತೆ ತೆರೆಯಲಾಗುತ್ತದೆ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಟಿಎಂಸಿ ಹರಡಿರುವ ಭಯ ಮತ್ತು ಭಯೋತ್ಪಾದನೆಯನ್ನು ಬಿಜೆಪಿ ಕೊನೆಗೊಳಿಸುತ್ತದೆ ಮತ್ತು ರಾಜ್ಯದಲ್ಲಿ ಕಾನೂನಿನ ಮೇಲಿನ ನಂಬಿಕೆಯನ್ನು ಪುನಃಸ್ಥಾಪಿಸುತ್ತದೆ.

ಟಿಎಂಸಿ ಆಳ್ವಿಕೆಯಲ್ಲಿ ಮಹಿಳೆಯರಿಗೆ ಆಗಿರುವ ಪ್ರತಿಯೊಂದು ಹಗರಣ, ಭ್ರಷ್ಟಾಚಾರ ಮತ್ತು ಅನ್ಯಾಯದ ಹಳೆಯ ಕಡತಗಳನ್ನು ಮತ್ತೆ ತೆರೆಯಲಾಗುವುದು. ಸಾರ್ವಜನಿಕ ಹಣವನ್ನು ಲೂಟಿ ಮಾಡುವವರನ್ನು ಯಾವುದೇ ಬೆಲೆಗೆ ಬಿಡುವುದಿಲ್ಲ. ಮೋದಿ ಭ್ರಷ್ಟಾಚಾರವನ್ನು ಸಹಿಸುವುದಿಲ್ಲ ಮತ್ತು ಪ್ರತಿಯೊಬ್ಬ ಭ್ರಷ್ಟ ವ್ಯಕ್ತಿಯನ್ನು ಜೈಲಿಗೆ ಕಳುಹಿಸುತ್ತಾರೆ. ಅಕ್ರಮ ನುಸುಳುಕೋರರನ್ನು ಭಾರತದ ನೆಲದಲ್ಲಿ ಉಳಿಯಲು ಬಿಡುವುದಿಲ್ಲ. ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.ಮೋದಿ ಮತ್ತು ಬಿಜೆಪಿ ಪ್ರತಿಯೊಬ್ಬ ಸರ್ಕಾರಿ ನೌಕರರೊಂದಿಗೆ ನಿಲ್ಲುತ್ತದೆ. ಬಂಗಾಳದಲ್ಲಿ ಬಿಜೆಪಿ ಸರ್ಕಾರ ರಚನೆಯಾದ ತಕ್ಷಣ 7 ನೇ ವೇತನ ಆಯೋಗವನ್ನು ಜಾರಿಗೆ ತರಲಾಗುವುದು ಎಂದು ಭರವಸೆ ನೀಡಿದ್ದಾರೆ.

## ಕದನ ವಿರಾಮ ಮಧ್ಯಸ್ಥಿಕೆ; ಪಾಕಿಸ್ತಾನ ನಂಬಿಕೆಗೆ ಅರ್ಹವಲ್ಲ ಅಮೆರಿಕ ಒಪ್ಪಿಕೊಂಡಿದ್ದೇ ಆಶ್ಚರ್ಯ ಎಂದ ಇಸ್ರೇಲ್

ನವದೆಹಲಿ: ಅಮೆರಿಕ ಮತ್ತು ಇರಾನ್ ನಡುವೆ ಕದನ ವಿರಾಮಕ್ಕೆ ಮಧ್ಯಸ್ಥಿಕೆ ವಹಿಸಿದ ಪಾಕಿಸ್ತಾನದ ವಿಶ್ವಾಸಾರ್ಹತೆಯನ್ನು ಪ್ರಶ್ನಿಸಿದ ಇಸ್ರೇಲ್ ರಾಯಭಾರಿ, ಅಮೆರಿಕದ ನಡೆ ಆಶ್ಚರ್ಯ ತಂದಿದೆ ಎಂದು ಹೇಳಿದ್ದಾರೆ.

ಭಾರತಕ್ಕೆ ಇಸ್ರೇಲ್ ರಾಯಭಾರಿಯಾಗಿರುವ ರೂವೆಲ್ ಅಜರ್ ಅವರು, ಇಸ್ರೇಲ್ ಯಾವತ್ತೂ ಪಾಕಿಸ್ತಾನವನ್ನು ಒಂದು ವಿಶ್ವಾಸಾರ್ಹ ದೇಶ ಎಂದು ನಂಬುವುದಿಲ್ಲ ಎಂದು ಹೇಳಿದ್ದಾರೆ.

"ನಾವು ಪಾಕಿಸ್ತಾನವನ್ನು ವಿಶ್ವಾಸಾರ್ಹ ದೇಶ ಎಂದು ನೋಡುವುದಿಲ್ಲ" ಎಂದು ಅಜರ್ ಅವರು ANIಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.

ಅಮೆರಿಕ, ಪಾಕಿಸ್ತಾನದ ಮಧ್ಯಸ್ಥಿಕೆಯನ್ನು ಒಪ್ಪಿಕೊಳ್ಳಲು ತನ್ನದೇ ಆದ ಕಾರಣಗಳನ್ನು ಹೊಂದಿರಬಹುದು. ಆದರೆ, ಇಸ್ರೇಲ್ ಮಾತ್ರ, ಪಾಕಿಸ್ತಾನವನ್ನು ಯಾವತ್ತೂ ನಂಬಿಕೆಗೆ ಯೋಗ್ಯವಾದ ದೇಶ ಎಂದು ನಂಬುವುದಿಲ್ಲ ಎಂದು ರೂವೆಲ್ ಅಜರ್ ಹೇಳಿದ್ದಾರೆ.

ಈ ಹಿಂದೆಯೂ ಅಮೆರಿಕ, ಹಮಾಸ್ ಸಂಬಂಧಿತ ಗುರಿಗಳನ್ನು ಸಾಧಿಸಲು "ಕತಾರ್ ಮತ್ತು ಟರ್ಕಿಯಂತಹ ಸಮಸ್ಯಾತ್ಮಕ ದೇಶಗಳೊಂದಿಗೆ" ಹಿಂದೆ ಕೆಲಸ ಮಾಡಿದೆ ಎಂದು ಇಸ್ರೇಲ್ ರಾಯಭಾರಿ ಹೇಳಿದ್ದಾರೆ.

## ಎಪಿಎಲ್ ಕಾರ್ಡ್ ತೆಗೆದು ಅವರಿಗೆ ಬಿಪಿಎಲ್ ಕಾರ್ಡ್ ಕೊಡುತ್ತೇವೆ: ಸಚಿವ ಕೆ.ಹೆಚ್. ಮುನಿಯಪ್ಪ

ಬೆಂಗಳೂರು: ಸುಮಾರು 14 ಲಕ್ಷ ಮಂದಿ ಎಪಿಎಲ್‌ನವರು ಬಿಪಿಎಲ್ ಕಾರ್ಡ್ ಹೊಂದಿದ್ದಾರೆ. ಅದನ್ನು ನಾವು ಬಿಪಿಎಲ್‌ಗೆ ತೊಂದರೆ ಆಗದಂತೆ ಪರಿಷ್ಕರಣೆ ಮಾಡಿ ತೆಗೆಯಬೇಕಿದ್ದು, ಹಂತಹಂತ ವಾಗಿ ತೆಗೆಯಲಿದ್ದೇವೆ ಎಂದು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದರು.



ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರಾಜ್ಯದಲ್ಲಿ ನಾಲ್ಕು ಲಕ್ಷಕ್ಕೂ ಹೆಚ್ಚು ಅನಧಿಕೃತ ಬಿಪಿಎಲ್ ಕಾರ್ಡ್‌ಗಳಿವೆ ಎಂಬ ವರದಿ ಕೊಟ್ಟ ವಿಚಾರವಾಗಿ ಪ್ರತಿಕ್ರಿಯಿಸಿದರು.

ಗೈಡ್‌ಲೈನ್ಸ್ ಮೀರಿ ಎಪಿಎಲ್ನವರು 7 ಲಕ್ಷ ಕಾರ್ಡ್ ಬಿಪಿಎಲ್ ಕಾರ್ಡ್ ಮಾಡಿಸಿಕೊಂಡಿದ್ದಾರೆ ಅಂತ ವರದಿ ಇದೆ. ಅದನ್ನು ಪರಿಷ್ಕರಿಸುತ್ತಿದ್ದೇವೆ.

ಸುಮಾರು 14 ಲಕ್ಷ ಮಂದಿ ಎಪಿಎಲ್‌ನಲ್ಲಿ ಇರಬೇಕಾದವರು ಬಿಪಿಎಲ್ ಕಾರ್ಡ್ ಹೊಂದಿ ದ್ದಾರೆ. ಹಂತ ಹಂತವಾಗಿ ಅದನ್ನು ತೆಗೆಯುತ್ತೇವೆ ಎಂದರು.

ನಿಜವಾಗಲೂ ಬಿಪಿಎಲ್ ಕಾರ್ಡ್‌ಗೆ ಯಾರು ಅರ್ಹರಿದ್ದಾರೋ ಅವರ ಹೆಸರು ಡಿಲೀಟ್ ಆಗಲ್ಲ. ಡಿಲೀಟ್ ಆಗಿದ್ದರೆ, ತಹಶೀಲ್ದಾರ್‌ಗೆ ಅರ್ಜಿ ಹಾಕಬೇಕಿದ್ದು, ಮತ್ತೆ ಬಿಪಿಎಲ್ ಕಾರ್ಡ್ ಕೊಡುತ್ತೇವೆ. ಎಪಿಎಲ್ ಕಾರ್ಡ್ ಇರುವವರಿಗೆ ಸದ್ಯಕ್ಕೆ ನಾವೇನೂ ಮಾಡ್ತಾ ಇಲ್ಲ. ಬಿಪಿಎಲ್‌ನಲ್ಲಿ ಸಾಕಷ್ಟು ಜನ ಎಪಿಎಲ್‌ನವರು ಇದ್ದಾರೆ. ಬಿಪಿಎಲ್ ಕಾರ್ಡ್ ಮಿಸ್ ಆಗಿದ್ರೆ ಅಂಥವರಿಗೆ ಕೊಡುತ್ತಿದ್ದೇವೆ. ಬಿಪಿಎಲ್‌ಗೆ ಯಾರೂ ಅರ್ಹರಲ್ಲವೋ ಅವರು ಎಪಿಎಲ್‌ಗೆ ಹೋಗ್ತಾರೆ ಎಂದು ಸ್ಪಷ್ಟಪಡಿಸಿದರು.

# ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ National Academic Depository (NAD)- DigiLocker ಮೂಲಕ ಫಲಿತಾಂಶದ ದಿನವೇ ಅಂಕಪಟ್ಟಿ

**ಬೆಂಗಳೂರು** : 2025-26ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಅಂಕಪಟ್ಟಿಯನ್ನು ಫಲಿತಾಂಶ ಪ್ರಕಟವಾದ ದಿನವೇ National Academic Depository (NAD) – DigiLocker ಮೂಲಕ ಲಭ್ಯಗೊಳಿಸಲು ಸರ್ಕಾರ ನಿರ್ಧರಿಸಿದೆ.

ಈ ಮೂಲಕ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ಸುಲಭವಾಗಿ, ಸುರಕ್ಷಿತವಾಗಿ ಮತ್ತು ಸಮಯಕ್ಕೆ ಸರಿಯಾಗಿ ದೊರೆಯುವ ವ್ಯವಸ್ಥೆ ಜಾರಿಗೆ ಬಂದಿದೆ.

ಈ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಭೌತಿಕ ಅಂಕಪಟ್ಟಿಯ ಪ್ರತಿಯನ್ನು ನೀಡಲು ಸಹ ಸರ್ಕಾರ ಅನುಮತಿ ನೀಡಿದೆ. ಆದರೆ 2026-27ನೇ ಶೈಕ್ಷಣಿಕ ಸಾಲಿನಿಂದ ಭೌತಿಕ ಪ್ರತಿಗಳನ್ನು ನೀಡುವ ಪದ್ಧತಿಯನ್ನು ಕೈಬಿಡಲಾಗುತ್ತಿದ್ದು, APAAR (Automated Permanent Academic Account Registry) ಐಡಿ ಯೊಂದಿಗೆ ಕಡ್ಡಾಯವಾಗಿ NAD-DigiLocker ನಲ್ಲಿ ಅಂಕಪಟ್ಟಿ ಅಳವಡಿಸುವಂತೆ ಸೂಚಿಸಲಾಗಿದೆ.

NAD-DigiLocker ನಲ್ಲಿ ಲಭ್ಯವಾಗುವ ಅಂಕಪಟ್ಟಿಯನ್ನು ರಾಜ್ಯದ ಒಳಗೆ ಮತ್ತು ಹೊರಗೆ ಉನ್ನತ ವ್ಯಾಸಂಗಕ್ಕಾಗಿ ಅಧಿಕೃತ ದಾಖಲೆ ಎಂದು ಪರಿಗಣಿಸಲಾಗುವುದು. ನೇಮಕಾತಿ ಪ್ರಕ್ರಿಯೆಗಳಲ್ಲಿ ವಿವಿಧ ಸಂಸ್ಥೆಗಳು ಮತ್ತು ಪ್ರಾಧಿಕಾರಗಳು ಓಂಆ-ಆುಐಎಫಿಇಜಡಿ ನಲ್ಲಿನ ಅಂಕಪಟ್ಟಿ ಹಾಗೂ ಪ್ರಮಾಣಪತ್ರಗಳನ್ನು ದೃಢೀಕೃತ ದಾಖಲೆಗಳೆಂದು ಪರಿಗಣಿಸುವಂತೆ ಸರ್ಕಾರ ನಿರ್ದೇಶನ ನೀಡಿದೆ.

ಈ ಕ್ರಮದಿಂದ ವಿದ್ಯಾರ್ಥಿಗಳಿಗೆ ತ್ವರಿತ ಸೇವೆ ದೊರೆಯುವುದರ ಜೊತೆಗೆ ಪಾರದರ್ಶಕತೆ ಹೆಚ್ಚಳ, ಭ್ರಷ್ಟಾಚಾರ ಕಡಿತ ಮತ್ತು ದಾಖಲೆಗಳ ಸುರಕ್ಷಿತ ಸಂಗ್ರಹಣೆ ಸಾಧ್ಯವಾಗಲಿದೆ.

National Academic Depository (NAD)- DigiLocker ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ. ಇದರ ಉದ್ದೇಶ ವಿದ್ಯಾರ್ಥಿಗಳ ಅಕಾಡೆಮಿಕ್ ದಾಖಲೆಗಳನು- ಅಂಕಪಟ್ಟಿ, ಪ್ರಮಾಣಪತ್ರ, ಪದವಿ, ಡಿಪ್ಲೊಮಾ- ಸುರಕ್ಷಿತವಾಗಿ ಡಿಜಿಟಲ್ ರೂಪದಲ್ಲಿ ಸಂಗ್ರಹಿಸಿ, ಯಾವಾಗ ಬೇಕಾದರೂ ಲಭ್ಯವಾಗುವಂತೆ ಮಾಡುವುದು.

ಓಂಆ ಶಿಕ್ಷಣ ಇಲಾಖೆಯಡಿ ಸ್ಥಾಪಿಸಲಾದ ಡಿಜಿಟಲ್ ಸಂಗ್ರಹಣಾ ವ್ಯವಸ್ಥೆಯಾಗಿದ್ದು, DigiLocker ಇಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದಡಿ ಕಾರ್ಯನಿರ್ವಹಿಸುವ ಡಿಜಿಟಲ್ ದಾಖಲೆ ಸಂಗ್ರಹಣಾ ವೇದಿಕೆ. ಈ ಎರಡನ್ನು ಸಂಯೋಜಿಸುವ ಮೂಲಕ ವಿದ್ಯಾರ್ಥಿಗಳ ದಾಖಲೆಗಳನ್ನು ಸುರಕ್ಷಿತವಾಗಿ ಸಂಗ್ರಹಿಸಿ, ದೃಢೀಕರಿಸಿ, ಸುಲಭವಾಗಿ ಲಭ್ಯಗೊಳಿಸಲಾಗುತ್ತದೆ.

ಈ ವ್ಯವಸ್ಥೆಯ ಪ್ರಮುಖ ವೈಶಿಷ್ಟ್ಯವೆಂದರೆ 24x7 ಲಭ್ಯತೆ. ವಿದ್ಯಾರ್ಥಿಗಳು ಯಾವಾಗ ಬೇಕಾದರೂ ತಮ್ಮ ಅಂಕಪಟ್ಟಿ ಮತ್ತು ಪ್ರಮಾಣಪತ್ರಗಳನ್ನು ಪಡೆಯಬಹುದು. NAD-DigiLocker ನಲ್ಲಿರುವ ದಾಖಲೆಗಳನ್ನು ಸರ್ಕಾರ ಅಧಿಕೃತ ದಾಖಲೆಗಳೆಂದು ಪರಿಗಣಿಸುತ್ತದೆ. ದಾಖಲೆಗಳು ಡಿಜಿಟಲ್ ಎನ್ಕ್ರಿಪ್ಷನ್ ಮೂಲಕ ಸುರಕ್ಷಿತವಾಗಿರುತ್ತವೆ. ಫಲಿತಾಂಶ ಪ್ರಕಟವಾದ ದಿನವೇ ಅಂಕಪಟ್ಟಿ ಲಭ್ಯವಾಗುತ್ತದೆ. APAAR (Automated Permanent Academic Account Registry) ಐಡಿ ಮೂಲಕ ವಿದ್ಯಾರ್ಥಿಗಳ ದಾಖಲೆಗಳನ್ನು ಕಡ್ಡಾಯವಾಗಿ ಲಿಂಕ್ ಮಾಡಲಾಗುತ್ತದೆ.

ವಿದ್ಯಾರ್ಥಿಗಳಿಗೆ ಇದರ ಲಾಭಗಳು ಅನೇಕ. ಫಲಿತಾಂಶದ ದಿನವೇ ಅಂಕಪಟ್ಟಿ ಲಭ್ಯವಾಗುವುದು, ಮೊಬೈಲ್ ಅಥವಾ ಕಂಪ್ಯೂಟರ್ ಮೂಲಕ ಸುಲಭವಾಗಿ ಪ್ರವೇಶಿಸುವ ಅವಕಾಶ, ದೇಶದ ಒಳಗೆ ಮತ್ತು ಹೊರಗೆ ಉನ್ನತ ಶಿಕ್ಷಣಕ್ಕಾಗಿ ಓಂಆ-ಆುಐಎಫಿಇಜಡಿ ನಲ್ಲಿನ ದಾಖಲೆಗಳಿಗೆ ಮಾನ್ಯತೆ, ಉದ್ಯೋಗ ನೇಮಕಾತಿ ಪ್ರಕ್ರಿಯೆಯಲ್ಲಿ ದೃಢೀಕೃತ ದಾಖಲೆಗಳೆಂದು ಪರಿಗಣಿಸುವ ವ್ಯವಸ್ಥೆ—all combine to make this initiative transformative.

ಸಂಸ್ಥೆಗಳಿಗೂ ಇದು ಪಾರದರ್ಶಕತೆ, ಸಮಯ ಉಳಿತಾಯ ಮತ್ತು ಸುರಕ್ಷಿತ ಸಂಗ್ರಹಣೆಯ ಲಾಭಗಳನ್ನು ಒದಗಿಸುತ್ತದೆ. ಭೌತಿಕ ಪ್ರತಿಗಳನ್ನು ನೀಡುವ ಅಗತ್ಯವಿಲ್ಲದೆ, ದಾಖಲೆಗಳನ್ನು ದೀರ್ಘಾವಧಿಗೆ ಸುರಕ್ಷಿತವಾಗಿ ಸಂಗ್ರಹಿಸಬಹುದು.

National Academic Depository (NAD) – DigiLocker ವಿದ್ಯಾರ್ಥಿಗಳ ಅಕಾಡೆಮಿಕ್ ದಾಖಲೆಗಳನ್ನು ಡಿಜಿಟಲ್ ರೂಪದಲ್ಲಿ ಸುರಕ್ಷಿತವಾಗಿ ಸಂಗ್ರಹಿಸಿ, ತ್ವರಿತವಾಗಿ ಲಭ್ಯಗೊಳಿಸುವ ವ್ಯವಸ್ಥೆ. ಇದು ವಿದ್ಯಾರ್ಥಿಗಳ ಭವಿಷ್ಯ ವ್ಯಾಸಂಗ ಮತ್ತು ಉದ್ಯೋಗಾವಕಾಶಗಳಿಗೆ ಅಧಿಕೃತ ದಾಖಲೆಗಳನ್ನು ಸುಲಭವಾಗಿ ಒದಗಿಸುವ ಮಹತ್ವದ ಹೆಜ್ಜೆಯಾಗಿದೆ.

# ಮಲ್ಲಿಕಾರ್ಜುನ ಖರ್ಗೆ ಸಮಚಿತ್ತ ರಾಜಕಾರಣಿ: ಸಚಿವ ಡಾ.ಶರಣಪ್ರಕಾಶ ಪಾಟೀಲ

**ಕಲಬುರಗಿ** : ಎಐಸಿಸಿ ಅಧ್ಯಕ್ಷರೂ, ದೇಶದ ಅನುಭವಿ ಹಿರಿಯ ರಾಜಕಾರಣಿಗಳಾದ ಮಲ್ಲಿಕಾರ್ಜುನ ಖರ್ಗೆ ಅವರಾಗಲಿ, ಪ್ರಿಯಾಂಕ್ ಖರ್ಗೆ ಅವರಾಗಲಿ ಅಪರಾಧ ಕೆಲಸ ಮಾಡಿಲ್ಲ, ಸಮಾಜವನ್ನು ಕಟ್ಟುವ ಕೆಲಸ ಮಾಡಿದ್ದಾರೆ. ಹೊರತು ಒಡೆಯುವ ಕೆಲಸ ಎಂದೂ ಮಾಡಿಲ್ಲ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಹೇಳಿದರು.



ಕಲಬರಗಿ ನಗರದ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಲ್ಲಿಕಾರ್ಜುನ ಖರ್ಗೆ ಅವರು ಇಲ್ಲಿಯವರೆಗೂ ವೈಯಕ್ತಿಕವಾಗಿ ಯಾರನ್ನೂ ಟೀಕೆ ಮಾಡಿಲ್ಲ, ಸಂಘಟನೆ ಬಗ್ಗೆ ಹೇಳಿದ್ದಾರೆ ಎಂದರು.

ವಿಷ ಸರ್ಪವನ್ನು ಹೊಡಿಬೇಕು ಎಂದರೆ ಸೈದ್ಧಾಂತಿಕವಾಗಿ ಸಂಘಟನೆಯ ಸಿದ್ಧಾಂತವನ್ನು ವಿರೋಧಿಸಬೇಕನ್ನುವ ಅರ್ಥವಿದೆ. ಯಾರನ್ನು ಯಾರೂ ಸಹ ಹೊಡೆಯುವ ಹಕ್ಕಿಲ್ಲ, ಸಮಾಜಕ್ಕೆ ಮಾರಕವಾದ ಸಿದ್ಧಾಂತಗಳನ್ನು ಸೂಕ್ಷ್ಮವಾಗಿ ಗ್ರಹಿಸಿ ಹೊಡೆದಾಗಬೇಕೆನ್ನುವ ಅರ್ಥದಲ್ಲಿ ಖರ್ಗೆ ಅವರು ಹೇಳಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಮಲ್ಲಿಕಾರ್ಜುನ ಖರ್ಗೆ ಅವರು ಸಾರ್ವಜನಿಕ ಜೀವನದಲ್ಲಿ ಅತ್ಯಂತ ಪಾರದರ್ಶಕ ವ್ಯಕ್ತಿತ್ವ ಹೊಂದಿದವರು. ಮೇಲಾಗಿ ಎಲ್ಲರನ್ನೂ ಪ್ರೀತಿಯಿಂದ ಕಾಣುವ ನಾಯಕರಾಗಿದ್ದಾರೆ. ಅವರ ಆರು ದಶಕಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಖರ್ಗೆ ಸಿದ್ಧಾಂತದ ಆಧಾರದ ಮೇಲೆ ರಾಜಕೀಯ ಮಾಡಿದ್ದಾರೆ. ಸಮಾಜದಲ್ಲಿ ಕಲಹ ಉಂಟುಮಾಡುವ ಸ್ಥಿತಿ ಸೃಷ್ಟಿಸಿಲ್ಲ ಎಂದು ಹೇಳಿದರು.

ಗುಜುರಾತಿಗಳ ಹೇಳಿಕೆಯನ್ನು ಬಿಜೆಪಿ ಅವರು ಜನರಲ್ಲಿ ತಪ್ಪು ಅರ್ಥೈಸುತ್ತಿದ್ದಾರೆ. ರಾಜಕಾರಣದಲ್ಲಿ ಆಡು ಭಾಷೆ ಸಹಜ ಆ ರೀತಿಯಲ್ಲಿ ಆಡಿರುವ ಹೇಳಿಕೆಯನ್ನು ಬಿಜೆಪಿಗರು ದೊಡ್ಡ ತಪ್ಪಾಗಿ ಬಿಂಬಿಸಲು ಹೊರಟಿದ್ದಾರೆ ಎಂದು ಡಾ. ಪಾಟೀಲ್ ತಿಳಿಸಿದರು.

ಛಲವಾದಿ ನಾರಾಯಣಸ್ವಾಮಿ ಹಾಗೂ ಬಿಜೆಪಿಗರು ಮನಬಂದಂತೆ ಹೇಳಿಕೆ ನೀಡುವುದನ್ನು ನಾನು ಖಂಡಿಸುತ್ತೇನೆ. ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಯನ್ನು ಟೀಕಿಸುವ ಭರದಲ್ಲಿ ರಾಜಕೀಯ ಪ್ರೇರಿತ ಆಪಾದನೆ ಮಾಡುವುದು ಸರಿಯಲ್ಲ. ಹಿಂದೆ ಬಿಜೆಪಿಯವರು ಹಾಗೂ ನರೇಂದ್ರ ಮೋದಿ ಅವರು ಸಹ ಕಾಂಗ್ರೆಸ್ ಪಕ್ಷವನ್ನು ಭಯೋತ್ಪಾದಕ ಸಂಘಟನೆ ಎಂದಿದ್ದರು. ಬಿಜೆಪಿಗರು ದಿನ ಬೆಳಗಾದರೆ ನೆಹರೂ, ಇಂದಿರಾಗಾಂಧಿ ಅವರನ್ನು ತೇಜೋವಧೆ ಮಾಡುತ್ತಾರೆ. ಬಿಜೆಪಿಗರು ಬೇರೆಯವರ ಬಗ್ಗೆ ಯಾವಾಗಲೂ ಹಗುರವಾಗಿಯೇ ಮಾತಾಡುತ್ತಾರೆ. ಅದೇ ಬಿಜೆಪಿ ಸಂಸ್ಕೃತಿ.

**–ಡಾ.ಶರಣಪ್ರಕಾಶ ಪಾಟೀಲ, ಸಚಿವರು**

# ಆರ್ ಎಸ್ ಎಸ್ ನೋಂದಣಿ ಮಾಡಿಕೊಂಡಿದ್ದರೆ ತನ್ನ ಲೆಟರ್ ಹೆಡ್‌ನಲ್ಲೇ ದೂರು ದಾಖಲಿಸಲಿ- ಸಚಿವ ಪ್ರಿಯಾಂಕ್ ಖರ್ಗೆ ಸವಾಲ್

**ಕಲ್ಬುರ್ಗಿ** : ಹಿರಿಯ ನಾಯಕ ಹಾಗೂ ರಾಜ್ಯ ಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ " ವಿಷಸರ್ಪ ಕೊಲ್ಲಿ" ಹೇಳಿಕೆಯ ವಿರುದ್ಧ ದೂರು ದಾಖಲಾಗಿರುವ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್



ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, "ದೂರು ದಾಖಲಿಸಲಿಬಿಡಿ. ಆರ್ ಎಸ್ ಎಸ್ ಯಾಕೆ ದೂರು ದಾಖಲಿಸಿಲ್ಲ. ಅವರು ನೊಂದಣಿ ಮಾಡಿಸಿಕೊಂಡಿದ್ದರೆ ಅವರ ಲೆಟರ್ ಹೆಡ್ ನಲ್ಲಿ ದೂರು ದಾಖಲಿಸಲಿ. ತಮಗೆ ಯಾರ ಸಹಾಯ ಬೇಡ ಎಂದು ಸ್ವತಃ ಮೋಹನ್ ಭಾಗವತ್ ಹೇಳಿದ್ದಾರೆ, ಅವರೇ ದಾಖಲಿಸಲಿ. ನನ್ನ ಮೇಲೂ ಎರಡು ಕೇಸುಗಳಿವೆ ಎಂದು ಸವಾಲ್ ಹಾಕಿದರು.

ತಮ್ಮನ್ನು ಭೇಟಿ ಮಾಡಿದ ಮಾಧ್ಯಮದ ಪತ್ರಿನಿಧಿಗಳೊಂದಿಗೆ ಕಲಬುರಗಿ ಯಲ್ಲಿ ಮಾತನಾಡುತ್ತಿದ್ದ ಅವರು, ನಮ್ಮದು ಸರ್ವರಿಗೂ ಸಮಪಾಲು, ಸಮಬಾಳು ಎನ್ನುವ ತತ್ವ. ಬುದ್ದ ಬಸವ ಅವರ ತತ್ವಗಳನ್ನು ನಾವು ಹೊಂದಿದ್ದೇವೆ. ಕೆಲವೊಬ್ಬರು ಈ ತತ್ವಗಳ ಹಾಗೂ ಸಂವಿಧಾನ ವಿರೋಧಿ ಸಿದ್ಧಾಂತ ಹೊಂದಿರುತ್ತಾರೆ ಇದು ಸರಿಯಲ್ಲ ಎನ್ನುವುದು ನಮ್ಮ ವೈಯಕ್ತಿಕ ಅಭಿಪ್ರಾಯ. ಅಷ್ಟಕ್ಕೂ ಹೇಳಿದ್ದೇನು? ವಿಷಸರ್ಪಗಳನ್ನು ಹೊಡೆಯಿರಿ ಎಂದಿದ್ದಾರೆ. ವಿಷ ಸರ್ಪ ಎದುರಾದರೆ ಯಾರಾದರೂ ಹಾಲು ಎರೆಯಲು ಆಗುತ್ತದೆಯೇ? ಎಂದು ಪ್ರಶ್ನಿಸಿದರು.

ಆಸ್ಸಾಂ ಸಿಎಂ ಹೇಮಂತ ಬಿಸ್ವಾ ಶರ್ಮಾ ಅವರು ಖರ್ಗೆ ಹಾಗೂ ರಾಹುಲ್ ಗಾಂಧಿ ಬಗ್ಗೆ ಕೇವಲವಾಗಿ ಮಾತನಾಡಿರುವ ಕುರಿತು ಕೇಳಿದಾಗ, ಸೋಲಿನಭೀತಿನಲ್ಲಿ ಅವರು ಹಾಗೆ ಮಾತನಾಡುತ್ತಿದ್ದಾರೆ ಅಷ್ಟೇ. ಬಿಸ್ವಾ ಶರ್ಮ ಅವರ ಡ್ಯಾಡಿ ಮೋದಿ ಅವರೇ ಸಂಸತ್ತಿನಲ್ಲಿ ಖರ್ಗೆ ಸಾಹೇಬರಿಗೆ ಉತ್ತರ ಕೊಟ್ಟಿಲ್ಲ ಇವರೇನು ಕೊಡುತ್ತಾರೆ. ಅವರು ಮೊದಲು ಕಾಂಗ್ರೆಸ್ ನಲ್ಲಿದ್ದವರು ಈಗ ಬಿಜೆಪಿಗೆ ಹೋಗ ಮೇಲೆ ಆರ್ ಎಸ್ ಎಸ್ ನಿಂದ ಪಾಠ ಕಲಿತಿದ್ದಾರೆ. ಅವರ ಹೆಂಡತಿ ಹೆಸರಲ್ಲಿ ಮೂರು ಪಾಸ್ ಪೋರ್ಟ್ ಇವೆ ಎನ್ನಲಾಗುತ್ತಿದೆ. ಅವರು ನಮಗೆ ದೇಶಭಕ್ತಿ ಪಾಠ ಹೇಳುತ್ತಾರ ಆಸ್ಸಾಂ ಮೂಲಕ ಬಾಂಗ್ಲಾದವರು ಕರ್ನಾಟಕೆ ಬರುತ್ತಾರೆ ಎನ್ನುತ್ತಾರೆ ಹಾಗಾದರೆ ಆಸ್ಸಾಂ ಸಿಎಂ, ಹೋಂ ಮಿನಿಸ್ಟರ್ ಕತ್ತೆ ಕಾಯುತ್ತಿದ್ದಾರ? ಎಂದು ಟೀಕಿಸಿದರು. ಬಿಜೆಪಿಗರು ಪಾರ್ಲಿಮೆಂಟ್ ನಲ್ಲಿ ಮೆಜಾರಿಟಿ ಹೊಂದಿದ್ದಾರೆ ದಲಿತರು, ಅಲ್ಪಸಂಖ್ಯಾತರು, ಆದಿವಾಸಿಗಳು ನಮ್ಮ ದೇಶದವರಲ್ಲ ಎಂದು ಹೇಳಿಬಿಡಲಿ. ಯುಎಇ ದವರನ್ನು ತಬ್ಬಿಕೊಳ್ಳುತ್ತಾರೆ. ಅವರಿಂದ ಪೆಟ್ರೋಲ್ ಬೇಕು, ಯೂರಿಯಾ ಬೇಕು. ಅಷ್ಟೇಕೆ, ಕೇಸರಿ ಕೂಡಾ ಹೆಚ್ಚಿನ ಪ್ರಮಾಣದಲ್ಲಿ ಯುಎಇ ನಿಂದ ಬರುತ್ತದೆ. ಹಾಗಾದರೆ ಮುಸ್ಲಿಂ ರಾಷ್ಟ್ರಗಳ ಜೊತೆಗೆ ಎಲ್ಲ ವ್ಯಾಪಾರ ವ್ಯವಹಾರ ನಿಲ್ಲಿಸಲಿ ಎಂದು ಟಾಂಗ್ ನೀಡಿದರು.

ಕೊರೋನ ಸಮಯದಲ್ಲಿ ಅಮಿತ್ ಶಾ ಮಗ ಐಪಿ ಎಲ್ ಆಡಿಸಿದ್ದು ಇದೇ ದುಬೈ ನಲ್ಲಿ. ಈ ತರ ಇಬ್ಬಗೆ ನೀತಿ ಯಾಕೆ ಅವರ ಮಾತುಗಳನ್ನು ಅವರೇ ಸಮರ್ಥನೆ ಮಾಡಿಕೊಳ್ಳಲು ಆಗುತ್ತಿಲ್ಲ ಎಂದು ಖರ್ಗೆ ಕುಟುಕಿದರು.

ಇತ್ತೀಚಿಗೆ ಕೇರಳದಲ್ಲಿ ಚುನಾವಣಾ ಪ್ರಚಾರ ಮಾಡಿದ ಮೋದಿ, ಕೇರಳ ಫೈಲ್, ಧುರಂಧರ ಸಿನೆಮಾ ನಿಜ ಅಂತ ಹೇಳಿದ್ದಾರೆ. ಆ ಚಿತ್ರಗಳ ಗಳಿಗೆ ಬಗ್ಗೆ ಹೇಳುವವರು ಆರ್ ಎಸ್ ಎಸ್ ಬಗ್ಗೆ ಶತಕ್ ಎನ್ನುವ ಸಿನೆಮಾ ಹೊರಬಂದು ಫ್ಲಾಪ್ ಆಗೊಯ್ತು. ಆರ್ ಎಸ್ ಎಸ್ ನವರಿಗೆ ಅವರ ಸಂಘಟನೆಯ ಸಿನೆಮಾ ಬಗ್ಗೆನೆ ನಂಬಿಕೆ ಇಲ್ಲ. ಅವರೆಲ್ಲ ನೋಡಿದ್ದರೆ ಒಳ್ಳೆ ಕಲೆಕ್ಷನ್ ಆಗಿರೋದು ಎಂದು ಪ್ರಿಯಾಂಕ್ ಕುಟುಕಿದರು.

ಪ್ರಿಯಾಂಕ್ ಖರ್ಗೆ ಹುಚ್ಚು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಹಿಡಿದಿದೆ ಎನ್ನುವ ಪ್ರತಾಪ್ ಸಿಂಹ ಮಾತಿಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಅವನು ನಡೆಯದ ನಾಣ್ಯ. ಅವನ ಬಗ್ಗೆ ಮೈಸೂರಲ್ಲೇ ಬೆಲೆ ಇಲ್ಲ ಇಲ್ಲಿ ಯಾಕೆ ಅವರ ಹೆಸರು ತರ್ತಿರಿ? ನಮ್ಮ ಬಗ್ಗೆ ಮಾತನಾಡುವ ಬದಲು ಸಂಸತ್ ನಲ್ಲಿ ಸ್ಮೋಕ್ ಬಾಂಬ್ ಇಟ್ಟವರು ಯಾರು ಅವರಿಗೆ ಒಅಸ್ ಕೊಟ್ಟವರು ಯಾರು? ಪ್ರತಾಪ್ ಸಿಂಹ್ ಮೊಬೈಲ್ ಸೀಜ್ ಮಾಡಿದ್ರಲ್ಲ ಏನಿತ್ತು ಅಲ್ಲಿ? ಆ ಬಗ್ಗೆ ಅವನು ಹೇಳಲಿ. ಈ ಸಲ ಎಂ ಎಲ್ ಎ ಗೆ ನಿಲ್ಲುತ್ತಾನಂತೆ ಅವನಿಗೆ ಟಿಕೆಟ್ ಕೊಡ್ತಾರ? ಎಂದು ವ್ಯಂಗ್ಯವಾಡಿದರು.

ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಿಯಾಂಕ್ ಖರ್ಗೆ ಅವರನ್ನು ಜೈಲಿಗೆ ಹಾಕಿಸುತ್ತೇವೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರ ಹೇಳಿಕೆಗೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದ ಪ್ರಿಯಾಂಕ್ ಖರ್ಗೆ, ಅವರಿಗೆ ತಾಕತ್ ಇದ್ದರೆ ಸ್ಕ್ವಾಡ್ ತಂದು ನಮ್ಮನ್ನು ಅರೆಸ್ಟ್ ಮಾಡಿಸಲಿ ಎಂದು ಸವಾಲ್ ಹಾಕಿದರು. ನನ್ನದು ಹಾಗೂ ಖರ್ಗೆ ಒಂದೇ ಸಿದ್ಧಾಂತ. ಅದರಲ್ಲೇನಿದೆ ತಪ್ಪು? ನಮ್ಮ ಬಸವ ಸಿದ್ಧಾಂತ. ನಮ್ಮಲ್ಲಿ ಇದ್ದಾಗ ನಾರಾಯಣ ಸ್ವಾಮಿ ಅವರಿಗೂ ಇತ್ತು ಯಾವಾಗ ಬಿಜೆಪಿ ಹೋಗಿ ಆರ್ ಎಸ್ ಎಸ್ ಚಡ್ಡಿ ಹೊತ್ತುಕೊಂಡರೋ ಸಂಪೂರ್ಣ ಬದಲಾಗಿದ್ದಾರೆ ಎಂದು ಛೇಡಿಸಿದರು.

ಎಂ ಎಲ್ ಸಿ ತಿಪ್ಪಣ್ಣಪ್ಪ ಕಮಕನೂರು, ಜಗದೇವ ಗುತ್ತೇದಾರ, ಜೆಸ್ಕಾಂ ಚೇರ ಮನ್ ಪ್ರವೀಣ್ ಪಾಟೀಲ್ ಹರವಾಳ ಮತ್ತಿತರು ಇದ್ದರು.

# ಸ್ವಚ್ಛತೆಯನ್ನು ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ: ಸಚಿವ ರಾಮಲಿಂಗಾರೆಡ್ಡಿ

ಬೆಂಗಳೂರು : ಬೆಂಗಳೂರಿನ ಸ್ವಚ್ಛತೆಯನ್ನು ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಸದಾ ಕೆಲಸದ ಒತ್ತಡದಲ್ಲಿರುವ ಅವರಿಗೆ ಈ ಕ್ರೀಡಾಕೂಟವು ಒಂದು ಉತ್ತಮ ವಿರಾಮ ಮತ್ತು ಚೈತನ್ಯ ನೀಡುವ ಕಾರ್ಯಕ್ರಮವಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಶ್ಲಾಘಿಸಿದರು.




ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯ ಸವಿನೆನಪಿಗಾಗಿ ಬೆಂಗಳೂರು ದಕ್ಷಿಣ ನಗರ ಪಾಲಿಕೆಯು ಪೌರಕಾರ್ಮಿಕರು, ಗ್ಯಾಂಗ್‌ಮೆನ್‌ಗಳು ಮತ್ತು ತೋಟಗಾರಿಕೆ ಮಾಲಿಗಳಿಗಾಗಿ ವಿಶೇಷ ಕ್ರೀಡಾಕೂಟವನ್ನು ಏಪ್ರಿಲ್ 9 ಮತ್ತು 10 ರಂದು ಜಯನಗರದ ಕಿತ್ತೂರು ರಾಣಿ ಚೆನ್ನಮ್ಮ ಆಟದ ಮೈದಾನದಲ್ಲಿ ಆಯೋಜಿಸಲಾಗಿದೆ.

ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವರು, ದೈಹಿಕ ಚಟುವಟಿಕೆಗಳು ಪ್ರತಿಯೊಬ್ಬರ ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಪೂರಕವಾಗಿವೆ ಎಂದು ತಿಳಿಸಿದರು.

ಕ್ರೀಡಾಕೂಟದ ಮೊದಲ ದಿನವಾದಂದು ಜಯನಗರ, ಬೊಮ್ಮನಹಳ್ಳಿ ಮತ್ತು ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಸುಮಾರು 600ಕ್ಕೂ ಹೆಚ್ಚು ಪೌರಕಾರ್ಮಿಕರು ಪಾಲ್ಗೊಂಡಿದ್ದು, ಕ್ರೀಡಾಕೂಟದ ಎರಡನೇ ದಿನವಾದ ನಾಳೆ ಬಿ.ಟಿ.ಎಂ ಲೇಔಟ್ ಮತ್ತು ಪದ್ಮನಾಭನಗರ ವಿಧಾನಸಭಾ ಕ್ಷೇತ್ರಗಳ ಪೌರಕಾರ್ಮಿಕರು ಭಾಗವಹಿಸಲಿದ್ದಾರೆ ಎಂದರು.

ಪೌರಕಾರ್ಮಿಕರು ಹಾಗೂ ಇತರ ನೌಕರರಿಗೆ 100 ಮೀಟರ್ ಮತ್ತು 200 ಮೀಟರ್ ಓಟದ ಸ್ಪರ್ಧೆ, ಗುಂಡು ಎಸೆತ ಹಾಗೂ ಕಿಕ್ಕಿಂಗ್ ದಿ ಬಾಲ್ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಕೇಂದ್ರ ಕಚೇರಿಯ ಆವರಣದಲ್ಲಿರುವ ಡಾ ॥ ರಾಜ್ ಕುಮಾರ್ ಗಾಜಿನ ಮನೆ ಇಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ ಬಹುಮಾನಗಳನ್ನು ವಿತರಿಸಿ ಗೌರವಿಸಲಾಗುವುದು ಎಂದು ತಿಳಿಸಿದರು.

# ಬಿಜೆಪಿ ನಾಯಕರಿಂದ ರಾಜಕೀಯ ತೆವಲುಗಳನ್ನು ತೀರಿಸಿಕೊಳ್ಳಲು ಪ್ರಯತ್ನ

**ಬೆಂಗಳೂರು** : ಬಿಜೆಪಿ ನಾಯಕರು ಮಲ್ಲಿಕಾರ್ಜುನ ಖರ್ಗೆ ಮತ್ತು ಪ್ರಿಯಾಂಕ ಖರ್ಗೆ ವಿರುದ್ಧ ವೈಯಕ್ತಿಕವಾಗಿ ಟೀಕೆ ಮಾಡುವುದರ ಮೂಲಕ ತಮ್ಮ ರಾಜಕೀಯ ತೆವಲುಗಳನ್ನು ತೀರಿಸಿಕೊಳ್ಳಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಕೆಪಿಸಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಚುನಾವಣಾ ಪ್ರಚಾರ ಸಂದರ್ಭದಲ್ಲಿ ಕಾಂಗ್ರೆಸ್‌ನ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಭಾರತೀಯ ಜನತಾ ಪಕ್ಷ ಮತ್ತು ಸಂಘ ಪರಿವಾರವನ್ನು ಟೀಕೆ ಮಾಡಿದ್ದರು. ಅವರು ಬಳಸಿದ ಭಾಷೆಯ ಸಂಬಂಧ ಭಾರತೀಯ ಜನತಾ ಪಕ್ಷದ ನಾಯಕರು ರಾಜಕೀಯ ಟೀಕೆಗಳನ್ನು ಮಾಡುತ್ತಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಆರೋಗ್ಯಕರವಾದ ಟೀಕೆ ಟಿಪ್ಪಣಿಗಳಿಗೆ ಅವಕಾಶವಿರುತ್ತದೆ. ಆದರೆ ರಾಜಕೀಯವಾಗಿ ಕಂಗೆಟ್ಟಿರುವ ಬಿಜೆಪಿಯ ನಾಯಕರು ಅಧಿಕಾರದ ಹಪಾಹಪಿತನವನ್ನು ಇಟ್ಟುಕೊಂಡಿದ್ದಾರೆ.

ಮಲ್ಲಿಕಾರ್ಜುನ ಖರ್ಗೆಯ ರಾಜಕೀಯ ಹೇಳಿಕೆಯನ್ನು ಕರ್ನಾಟಕದ ಕೇಂದ್ರ ಸಚಿವರಾದ ಪ್ರಹ್ಲಾದ ಜೋಶಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣ ಸ್ವಾಮಿ, ಲೋಕಸಭಾ ಮಾಜಿ ಸದಸ್ಯ ಪ್ರತಾಪ ಸಿಂಹ, ಮಾಜಿ ಸಚಿವ ಸಿಟಿ ರವಿ, ಸುರೇಶ್ ಕುಮಾರ್ ಹಾಗೂ ಇನ್ನಿತರ ಬಿಜೆಪಿ ನಾಯಕರು ಟೀಕಿಸಿರುತ್ತಾರೆ.

ಟೀಕೆಯ ಸಂದರ್ಭದಲ್ಲಿ ಕೆಲವು ಬಿಜೆಪಿ ನಾಯಕರು ಮಲ್ಲಿಕಾರ್ಜುನ್ ಖರ್ಗೆ ಮತ್ತು ಅವರ ಕುಟುಂಬದ ವೈಯಕ್ತಿಕ ತೇಜೋವಧೆಗೆ ಮುಂದಾಗಿರುತ್ತಾರೆ. ಇದು ಇವರ ಭೌತಿಕ ದಿವಾಳಿತನವನ್ನು ತೋರುತ್ತದೆ.

ಸಂಘ ಪರಿವಾರದ ನಿರ್ದೇಶನಗಳಿಗೆ ಅನುಗುಣವಾಗಿ ಮತ್ತು ತಮ್ಮ ರಾಜಕೀಯ ಅಸ್ತಿತ್ವದ ಉಳಿವಿಗಾಗಿ ಬಿಜೆಪಿಯ ನಾಯಕರು ಇಂತಹ ಕೀಳುಮಟ್ಟದ ಟೀಕೆಗಳಿಗೆ ಮುಂದಾಗಿರುತ್ತಾರೆ.

ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ ಚೌಕಟ್ಟಿನ ಒಳಗೆ ತಮ್ಮ ಟೀಕೆಯನ್ನು ವ್ಯಕ್ತಪಡಿಸಿರುತ್ತಾರೆ.

ಮಲ್ಲಿಕಾರ್ಜುನ ಖರ್ಗೆ ಮುಖಾಂತರ ರಾಜಕೀಯವಾಗಿ ಲಾಭ ಮಾಡಿಕೊಂಡು, ಕಾಂಗ್ರೆಸ್ ಪಕ್ಷದಲ್ಲಿ ಇದ್ದಂತಹ ಸಂದರ್ಭದಲ್ಲಿ ಖರ್ಗೆರವರ ಮನೆಯ ಗೇಟ್ ಕೀಪರ್ ಕೆಲಸ ಮಾಡಿದ ಬಿಜೆಪಿ ನಾಯಕರು ಅವರನ್ನು ಟೀಕೆ ಮಾಡುವ ಒಂದೇ ಕಾರಣಕ್ಕಾಗಿ ಬಿಜೆಪಿಯಲ್ಲಿ ಅವಕಾಶಗಳನ್ನು ಗಳಿಸಿಕೊಂಡಿರುತ್ತಾರೆ. ಬಹುತೇಕ ಇಂತಹ ಅವಕಾಶಗಳನ್ನು ಮುಂದೆಯೂ ಬಯಸುತ್ತಿರುವ ಅವಕಾಶವಾದಿ ನಾಯಕರು ಖರ್ಗೆರವರ ಕುಟುಂಬದ ಮೇಲೆ ವ್ಯಕ್ತಿಗತ ಪ್ರಹಾರಕ್ಕೆ ಮುಂದಾಗಿರುತ್ತಾರೆ. ರಾಜಕೀಯವಾಗಿ ದಿವಾಳಿಯಾಗಿ ಸೈಕಲ್ ಶಾಪ್ ಗಿರಾಕಿ ಎಂದು ಹೆಸರು ಪಡೆದಿದ್ದ ಬಿಜೆಪಿ ನಾಯಕರನ್ನು ಖರ್ಗೆರವರು ಕರೆದುಕೊಂಡು ಬಂದು 1999 ರಲ್ಲಿ ಕರ್ನಾಟಕ ಗೃಹ ಮಂಡಳಿಯ ಸದಸ್ಯರನ್ನಾಗಿ ಮಾಡಿದರು. ತದನಂತರ 2009ರಲ್ಲಿ ಅಖಿಲ ಭಾರತ ರೈಲ್ವೆ ಕುಂದುಕೊರತೆ ವಿಭಾಗದ ಅಧ್ಯಕ್ಷರನ್ನಾಗಿ ಮಾಡಿದರು. ಇದೇ ಗಿರಾಕಿಯನ್ನ ಮತ್ತೆ ಕರ್ನಾಟಕ ರಾಜ್ಯದ ಅರಣ್ಯ



ಇಲಾಖೆಯ ಅಭಿವೃದ್ಧಿ ನಿಗಮಕ್ಕೆ ಅಧ್ಯಕ್ಷರನ್ನಾಗಿ ಮಾಡಿದರು. ಕಾಂಗ್ರೆಸ್ ಪಕ್ಷದಲ್ಲಿ ಒಂದೊಂದು ಚುನಾವಣೆಗೆ ಒಂದೊಂದು ವಿಧಾನಸಭಾ ಕ್ಷೇತ್ರದ ಟಿಕೆಟ್ ಬಯಸಿ ಸಿಗದ ಕಾರಣ ಪಕ್ಷ ಬಿಟ್ಟು ಖರ್ಗೆ ಕುಟುಂಬವನ್ನು ವೈಯಕ್ತಿಕವಾಗಿ ಹಣೆಯುವ ಕರಾರು ಪತ್ರಕ್ಕೆ ಬಿಜೆಪಿಯಲ್ಲಿ ಸಹಿ ಮಾಡಿ ಅಧಿಕಾರ ಪಡೆದಿರುವ ಇಂತಹ ನಾಯಕರು ಖರ್ಗೆ ಅಥವಾ ಕಾಂಗ್ರೆಸ್ ಪಕ್ಷವನ್ನು ಟೀಕಿಸಲು ಯಾವ ನೈತಿಕತೆಯನ್ನು ಹೊಂದಿರುವುದಿಲ್ಲ. ಚೆಡ್ಡಿಯನ್ನು ತಲೆ ಮೇಲೆ ಬರುವಂತಹ ಗಿರಾಕಿಗಳು ಮಾತ್ರ ಖರ್ಗೆ ರವರ ಕುಟುಂಬದ ಮೇಲೆ ವೈಯಕ್ತಿಕ ಟೀಕೆ ಮಾಡಲು ಸಾಧ್ಯವಿರುತ್ತದೆ .

ಮೈಸೂರಿನ ಪ್ರತಾಪ ಸಿಂಹ ನಾಲಿಗೆಯನ್ನು ಹರಿಬಿಟ್ಟು ಖರ್ಜರವರ ಮೇಲೆ ವೈಯಕ್ತಿಕ ದ್ವೇಷವನ್ನು ಕಕ್ಕಿರುತ್ತಾರೆ. ತಮ್ಮ ಕಚ್ಚೆ ಹರುಕುತನವನ್ನು ಮುಚ್ಚಿಕೊಳ್ಳಲು ನ್ಯಾಯಾಲಯದ ತಡೆಯಾಜ್ಞೆ ತಂದಿರುವ ಪ್ರತಾಪ ಸಿಂಹ ರವರು, ಸಾರ್ವಜನಿಕ ಟೀಕೆ ಮಾಡುವ ಮೊದಲು ತಮ್ಮ ನೈತಿಕತೆಯನ್ನು ಪ್ರಶ್ನೆ ಮಾಡಿಕೊಳ್ಳಲಿ. ಇಂತಹ ಪಲಾಯನವಾದಿಗಳಿಗೆ ಕಾಂಗ್ರೆಸ್ ಪಕ್ಷ ಉತ್ತರ ನೀಡಲು ಸಮರ್ಥವಾಗಿರುತ್ತದೆ.

ಹಿಟ್ ಅಂಡ್ ರನ್ ಗಿರಾಕಿ ಸಿಟಿ ರವಿ ರವರು ತಮ್ಮ ರಾಜಕೀಯ ಉಳುವಿಗಾಗಿ ಖರ್ಗೆರವರ ವಿರುದ್ಧ ಟೀಕೆಯನ್ನು ಮಾಡಿರುತ್ತಾರೆ. ಮೊದಲು ತಮ್ಮ ಹಿಟ್ ಅಂಡ್ ರನ್ ಪ್ರಕರಣದ ಕುರಿತು ಸಾರ್ವಜನಿಕವಾಗಿ ಉತ್ತರ ನೀಡಿ ನಂತರ ಕಾಂಗ್ರೆಸ್ ನಾಯಕರನ್ನು ಟೀಕಿಸಲಿ.

ಬಿಜೆಪಿ ಮಾಜಿ ಸಚಿವ ಎಸ್.ಸುರೇಶ್ ಕುಮಾರ್ ಅವರು ಈ ಅವಕಾಶವನ್ನು ಉಪಯೋಗಿಸಿಕೊಂಡು ಖರ್ಗೆರವರನ್ನು ಟೀಕಿಸಿ ರಾತ್ರೋರಾತ್ರಿ ಮತ್ತೆ ನಾಯಕರಾಗಲು ಹೊರಟಿದ್ದಾರೆ. ರಾಜ್ಯದಲ್ಲಿ ಅವರದೇ ಸರ್ಕಾರ ಇದ್ದಂತ ಸಂದರ್ಭದಲ್ಲಿ ಮಂತ್ರಿ ಸ್ಥಾನ ತಪ್ಪಿದ ಕಾರಣಕ್ಕೆ ಲೋಕಸೇವಾ ಆಯೋಗದ ಮುಂದೆ ವಾಚ್ ಮೆನ್ ಕೆಲಸ ಮಾಡಿದ ಕೀರ್ತಿ ಮಾಜಿ ಸಚಿವ ಸುರೇಶ್ ಕುಮಾರ್ ಅವರಿಗೆ ಸಲ್ಲುತ್ತದೆ. ರಾಜಕೀಯವಾಗಿ ಅಭದ್ರಗೊಂಡಿರುವ ಸುರೇಶ್ ಕುಮಾರ್ ರವರು ರಾಜಾಜಿನಗರದಲ್ಲಿ ತಮ್ಮ ಸ್ಥಾನ ಉಳಿಸಿಕೊಳ್ಳಲು ಪರದಾಡುತ್ತಿದ್ದಾರೆ.

ವಿಧಾನಸಭೆಯ ವಿರೋಧಪಕ್ಷದ ಆರ್ ಅಶೋಕ್ ರವರು ನಮ್ಮ ವಿಧಾನ ಮಂಡಲದ ವಿರೋಧಪಕ್ಷ ಸ್ಥಾನಕ್ಕೆ ಚುತಿ ತಂದಂತ ನಾಯಕರು. ಇಲ್ಲಿಯವರಿಗೆ ರಾಜ್ಯದ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಲು ವಿಫಲರಾಗಿರುವ ಇವರು ತಾವೇ ಸಲ್ಲಿಸಿದ ಚುನಾವಣಾ ಪ್ರಮಾಣ ಪತ್ರದಲ್ಲಿ ತಮ್ಮ ಮೇಲೆ ಬಾಕಿ ಇದ್ದ ಕ್ರಿಮಿನಲ್ ಪ್ರಕರಣವನ್ನು ಮುಚ್ಚಿ ಇಟ್ಟಿದ್ದರು. ಇಂಥವರು ಖರ್ಗೆರವರಿಗೆ ರಾಜಕೀಯ ಪಾಠವನ್ನು ಬೋಧಿಸಲು ಹೊರಟಿರುತ್ತಾರೆ.

ಭಾರತೀಯ ಜನತಾ ಪಕ್ಷದ ನಾಯಕರು ಸೈದ್ಧಾಂತಿಕವಾಗಿ ಮಲ್ಲಿಕಾರ್ಜುನ ಖರ್ಗೆರವರನ್ನು ಮತ್ತು ಪ್ರಿಯಾಂಕ ಖರ್ಗೆರವರನ್ನು ಎದುರಿಸಲು ಸಾಧ್ಯವಾಗದೆ ಸಂಘ ಪರಿವಾರದ ನಿರ್ದೇಶನಗಳಿಗೆ ಅನುಗುಣವಾಗಿ ರಾಜಕೀಯ ಟೀಕೆಗಳನ್ನು ಮಾಡುತ್ತಿದ್ದಾರೆ.

ಕಾಂಗ್ರೆಸ್ ಪಕ್ಷದ ಅಧ್ಯಕ್ಷರನ್ನು ಅಥವಾ ನಾಯಕರನ್ನು ಟೀಕಿಸುವ ಮೊದಲು ಭಾರತೀಯ ಜನತಾ ಪಕ್ಷದ ನಾಯಕರು ತಮ್ಮ ನಡತೆಯನ್ನು ಹಿಂತಿರುಗಿ ನೋಡಿಕೊಳ್ಳಲಿ.

ಕಾಂಗ್ರೆಸ್ ಪಕ್ಷದ ನಾಯಕರು ಬಿಜೆಪಿ ನಾಯಕರ ಇಂತಹ ರಾಜಕೀಯ ಟೀಕೆಗಳನ್ನು ಎದುರಿಸಲು ಮತ್ತು ಉತ್ತರ ನೀಡಲು ಸಮರ್ಥವಾಗಿದೆ ಎಂದು ತಿಳಿಸಿದೆ.

# “ಅತ್ಯುತ್ತಮ ಸಾಹಿತಿ, ಲೇಖಕ ಜಯದೇವಗೆ ಹುಟ್ಟು ಹಬ್ಬದ ಶುಭ ಕೋರಿದ- ಚಿಂತಕ ಡಾ ಸಂಗನ ಬಸಪ್ಪ ಬಿರಾದಾರ್”



**ಪೀಣ್ಯ ದಾಸರಹಳ್ಳಿ:** ನಮ್ಮ ಸುತ್ತಮುತ್ತಲಿನ ವಿದ್ಯಮಾನಗಳಿಂದ ಪ್ರಭಾವಿತರಾಗಿ ಅದಕ್ಕೆ ಪ್ರತಿಕ್ರಿಯಿಸುವುದು ಮತ್ತು ಬರೆಯುವುದು ಲೇಖಕರ ಆದ್ಯ ಕರ್ತವ್ಯವಾಗಿದೆ ಎಂದು ಜನ ಪ್ರಿಯ ಸಮಾಜ ಸೇವಕ ಚಿಂತಕರು ವಾಗ್ಮಿಗಳು ಬುದ್ಧಿಜೀವಿಗಳು ರಾಷ್ಟ್ರೀಯ ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ. ಸಂಗನ ಬಸಪ್ಪ ಬಿರಾದಾರ್ ಹೇಳಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಅಸೆಂಟ್ ಕಾಲೇಜು ಹತ್ತಿರ ಇರುವ ಭೂಮಿಕಾ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಲತಾ ಕುಂದರಗಿ ಹಾಗೂ ರಾಜೇಂದ್ರ ಕೊಣ್ಣೂರು ಅವರ ಕಚೇರಿ ಆವರಣದಲ್ಲಿ ಸಾಹಿತಿ ಲೇಖಕ ಹಾಗೂ ಕನ್ನಡ ಜಾನಪದ ಪರಿಷತ್ತಿನ ಅಧ್ಯಕ್ಷ ಜಯದೇವ ಅವರ ಹುಟ್ಟು ಹಬ್ಬವನ್ನು ಆಯೋಜಿಸಲಾಗಿತ್ತು.

ಜಯದೇವ ಅವರ ಹುಟ್ಟು ಹಬ್ಬದ ನಿಮಿತ್ತ ಅವರಿಗೆ ಶಾಲು ಹೊದಿಸಿ ಮೈಸೂರು ಪೇಟಾ ಧರಿಸಿ ಫಲಪುಷ್ಪದೊಂದಿಗೆ ಗೌರವಿಸಿ ಸಿಹಿ ತಿನ್ನಿಸಿ ಶುಭ ಕೋರಿ ಜಯದೇವ ಅವರ ಅಪಾರ ಅಭಿಮಾನಿಗಳನ್ನು ಉದ್ದೇಶಿಸಿ ಡಾ. ಸಂಗನ ಬಸಪ್ಪ ಬಿರಾದಾರ್ ಮಾತನಾಡಿದರು.

ಈ ಸಂದರ್ಭದಲ್ಲಿ ಬಾಗಲಗುಂಟೆ ವಾರ್ಡಿನ ಬಿಜೆಪಿ ಮುಖಂಡ ಸುರೇಶ್ ದೊಡ್ಡಮನಿ, ಮುತ್ತುರಾಜ್ ಹಾಳಕಿ, ಶರಣಬಸವಶ ಆಲೂರು, ಬಸವರಾಜ್, ಹಿರಿಯ ಮಹಿಳಾ ಮುಖ್ಯಸ್ಥೆ ಗಿರೀಜಮ್ಮ, ಅಶ್ವಿನಿ ಸೇರಿದಂತೆ ಮುಂತಾದವರು ಸಾಹಿತಿ ಜಯದೇವ ಅವರಿಗೆ ಹೂವು ಗುಚ್ಚು ನೀಡಿ ಸಿಹಿ ತಿನ್ನಿಸಿ ಶುಭ ಹಾರೈಸಿದರು.

SAVE Inclusion Growth Prosperity
**ಸೇವ್ ಮೈಕ್ರೋಫೈನಾನ್ಸ್ ಪ್ರೈವೇಟ್ ಲಿಮಿಟೆಡ್**
ನೋಂದಣಿ ಕಚೇರಿ: ಯೂನಿಟ್ ಸಂಖ್ಯೆ 761, 7ನೇ ಮಹಡಿ, ವೇಗಾಸ್ ಮಾಲ್, ಪ್ಲಾಟ್ ಸಂಖ್ಯೆ 6, ಸೆಕ್ಟರ್-14, ದ್ವಾರಕಾ, ನೈಋತ್ಯ ದೆಹಲಿ-110075
ಸಿಐಎನ್: U65929DL2016PTC304877
ಇ-ಮೇಲ್ ಐಡಿ: cs@saveind.in
**ಶಾಖೆ ಮುಚ್ಚುವಿಕೆಯ ಜಾಹೀರಾತು**
ಆರ್‌ಬಿಐ ನಲ್ಲಿ ನೋಂದಾಯಿಸಲಾದ ಠೇವಣಿ ಸ್ವೀಕರಿಸದ NBFC (ನೋಂದಣಿ ಸಂಖ್ಯೆ: N-14.03377 ದಿನಾಂಕ ಅಕ್ಟೋಬರ್ 05, 2017), **ಸೇವ್ ಮೈಕ್ರೋಫೈನಾನ್ಸ್ ಪ್ರೈವೇಟ್ ಲಿಮಿಟೆಡ್, ರಾಯಬಾಗ್** ಶಾಖೆಯಾಗಿದ್ದು, ಇದು ವ್ಯವಹಾರದ ಅವಶ್ಯಕತೆಯಿಂದಾಗಿ **19 ಜೂನ್ 2025 ರಿಂದ** ಜಾರಿಗೆ ಬರುವಂತೆ **ಗಣೇಶ್ ಚೌಕ್, ಆಶೀರ್ವಾದ್ ಮೆಡಿಕಲ್ ಹತ್ತಿರ, ರಾಯಬಾಗ್, ಬೆಳಗಾವಿ ಜಿಲ್ಲೆ 591317** ನಲ್ಲಿದೆ ಎಂದು ತಿಳಿಸಲು ಬಯಸುತ್ತೇವೆ.
ಈ ಶಾಖೆಯ ಎಲ್ಲಾ ಸಂವಹನ ಮತ್ತು ಕಾರ್ಯಾಚರಣೆಗಳನ್ನು ಇನ್ನು ಮುಂದೆ ನಮ್ಮ **ನೋಂದಾಯಿತ ಕಚೇರಿ: ಯೂನಿಟ್ ಸಂಖ್ಯೆ 761, 7ನೇ ಮಹಡಿ, ವೇಗಾಸ್ ಮಾಲ್, ಪ್ಲಾಟ್ ಸಂಖ್ಯೆ 6, ಸೆಕ್ಟರ್ -14, ದ್ವಾರಕಾ, ನೈಋತ್ಯ ದೆಹಲಿ-110075** ಇಲ್ಲಿಂದ ನಿರ್ವಹಿಸುತ್ತದೆ:
ಎಲ್ಲಾ ಖಾತೆಗಳು ಮತ್ತು ಸಂಬಂಧಿತ ದಾಖಲೆಗಳನ್ನು ಅದಕ್ಕೆ ಅನುಗುಣವಾಗಿ ವರ್ಗಾಯಿಸಲಾಗುತ್ತದೆ.
ಯಾವುದೇ ಪ್ರಶ್ನೆಗಳು ಅಥವಾ ಕಾಳಜಿಗಳಿಗಾಗಿ, ಗ್ರಾಹಕರು **cs@saveind.in** ಗೆ ಬರೆಯಬಹುದು.
**ಸೇವ್ ಮೈಕ್ರೋಫೈನಾನ್ಸ್ ಪ್ರೈವೇಟ್ ಲಿಮಿಟೆಡ್ ಪರವಾಗಿ**
**ಸಹಿ/-**
**ಅಜೀತ್ ಕುಮಾರ್ ಸಿಂಗ್**
**ನಿರ್ದೇಶಕ**
**ಸ್ಥಳ: ರಾಯಬಾಗ್**
**ದಿನಾಂಕ: 10.04.2026** **ಡಿಐಎನ್: 01857072**

SAVE Inclusion Growth Prosperity
**ಸೇವ್ ಮೈಕ್ರೋಫೈನಾನ್ಸ್ ಪ್ರೈವೇಟ್ ಲಿಮಿಟೆಡ್**
ನೋಂದಣಿ ಕಚೇರಿ: ಯೂನಿಟ್ ಸಂಖ್ಯೆ 761, 7ನೇ ಮಹಡಿ, ವೇಗಾಸ್ ಮಾಲ್, ಪ್ಲಾಟ್ ಸಂಖ್ಯೆ 6, ಸೆಕ್ಟರ್-14, ದ್ವಾರಕಾ, ನೈಋತ್ಯ ದೆಹಲಿ-110075
ಸಿಐಎನ್: U65929DL2016PTC304877
ಇ-ಮೇಲ್ ಐಡಿ: cs@saveind.in
**ಶಾಖೆ ಮುಚ್ಚುವಿಕೆಯ ಜಾಹೀರಾತು**
ಆರ್‌ಬಿಐ ನಲ್ಲಿ ನೋಂದಾಯಿಸಲಾದ ಠೇವಣಿ ಸ್ವೀಕರಿಸದ NBFC (ನೋಂದಣಿ ಸಂಖ್ಯೆ: N-14.03377 ದಿನಾಂಕ ಅಕ್ಟೋಬರ್ 05, 2017), **ಸೇವ್ ಮೈಕ್ರೋಫೈನಾನ್ಸ್ ಪ್ರೈವೇಟ್ ಲಿಮಿಟೆಡ್, ಭೈಲಹೊಂಗಲ** ಶಾಖೆಯಾಗಿದ್ದು, ಇದು ವ್ಯವಹಾರದ ಅವಶ್ಯಕತೆಯಿಂದಾಗಿ **19 ಜೂನ್ 2025 ರಿಂದ** ಜಾರಿಗೆ ಬರುವಂತೆ **ಶಿವಾನಂದ ಭಾರತಿ ನಗರ, 5ನೇ ಕ್ರಾಸ್, ಓಂ ಶಾಂತಿ ಹೋಮ್ ಹತ್ತಿರ, ಸಂಖ್ಯೆ #418C/8/23P1 ಭೈಲಹೊಂಗಲ 591102** ನಲ್ಲಿದೆ ಎಂದು ತಿಳಿಸಲು ಬಯಸುತ್ತೇವೆ.
ಈ ಶಾಖೆಯ ಎಲ್ಲಾ ಸಂವಹನ ಮತ್ತು ಕಾರ್ಯಾಚರಣೆಗಳನ್ನು ಇನ್ನು ಮುಂದೆ ನಮ್ಮ **ನೋಂದಾಯಿತ ಕಚೇರಿ: ಯೂನಿಟ್ ಸಂಖ್ಯೆ 761, 7ನೇ ಮಹಡಿ, ವೇಗಾಸ್ ಮಾಲ್, ಪ್ಲಾಟ್ ಸಂಖ್ಯೆ 6, ಸೆಕ್ಟರ್ -14, ದ್ವಾರಕಾ, ನೈಋತ್ಯ ದೆಹಲಿ-110075** ಇಲ್ಲಿಂದ ನಿರ್ವಹಿಸುತ್ತದೆ:
ಎಲ್ಲಾ ಖಾತೆಗಳು ಮತ್ತು ಸಂಬಂಧಿತ ದಾಖಲೆಗಳನ್ನು ಅದಕ್ಕೆ ಅನುಗುಣವಾಗಿ ವರ್ಗಾಯಿಸಲಾಗುತ್ತದೆ.
ಯಾವುದೇ ಪ್ರಶ್ನೆಗಳು ಅಥವಾ ಕಾಳಜಿಗಳಿಗಾಗಿ, ಗ್ರಾಹಕರು **cs@saveind.in** ಗೆ ಬರೆಯಬಹುದು.
**ಸೇವ್ ಮೈಕ್ರೋಫೈನಾನ್ಸ್ ಪ್ರೈವೇಟ್ ಲಿಮಿಟೆಡ್ ಪರವಾಗಿ**
**ಸಹಿ/-**
**ಅಜೀತ್ ಕುಮಾರ್ ಸಿಂಗ್**
**ನಿರ್ದೇಶಕ**
**ಸ್ಥಳ: ಭೈಲಹೊಂಗಲ**
**ದಿನಾಂಕ: 10.04.2026** **ಡಿಐಎನ್: 01857072**

# ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಅಂಗವೈಕಲ್ಯ ಒಳಗೊಳ್ಳುವಿಕೆ ಮಧ್ಯಸ್ಥಿಕೆ- ರಾಷ್ಟ್ರೀಯ ಸಮ್ಮೇಳನ

**ಬೆಂಗಳೂರು :** ದೇಶದಲ್ಲಿನ ಬಹುತೇಕ ಅಂಗವಿಕಲರು ಬಡತನ ರೇಖೆಗಿಂತ ಕೆಳಗೆ ಬದುಕುತ್ತಿದ್ದು ವಿಶೇಷಚೇತನರ ಸಬಲೀಕರಣಕ್ಕೆ ಸರ್ಕಾರ ಮತ್ತು ಸಮಾಜ ಅಗತ್ಯ ನೆರವು ಒದಗಿಸಬೇಕೆಂದು 'ಸಮರ್ಥನಂ ಇಂಟರ್ ನ್ಯಾಷನಲ್' ಟ್ರಸ್ಟಿನ ಸಂಸ್ಥಾಪಕ ಅಧ್ಯಕ್ಷರಾದ ಡಾ. ಜಿ.ಕೆ. ಮಹಾಂತೇಶ್ ಮನವಿ ಮಾಡಿದ್ದಾರೆ.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ ವಿಭಾಗ ಅಂಗವಿಕಲರ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿರುವ ರಾಷ್ಟ್ರೀಯ ಸಮ್ಮೇಳನದಲ್ಲಿ ಪ್ರಧಾನ ಭಾಷಣ ಮಾಡಿದ ಅವರು ವಿಶ್ವದ ಜನಸಂಖ್ಯೆಯ ಶೇ.15 ರಷ್ಟು ಮಂದಿ ವಿವಿಧ ಅಂಗವೈಕಲ್ಯದಿಂದ ಬಳಲುತ್ತಿದ್ದಾರೆಂದು ವಿವರಿಸಿದರು.

ಉನ್ನತ ಶಿಕ್ಷಣದ ಹಂತದಲ್ಲಿ ಅಂಗವಿಕಲರ ಸಂಖ್ಯೆ ಅತ್ಯಲ್ಪವಾಗಿದ್ದು ಉದ್ಯೋಗ ರಂಗದಲ್ಲೂ ಅನೇಕ ಕಾರಣಗಳಿಂದಾಗಿ ಅವಕಾಶಗಳಿಂದ ವಂಚಿತರಾಗಿದ್ದಾರೆಂದು ಅವರು ವಿಷಾದಿಸಿದರು. ಅಂಗವಿಕಲರು ಪಿಂಚಣಿಯನ್ನು ಅವಲಂಬಿಸದೆ ಸ್ವಾವಲಂಬಿ ಬದುಕು ಸಾಗಿಸುವ ವಾತಾವರಣ ನಿರ್ಮಾಣವಾಗಲಿ ಎಂದು ಅವರು ಆಶಿಸಿದರು.

ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂಬ ತತ್ವದಂತೆ ಎಲ್ಲ ರೀತಿಯ ತಾರತಮ್ಯಗಳನ್ನು ತೊಲಗಿಸಿ ಸಾಮಾಜಿಕ -ಆರ್ಥಿಕ ಪ್ರಗತಿಯಲ್ಲಿ ಅಂಗವಿಕಲರನ್ನೂ ಒಳಗೊಳ್ಳುವ ವಿಶಾಲ ಮನೋಭಾವ ಬೆಳೆಸಬೇಕಾದ ಅಗತ್ಯವನ್ನು ಅವರು ಇದೇ ವೇಳೆ ಪ್ರತಿಪಾದಿಸಿದರು.

ಅಂಗವಿಕಲರನ್ನೂ ತೆರಿಗೆ ಪಾವತಿಸುವ ಪ್ರಜೆಗಳಾಗಿ ಪರಿವರ್ತಿಸಬೇಕೆಂದು ಅಭಿಪ್ರಾಯಪಟ್ಟ ಅವರು ಸಮರ್ಥನಂ ಟ್ರಸ್ಟ್ ಸಿಎಸ್‌ಆರ್ ನಿಧಿಯ ಬೆಂಬಲದಿಂದ ಕರ್ನಾಟಕ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಸಹಸ್ರಾರು ವಿಶೇಷ ಚೇತನರಿಗೆ ಅತ್ಯುತ್ತಮ ನೆರವು ಒದಗಿಸುತ್ತಿದೆ ಎಂದು ಅವರು ಹೆಮ್ಮೆಯಿಂದ ನುಡಿದರು.

ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ




ಕರ್ನಾಟಕ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಾದ ಉಮಾ ಮಹದೇವನ್ ರವರು ಅಂಗವಿಕಲರ ಜೀವನಮಟ್ಟ ಸುಧಾರಣೆಗೆ ಅಗತ್ಯವಿರುವ ಸಕಲ ಉತ್ತೇಜನ ಒದಗಿಸುವುದಾಗಿ ಭರವಸೆಯಿತ್ತರು.

ಅಂಗವಿಕಲರ ಪುನರ್ವಸತಿ ಮತ್ತು ಸಂಶೋಧನಾ ಸಂಸ್ಥೆಯ ಪ್ರತಿನಿಧಿ ಡಾ.ಎನ್.ಎಸ್.ಸೆಂಥಿಲ್ ಕುಮಾರ್, ನಿಮ್ಹಾನ್ಸ್ ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಐ.ಎ. ಷರೀಫ್, ತುಮಕೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ವೈ.ಎಸ್. ಸಿದ್ದೇಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕುಲಪತಿಗಳಾದ ಪ್ರೊ. ರಮೇಶ್.ಬಿ. ಅಂಗವಿಕಲ ವಿದ್ಯಾರ್ಥಿಗಳಿಗೆ ಉಪಯುಕ್ತವಾಗಬಲ್ಲ ತಂತ್ರಜ್ಞಾನ ಕೌಶಲ್ಯ ಆಧಾರಿತ ಪಠ್ಯಕ್ರಮ ರೂಪಿಸುವ ಆಶ್ವಾಸನೆಯಿತ್ತರು. ಕುಲಸಚಿವರಾದ ನವೀನ್ ಜೋಸೆಫ್.ಎ., ಕುಲಸಚಿವ (ಮೌಲ್ಯಮಾಪನ) ಪ್ರೊ.ರಮೇಶ. ಬಿ.ಕುಡೇನಟ್ಟಿ, ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥರಾದ ಪ್ರೊ.ರಿತಿಕಾ ಸಿನ್ಹಾ ಉಪಸ್ಥಿತರಿದ್ದರು.

ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಲಾಗಿರುವ ಎರಡು ದಿನಗಳ ಸಮ್ಮೇಳನದಲ್ಲಿ ವಿವಿಧ ವಿಶ್ವವಿದ್ಯಾಲಯಗಳ 300ಕ್ಕೂ ಹೆಚ್ಚು ಅಂಗವಿಕಲ ವಿದ್ಯಾರ್ಥಿಗಳು ಹಾಗೂ ಅಪಾರ ಸಂಖ್ಯೆಯ ಉಪನ್ಯಾಸಕರು ಮತ್ತು ಸಮಾಜ ಸೇವಾ ಕಾರ್ಯಕರ್ತರು ಭಾಗವಹಿಸಿರುವರು.

ಸಮ್ಮೇಳನದ ಭಾಗವಾಗಿ ವಸ್ತುಪ್ರದರ್ಶನ ಸಹ ಏರ್ಪಡಿಸಲಾಗಿದೆ.

# ಅಡುಗೆ ಅನಿಲ,ಪೆಟ್ರೋಲಿಯಂ ಉತ್ಪನ್ನಗಳ ಕೊರತೆಗೆ ಕೇಂದ್ರ ಕಾರಣ- ಸಚಿವ ಪ್ರಿಯಾಂಕ್ ಖರ್ಗೆ

**ಕಲ್ಬುರ್ಗಿ :** ದೇಶದಲ್ಲಿ ಅಡುಗೆ ಅನಿಲ, ಪೆಟ್ರೋಲ್ ಡಿಸೇಲ್ ಕೊರತೆಗೆ ಕೇಂದ್ರ ಸರ್ಕಾರವೇ ಹೊಣೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ದೂರಿದರು.

ಕಲಬುರಗಿ ಯಲ್ಲಿ ತಮ್ಮನ್ನು ಭೇಟಿ ಮಾಡಿದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಮಧ್ಯಪ್ರಾಚ್ಯ ಹಾಗೂ ಅರಬ್ ದೇಶಗಳಲ್ಲಿ ಯುದ್ಧ ಪ್ರಾರಂಭವಾದಾಗ ಇಲ್ಲಿ ಕೇಂದ್ರ ಸರ್ಕಾರ ತಮ್ಮ ಬಳಿ ಸಾಕಷ್ಟು ಇಂಧನ ಲಭ್ಯವಿದೆ ಎಂದು ಹೇಳಿತ್ತು. ಹಾಗಾದರೆ ಅಗತ್ಯ ವಸ್ತು ಕಾಯಿದೆ ಜಾರಿ ಮಾಡಿದ್ದು ಯಾಕೆ? ಸ್ವತಃ ಮೋದಿಯವರೇ, ಕೊರೋನ ಸಮಯದಲ್ಲಿ ಎಲ್ಲರೂ ಒಗ್ಗೂಡಿ ಎದುರಿಸಿದಂತೆ ಈಗಲೂ ಯುದ್ಧದ ಸಮಸದಲ್ಲಿ ಎದರಿಸಬೇಕು ಎಂದು ಜನರಿಗೆ ಕರೆ ನೀಡಿದ್ದು ಯಾಕೆ? ಮೋದಿ ಸರ್ಕಾರದ ಆರ್ಥಿಕ ಹಾಗೂ ವಿದೇಶಾಂಗ ನೀತಿಗಳು ದೇಶದ ಜನರಿಗೆ ಕಷ್ಟ ತಂದೊಡ್ಡಿವೆ ಎಂದರು.

ವಿಶ್ವಗುರು ಎಂದು ತಮ್ಮ ಬೆನ್ನು ಚಪ್ಪರಿಸಿಕೊಳ್ಳುವ ಮೋದಿ, ಯುದ್ಧ ನಿಲ್ಲಿಸುವ ಪ್ರಯತ್ನ ಯಾಕೆ ಮಾಡಲಿಲ್ಲ. ಹಿಂದೆ ವಿಯಟ್ನಾಂ ಯುದ್ಧ ನಡೆದಾಗ, ಅಂದಿನ ಪ್ರಧಾನಿ ನೆಹರು ಮಧ್ಯಸ್ಥಿಕೆ ವಹಿಸಿದ್ದರು. ಇಸ್ರೇಲ್ ಗೆ ಹೋಗಿ ನೇತನ್ಯಾಹು ಅವರನ್ನು ತಬ್ಬಿಕೊಂಡು ಬಂದ ಮೋದಿ ಈಗ ಯಾಕೆ ಯುದ್ಧ ನಿಲ್ಲಿಸುವ ಪ್ರಯತ್ನ ಮಾಡಿಲ್ಲ. ಅತ್ತ ಇರಾನ್ ಹಾಗೂ ಅಮೇರಿಕಾ ನಡುವೆ ಪಾಕಿಸ್ತಾನ ಮಾತುಕತೆ ನಡೆಸಿದೆ. ಮೋದಿ ಅವರ ಸ್ನೇಹಿತ ಟ್ರಂಪ್ ನಿಂದಾಗಿ ಇಂದು ಸುಂಕ ಜಾಸ್ತಿಯಾಗುತ್ತಿದೆ. ಈಗಿನ ಡೀಲ್ ಪ್ರಕಾರ ಭಾರತ ಒಪ್ಪಿಕೊಂಡರೆ ಇಲ್ಲಿ ಬೆಳೆಯುವ ರೈತರ ಬೆಳೆಗಳಿಗೆ ನಷ್ಟವಾಗುತ್ತದೆ ಎಂದರು.

ಜಿಲ್ಲೆಯಿಂದ ಅಕ್ರಮವಾಗಿ ಅಕ್ಕಿ ಮಹಾರಾಷ್ಟ್ರ ಕ್ಕೆ ಸಾಗಾಣಿಕೆಯಾಗುತ್ತಿದೆ. ಹಿರಿಯ ಅಧಿಕಾರಿಗಳು ಶಾಮೀಲಾಗಿರುವ ಆರೋಪದ ಬಗ್ಗೆ ಕೇಳಿದಾಗ ಉತ್ತರಿಸಿದ ಸಚಿವರು ಕಲಬುರಗಿ ಹಾಗೂ ಯಾದಗಿರಿಯ ಪ್ರಕರಣಗಳನ್ನು ಸಂಬಂಧಿಸಿದ ಸಚಿವರ ಗಮನಕ್ಕೆ ತರಲಾಗಿದೆ. ಉಪಚುನಾವಣೆಯ ನೀತಿ ಸಂಹಿತೆ ಮುಗಿದ ನಂತರ ಆ ಬಗ್ಗೆ ಕ್ರಮವಹಿಸಲಾಗುವುದು ಎಂದರು.

# ಉಡುಪಿ ಜಿಲ್ಲೆಯ ಸಾಧನೆಗೆ ಲಕ್ಷ್ಮೀ ಹೆಬ್ಬಾಳಕರ್ ಶ್ಲಾಘನೆ

ಬೆಂಗಳೂರು: ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇಕಡ 96.39 ರಷ್ಟು ಫಲಿತಾಂಶ ಪಡೆಯುವ ಮೂಲಕ ಕರ್ನಾಟಕಕ್ಕೆ ಮೊದಲ ಸ್ಥಾನ ಪಡೆದ ಉಡುಪಿ ಜಿಲ್ಲೆಯ ಸಾಧನೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು ಹಾಗೂ ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಕರಾವಳಿ ಜಿಲ್ಲೆ ಉಡುಪಿ ಶೈಕ್ಷಣಿಕವಾಗಿ ಮುಂದಿರುವ ಜಿಲ್ಲೆ, ಜಿಲ್ಲೆಯ ಹೊರಭಾಗಗಳಿಂದಲೂ ಬಂದು ಇಲ್ಲಿ ವ್ಯಾಸಾಂಗ ಮಾಡುತ್ತಾರೆ. ಹಲವು ವರ್ಷಗಳಿಂದ ಪಿಯುಸಿ ಪರೀಕ್ಷೆಯಲ್ಲಿ ಅಗ್ರ ಎರಡು ಸ್ಥಾನ ಕಾಯ್ದುಕೊಂಡಿರುವ ಉಡುಪಿ ಜಿಲ್ಲೆಯ ಸಾಧನೆ ನಿಜಕ್ಕೂ ಮೆಚ್ಚುವಂಥದ್ದು ಎಂದು ಸಚಿವರು ತಿಳಿಸಿದ್ದಾರೆ.

ಜಿಲ್ಲೆ ಅಗ್ರಸ್ಥಾನ ಪಡೆಯಲು ಕಾರಣಿಭೂತರಾದ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗದವರಿಗೆ, ಎಲ್ಲಾ ಕಾಲೇಜುಗಳಿಗೆ, ವಿದ್ಯಾರ್ಥಿಗಳಿಗೆ ಅಭಿನಂದನೆ



ಸಲ್ಲಿಸುತ್ತೇನೆ. ವಿದ್ಯಾರ್ಥಿಗಳ ಜೀವನ ಉಜ್ವಲವಾಗಿರಲಿ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಷೇತ್ರ ವಿಂಗಡಣೆಯಲ್ಲಿ ದಕ್ಷಿಣದ ರಾಜ್ಯಗಳಿಗೆ ಅನ್ಯಾಯವಾದರೆ, ರಾಜಕೀಯ ಅಸ್ತಿತ್ವಕ್ಕೆ ಸಂಚಕಾರ: ದಿನೇಶ್ ಗುಂಡೂರಾವ್

ಬೆಂಗಳೂರು : ದೇಶದಲ್ಲಿ ಗ್ಯಾಸ್ ಸಮಸ್ಯೆ ಇರುವುದು ನಿಜ. ಜನಸಾಮಾನ್ಯರಿಗೆ ಬಹಳ ತೊಂದರೆ ಆಗುತ್ತಿದೆ. ಕೇಂದ್ರ ಸರ್ಕಾರ ಸರಿಯಾದ ಮುನ್ನೆಚ್ಚರಿಕೆ ವಹಿಸದೇ




ಇರುವುದರಿಂದ ಪರಿಸ್ಥಿತಿ ಇನ್ನಷ್ಟು ಬಿಗಡಾಯಿಸಿದೆ. ಸಾರಿಗೆ, ಕೈಗಾರಿಕೆಗಳು ತೊಂದರೆಗೆ ಸಿಲುಕಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಫಾರ್ಮಾ ಕಂಪನಿಗಳು ತಮಗೆ ಆಗುತ್ತಿರುವ ಸಮಸ್ಯೆ ಕುರಿತು ನನಗೆ ಪತ್ರ ಬರೆದಿದ್ದಾರೆ. ಔಷಧ ತಯಾರಿಕೆಗೆ ಕಚ್ಚಾ ವಸ್ತುಗಳು ಸರಿಯಾದ ಸಮಯಕ್ಕೆ ಸಿಗುತ್ತಿಲ್ಲ.

ಸದ್ಯ ಪೂರೈಕೆಗೆ ಸಮಸ್ಯೆ ಇಲ್ಲ, ಹೀಗೆ ಮುಂದುವರಿದರೆ ಪೂರೈಕೆಗೆ ಕಾಲಾವಕಾಶ ಹೆಚ್ಚಿಸಬೇಕು ಎಂದಿದ್ದಾರೆ. ಈಗಾಗಲೇ ಔಷಧಗಳ ಬೆಲೆ ಹೆಚ್ಚಾಗಿದೆ.

ಇದರ ಪರಿಣಾಮ ನೇರವಾಗಿ ಜನಸಾಮಾನ್ಯರ ಮೇಲೆ ಆಗುತ್ತದೆ. ಕೇಂದ್ರ ಸರ್ಕಾರ ಪರ್ಯಾಯ ವ್ಯವಸ್ಥೆ ಮಾಡುವಲ್ಲಿ ಸಂಪೂರ್ಣ ವಿಫಲವಾಗಿದೆ.

ಯುದ್ಧ ಪ್ರಾರಂಭವಾದ ತಕ್ಷಣ ಕೇಂದ್ರ ಸರ್ಕಾರ ಈ ಕುರಿತು ಆಲೋಚಿಸಬೇಕಿತ್ತು. ಈಗ ಪೆಟ್ರೋಲ್ ಬಳಸಿ, ಕಟ್ಟಿಗೆ ಬಳಸಿ ಎನ್ನುತ್ತಿದ್ದಾರೆ. ಹೋಟೆಲ್, ರೈತರು, ಸಣ್ಣ ವ್ಯಾಪಾರಸ್ಥರು ಎಲ್ಲರೂ ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಕೇಂದ್ರ ಸರ್ಕಾರ ದಕ್ಷಿಣದ ರಾಜ್ಯಗಳಿಗೆ ತಾರತಮ್ಯ ಮಾಡುವುದನ್ನು ಮೊದಲು ನಿಲ್ಲಿಸಬೇಕು. ಮಳೆ ಹಾನಿ ಪರಿಹಾರ, ತೆರಿಗೆ ವಿಷಯಗಳಲ್ಲಿ ನಮಗೆ ಅನ್ಯಾಯವಾಗುತ್ತಿದೆ.

ಜನಸಂಖ್ಯೆ ನಿಯಂತ್ರಣ, ಆರ್ಥಿಕ ಪ್ರಗತಿ ಮುಂತಾದವುಗಳಲ್ಲಿ ನಾವು ಮುನ್ನಡೆ ಸಾಧಿಸಿದ್ದೇವೆ. ಇವರು ಜನಸಂಖ್ಯೆ ಆಧಾರದಲ್ಲಿ ತೆರಿಗೆ ಪಾಲು ನೀಡುತ್ತೇವೆ ಎನ್ನುತ್ತಿದ್ದಾರೆ. ಇದರಿಂದ ನಮಗೆ ಅನ್ಯಾಯ ಅಗುವುದರೊಂದಿಗೆ, ಅಭಿವೃದ್ಧಿ ಕುಂಠಿತವಾಗುತ್ತದೆ. ಬಜೆಟ್ ನಲ್ಲಿ ಘೋಷಣೆ ಮಾಡುತ್ತಾರೆ ಹಣ ಬಿಡುಗಡೆ ಮಾಡುವುದಿಲ್ಲ, ಹೀಗೆ ಅವರ ರಾಜ್ಯ ಸರ್ಕಾರಗಳು ತೊಂದರೆಗೆ ಸಿಲುಕುತ್ತದೆ.

ಈಗ ಆರ್ಥಿಕ ನಷ್ಟ ಆಗುತ್ತದೆ, ಹೀಗೆ ಮುಂದುವರೆದರೆ ರಾಜಕೀಯವಾಗಿಯೂ ಬಹಳ ಸಮಸ್ಯೆ ಆಗುತ್ತದೆ. ಮೋದಿಯವರ ಮಾತನ್ನು ನಂಬಿ ಹೋದರೆ ಮುಂದೆ ದಕ್ಷಿಣದ ರಾಜ್ಯಗಳಿಗೆ ಬೆಲೆಯೆ ಇರುವುದಿಲ್ಲ ನೆನಪಿಡಿ.

ಖರ್ಗೆ ಅವರು ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ. ಬಿಜೆಪಿಯವರು ಬಿಂಬಿಸುವ ರೀತಿ ಖರ್ಗೆಯವರು ಮಾತಾಡಿಲ್ಲ. ಬಿಜೆಪಿಯವರ ಪ್ರಚೋದನಾಕಾರಿ ಮಾತುಗಳ ಕುರಿತು ಖರ್ಗೆಯವರು ಹೇಳಿದ್ದಾರೆ. ದುರುದ್ದೇಶದಿಂದ ಮಾತನಾಡಿಲ್ಲ.

ಆಸ್ಸಾಂ ಮುಖ್ಯಮಂತ್ರಿಗಳು ಆಡುವ ಮಾತುಗಳನ್ನು ಕೇಳಿದರೆ ವಿಷಕಾರಿ ಅಂತಲೇ ಅನಿಸುವುದಿಲ್ಲವೇ? ಲಂಗುಲಗಾಮು ಇಲ್ಲದೇ ಬೇಕಾಬಿಟ್ಟಿ ಮಾತನಾಡುತ್ತಿದ್ದಾರೆ. ಚುನಾವಣಾ ಆಯೋಗ ಬಿಜೆಪಿ ಅಂಗಸಂಸ್ಥೆಯಂತೆ ಕಾರ್ಯ ನಿರ್ವಹಿಸುವುದರಿಂದ ಈ ರೀತಿಯಾಗುತ್ತಿದೆ. ಜನರಿಗೂ ಅದರ ಮೇಲೆ ನಂಬಿಕೆಯೆ ಇಲ್ಲದಂತಾಗಿದೆ.

ಮೋದಿ ಆಡಳಿತದಲ್ಲಿ ಎಲ್ಲ ಸ್ವಾಯತ್ತ ಸಂಸ್ಥೆಗಳ ಸ್ಥಿತಿ ದೇಶದಲ್ಲಿ ಹೇಗಿದೆ ಅಂತ ಜನರಿಗೆ ಗೊತ್ತಾಗಿದೆ. ಎಷ್ಟೋ ಕಾಲದಿಂದ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿರುವ ಇವುಗಳ ಅಸ್ತಿತ್ವವನ್ನು ಮೋದಿಯವರು ತಮ್ಮ ಸರ್ವಾಧಿಕಾರಿ ಧೋರಣೆಯಿಂದ ಹಾಳುಮಾಡಿದ್ದಾರೆ ಎಂದು ತಿಳಿಸಿದ್ದಾರೆ.



ಮಹಾಲಕ್ಷ್ಮೀಲೇಔಟ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ ಗೋಪಾಲಯ್ಯನವರು ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗೆಳೆಯರಬಳಗ ಎಜಿಬಿ ಲೇಔಟ್‌ನಲ್ಲಿರುವ ನವೀಕೃತ ಉದ್ಯಾನವನವನ್ನು ಲೋಕಾರ್ಪಣೆಗೊಳಿಸಿದರು. ಈ ಉದ್ಯಾನವನದಲ್ಲಿ ಅತ್ಯುತ್ತಮ ವಾಕಿಂಗ್ ಟ್ರ್ಯಾಕ್ ನಿರ್ಮಿಸಲಾಗಿದ್ದು, ಹಿರಿಯ ನಾಗರೀಕರಿಗಾಗಿ ವಿಶ್ರಾಂತಿ ಕುಟೀರ ಹಾಗೂ ಆಸನಗಳ ವ್ಯವಸ್ಥೆಯನ್ನು ಮಾಡಲಾಗಿದೆ. ಇಲ್ಲಿ ಯೋಗಾಸನ, ಧ್ಯಾನ, ನಡಿಗೆ ಚಟುವಟಿಕೆಗಳನ್ನು ಪ್ರತಿನಿತ್ಯ ಮಾಡುವುದರ ಮೂಲಕ ನಾಗರೀಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಶಾಸಕರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಕಾರ್ಯಕ್ರಮದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷರಾದ ಡಾ. ನಾಗೇಂದ್ರ, ಸ್ಥಳೀಯ ಮುಖಂಡರುಗಳಾದ ಎನ್. ಜಯರಾವ್, ಶಿವಾನಂದಮೂರ್ತಿ, ರೈಲ್ವೇ ನಾರಾಯಣ್, ವೆಂಕಟೇಶ್‌ಮೂರ್ತಿ, ಎನ್. ವೆಂಕಟೇಶ್, ಎನ್. ರಾಘವೇಂದ್ರ, ನಾಗರಾಜ್, ಮೊದಲಾದವರು ಭಾಗವಹಿಸಿದ್ದರು.

# ರೈಲ್ವೆ ರಾಜ್ಯ ಸಚಿವ ವಿ ಸೋಮಣ್ಣ ಅವರೊಂದಿಗೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸಮಲೋಚನೆ

ಬೆಂಗಳೂರು : ಐದು ಗಂಟೆಗಳ ಕಾಲ ಬೆಂಗಳೂರಿನಿಂದ ಮೈಸೂರಿಗೆ ವಿಶೇಷ ರೈಲಿನಲ್ಲಿ ಪ್ರಯಾಣ ಮಾಡಿ ಆ ಮಾರ್ಗದಲ್ಲಿ ನಡೆಯುತ್ತಿರುವ ರೈಲ್ವೆ ಇಲಾಖೆಗೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳನ್ನು ಪರಿವೀಕ್ಷಣೆ ನಡೆಸಿದ್ದು ನನಗೆ ವಿಶೇಷ ಅನುಭವವಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ರೈಲು ರೈಲು ಪ್ರಯಾಣದ ನಡುವೆ ತಮ್ಮನ್ನು ಭೇಟಿಯಾದ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರೊಂದಿಗೆ ಇಂದು ಬೆಳಗ್ಗೆ ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ಬೆಳಗ್ಗೆ 10 ಗಂಟೆಗೆ ಹೊರಟು ಅಪರಾಹ್ನ 3 ಗಂಟೆಗೆ ಮೈಸೂರು ತಲುಪಿದ್ದೇವೆ. ವಿಂಡೋ ಟ್ರೈಲಿಂಗ್ ಮೂಲಕ ಪರಿವೀಕ್ಷಣೆ ನಡೆಸಲಾಯಿತು ಎಂದರು.

ನಾನು ಮೊದಲು ಹೆಚ್ಚಾಗಿ ರೈಲಿನಲ್ಲಿಯೇ ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದೆ. ಕೆಲ ವರ್ಷಗಳಿಂದ ರೈಲಿನಲ್ಲಿ ಪ್ರಯಾಣಿಸುವ ಅವಕಾಶ ಸಿಕ್ಕಿರಲಿಲ್ಲ. ಈಗ ಮತ್ತೊಮ್ಮೆ ರೈಲಿನಲ್ಲಿ ಪ್ರಯಾಣಿಸಿ ಜನರ ಸಮಸ್ಯೆ ಆಲಿಸುವ ಅವಕಾಶ ಸಿಕ್ಕಿರುವುದು ಸಂತೋಷ ತಂದಿದೆ. ಕೇಂದ್ರ ಸಚಿವನಾಗಿ ರೈಲಿನಲ್ಲಿ ಸಂಚರಿಸಿದ್ದು, ಆ ಸಂದರ್ಭದಲ್ಲಿ ಜನತೆಯನ್ನು ಮಾರ್ಗದ ಉದ್ದಕ್ಕೂ ಭೇಟಿಯಾಗಿದ್ದು ರೋಮಾಂಚನ ಉಂಟುಮಾಡಿದೆ ಎಂದು ಹೇಳಿದರು.

ಸಾಮೂಹಿಕ ಸಾರಿಗೆ ವ್ಯವಸ್ಥೆಗಳಲ್ಲಿ ರೈಲು ಸಾರಿಗೆಗೆ ಅತ್ಯಂತ ಮಹತ್ವವಿದೆ. ಪ್ರಯಾಣಿಕರ ಸಂಚಾರ ಮಾತ್ರವಲ್ಲದೆ ವಾಣಿಜ್ಯ ದೃಷ್ಟಿಯಿಂದಲೂ ರೈಲು ವ್ಯವಸ್ಥೆ ದೇಶದ ಬೆನ್ನೆಲುಬಾಗಿದೆ. ಮುಖ್ಯವಾಗಿ ಬೆಂಗಳೂರು ಮತ್ತು ಮೈಸೂರು ನಗರಗಳ ನಡುವೆ ರೈಲು ಸಂಚಾರ ಈಗಾಗಲೇ ಉತ್ತಮವಾಗಿದ್ದು ಅದನ್ನು ಮತ್ತಷ್ಟು ಉತ್ತಮಗೊಳಿಸುವ ನಿಟ್ಟಿನಲ್ಲಿ ನಾನು ಮತ್ತು ಸೋಮಣ್ಣನವರು ಚರ್ಚೆ ನಡೆಸಿದ್ದೇವೆ. ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ಈ ಭಾಗದಲ್ಲಿ ಮತ್ತಷ್ಟು ಪರಿವರ್ತನಾತ್ಮಕ ಬೆಳವಣಿಗೆಯನ್ನು ಕಾಣುವ ದಿನಗಳು ದೂರವಿಲ್ಲ ಎಂದು ಕುಮಾರಸ್ವಾಮಿ ಅವರು ಹೇಳಿದರು.

ಪ್ರಮುಖವಾಗಿ ನಾನು ರಾಮನಗರ ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿ ಹಾದುಹೋಗುವ ರೈಲು ಮಾರ್ಗದ ವ್ಯಾಪ್ತಿಯಲ್ಲಿ ಬರುವ ನಿಲ್ದಾಣಗಳ ಅಭಿವೃದ್ಧಿ, ಹೆಚ್ಚುವರಿ ರೈಲುಗಳ ಸಂಚಾರ, ಪ್ರಮುಖ ರೈಲುಗಳ ನಿಲುಗಡೆ, ವಾಣಿಜ್ಯ ಚಟುವಟಿಕೆಗಳ ವೃದ್ಧಿ ಹಾಗೂ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಸಚಿವ ಸೋಮಣ್ಣ ಅವರೊಂದಿಗೆ ವಿಸ್ತೃತ ಮಾತುಕತೆ ನಡೆಸಿದ್ದೇನೆ ಎಂದು ಕುಮಾರಸ್ವಾಮಿ ಅವರು ಮಾಹಿತಿ ನೀಡಿದರು.

ಮುಖ್ಯವಾಗಿ ಎಲ್ಲಾ ಲೆವೆಲ್ ಕ್ರಾಸಿಂಗ್ ಗಳನ್ನು ಪರಿಶೀಲಿಸಿ ಅಗತ್ಯವಿರುವ ಕಡೆ ಅಂಡರ್ ಪಾಸ್ ಗಳನ್ನು ನಿರ್ಮಿಸುವ ನಿಟ್ಟಿನಲ್ಲಿ ಸಚಿವ ಸೋಮಣ್ಣ ಅವರೊಂದಿಗೆ ಚರ್ಚೆ ನಡೆಸಲಾಯಿತು. ಜತೆಗೆ, ಈ ಮಾರ್ಗದ ಮದ್ದೂರು, ಶ್ರೀರಂಗಪಟ್ಟಣ, ಪಾಂಡವಪುರ ಸೇರಿದಂತೆ ಹಲವಾರು ರೈಲು ನಿಲ್ದಾಣಗಳನ್ನು ಅಭಿವೃದ್ಧಿಪಡಿಸಿ ಮೇಲ್ದರ್ಜೆಗೆ ಏರಿಸುವ ಬಗ್ಗೆ ರೈಲ್ವೆ ಸಚಿವರು ಮತ್ತು ಅಧಿಕಾರಿಗಳ ಜತೆ ಸಮಾಲೋಚನೆ ನಡೆಸಲಾಯಿತು ಎಂದು ಬೃಹತ್ ಕೈಗಾರಿಕಾ ಸಚಿವರು ಹೇಳಿದರು.

**ಒಡೆಯರ್ ಎಕ್ಸ್‌ಪ್ರೆಸ್ ನಿಲುಗಡೆಗೆ ಒಪ್ಪಿಗೆ:**

ಮೊದಲಿಗೆ ರಾಮನಗರದಲ್ಲಿ ಬೆಂಗಳೂರು ಮತ್ತು ಮೈಸೂರು ನಡುವೆ ಸಂಚರಿಸುವ ಒಡೆಯರ್ ಎಕ್ಸ್ ಪ್ರೆಸ್




ರೈಲು ನಿಲುಗಡೆಗೆ ರೇಲ್ವೆ ಮಂಡಳಿಯಿಂದ ಅನುಮತಿ ಸಿಕ್ಕಿದೆ. ಅದಷ್ಟು ಬೇಗ ಸದರಿ ರೈಲಿನ ನಿಲುಗಡೆಗೆ ಚಾಲನೆ ನೀಡಲಾಗುವುದು ಎಂದು ಸಚಿವ ಸೋಮಣ್ಣ ಅವರು ಭರವಸೆ ನೀಡಿದ್ದಾರೆಂದು ಕುಮಾರಸ್ವಾಮಿಯವರು ತಿಳಿಸಿದರು.

ಈ ಈ ರೈಲಿನ ನಿಲುಗಡೆಯ ಬಗ್ಗೆ ಕೇಂದ್ರದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ರಾಜ್ಯ ಸಚಿವರಾದ ಸೋಮಣ್ಣ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದ ಕುಮಾರಸ್ವಾಮಿ ಅವರು, ಈ ರೈಲಿನ ನಿಲುಗಡೆಯಿಂದ ರಾಮನಗರದ ಜನರಿಗೆ ಹೆಚ್ಚು ಅನುಕೂಲ ಆಗುತ್ತದೆ ಎಂದು ಎಂದರು.

**ಮದ್ದೂರಿನಲ್ಲಿ ಮತ್ತೊಂದು ರೈಲು ನಿಲ್ದಾಣ:**

ಪಟ್ಟಣದಲ್ಲಿ ಹಾಲಿ ಇರುವ ರೈಲು ನಿಲ್ದಾಣ ಪಟ್ಟಣದ ಜನರಿಗೆ ದೂರದಲ್ಲಿದ್ದು, ಅದು ಸುಮಾರು ನೂರು ವರ್ಷಗಳಷ್ಟು ಹಳೆಯದು. ಹೀಗಾಗಿ ಪಟ್ಟಣದಲ್ಲಿ ಮತ್ತೊಂದು ಸುಸಜ್ಜಿತ ರೈಲು ನಿಲ್ದಾಣ ಅಗತ್ಯವಿದೆ ಎಂದು ಸಚಿವ ಸೋಮಣ್ಣ ಅವರಿಗೆ ಕುಮಾರಸ್ವಾಮಿ ಅವರು ಮನವರಿಕೆ ಮಾಡಿಕೊಟ್ಟರು. ಇದಕ್ಕೆ ಸ್ಪಂದಿಸಿದ ಸಚಿವ ಸೋಮಣ್ಣ ಅವರು ತಕ್ಷಣವೇ ಈ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಜಾಗವನ್ನು ಗುರುತಿಸಿದರೆ ತಕ್ಷಣವೇ ಆ ಜಾಗದ ಸಮೀಕ್ಷೆಗೆ ಅಧಿಕಾರಿಗಳನ್ನು ಕಳಿಸಲಾಗುವುದು. ಪಟ್ಟಣದಲ್ಲಿ ಈಗಿರುವ ರೈಲು ನಿಲ್ದಾಣ ಸಾಕಾಗುತ್ತಿಲ್ಲ, ಪ್ರಯಾಣಿಕರ ದಟ್ಟಣೆ ಜಾಸ್ತಿ ಇದೆ. ಹೀಗಾಗಿ ಎರಡನೇ ನಿಲ್ದಾಣ ಬೇಕೆಂದು ಕುಮಾರಸ್ವಾಮಿ ಅವರು ಮತ್ತು ಡಿ.ಸಿ. ತಮ್ಮಣ್ಣ ಅವರು ಮನವಿ ಮಾಡಿದ್ದಾರೆ. ಮದ್ದೂರು ನಿಲ್ದಾಣ ಬಹಳ ಹಳೆಯ ನಿಲ್ದಾಣ. ಈ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸಿ ಆಧುನಿಕರಣ ಮಾಡಲಾಗುವುದು. ಇನ್ನು ಆರು ತಿಂಗಳಲ್ಲಿ ಅಳಿಯ ನಿಲ್ದಾಣದ ಆಧುನಿಕರಣ ಕಾಮಗಾರಿ ಮುಗಿಸಲಾಗುವುದು. ನಾನು ಮತ್ತು ಕುಮಾರಸ್ವಾಮಿ ಸೇರಿ ಉದ್ಘಾಟನೆ ಮಾಡುತ್ತೇವೆ ಎಂದು ಮದ್ದೂರು ಜನರಿಗೆ ಭರವಸೆ ನೀಡಿದರು.

ಇನ್ನು ನಾಲ್ಕೈದು ದಿನಗಳಲ್ಲಿ ಹಿರಿಯ ಅಧಿಕಾರಿಗಳು ಮದ್ದೂರಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು. ಹಾಗೆಯೇ, ಇಲ್ಲಿ ಕೆಲ ರೈಲುಗಳನ್ನು ನಿಲಗಡಗೆ ಬೇಡಿಕೆ ಇದೆ

ಅದನ್ನು ಪರಿಶೀಲನೆ ಮಾಡುತ್ತೇವೆ. ಈ ಬಗ್ಗೆ ರೈಲ್ವೆ ಸಚಿವರು ಆಶ್ವಾಸನೆ ನೀಡಿದ್ದಾರೆ ಎಂದು ಬೃಹತ್ ಕೈಗಾರಿಕೆ ಸಚಿವರು ಹೇಳಿದರು.

ಮದ್ದೂರು ತಾಲೂಕಿನ ನಿಡಘಟ್ಟ ಬಳಿ ವಿಶೇಷ ರೈಲನ್ನು ನಿಲ್ಲಿಸಿ ಗ್ರಾಮಸ್ಥರನ್ನು ಭೇಟಿಯಾದ ಸಚಿವರುಗಳು, ಅಲ್ಲಿ ರೈಲ್ವೆ ಅಂಡರ್ ಪಾಸ್ ನಿರ್ಮಾಣದ ತುರ್ತು ಅಗತ್ಯವಿದೆ ಎಂಬುದನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸಚಿವರಿಗೆ ಅಹವಾಲು ಸಲ್ಲಿಸಿದ ಗ್ರಾಮಸ್ಥರು, ಕೃಷಿ ಚಟುವಟಿಕೆಗಳಿಗೆ ಹಾಗೂ ವಾಹನಗಳ ಸುಗಮ ಸಂಚಾರಕ್ಕೆ ಅನುಕೂಲವಾಗುವ ರೀತಿಯಲ್ಲಿ ಅಂಡರ್ ಅಂಡರ್ ಪಾಸ್ ನಿರ್ಮಿಸಬೇಕು ಎಂದು ಕೋರಿದರು. ಅದಕ್ಕೂ ಸ್ಪಂದಿಸಬೇಕು ಎಂದು ಕೇಂದ್ರ ಸಚಿವರು ರೈಲ್ವೆ ಸಚಿವರನ್ನು ಕೋರಿದರು.

ತಕ್ಷಣವೇ ಅಧಿಕಾರಿಗಳನ್ನು ಕಳಿಸಿ ಸಮೀಕ್ಷೆ ನಡೆಸಲಾಗುವುದು, ಸಮೀಕ್ಷೆ ವರದಿ ಬಂದ ನಂತರ ತಕ್ಷಣವೇ ಅಂಡರ್ ಪಾಸ್ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಕುಮಾರಸ್ವಾಮಿಯವರು ಮತ್ತು ಸೋಮಣ್ಣ ಅವರು ಸಾರ್ವಜನಿಕರಿಗೆ ಭರವಸೆ ನೀಡಿದರು

ಹನಕೆರೆ ರೈಲ್ವೆ ನಿಲ್ದಾಣದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸಿದ ಸಚಿವರುಗಳು, ನಿಲ್ದಾಣದ ಸ್ಥಿತಿಗತಿಗಳನ್ನು ಪರಿಶೀಲಿಸಿದರು. ಅಲ್ಲದೆ, ನಿಲ್ದಾಣ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು. ಇಲ್ಲಿಯೂ ಕೆಲವೆಡೆ ರೈಲ್ವೆ ಅಂಡರ್ ಪಾಸ್ ಗಳನ್ನು ನಿರ್ಮಿಸಬೇಕು ಎಂದು ಸಾರ್ವಜನಿಕರು ವಿನಂತಿ ಮಾಡಿದರು.

ಪದೇಪದೇ ಲೆವೆಲ್ ಕ್ರಾಸಿಂಗ್ ಗಳಲ್ಲಿ ರೈಲ್ವೆ ಗೇಟ್ ಗಳನ್ನು ಹಾಕುವುದರ ಮೂಲಕ ರೈತರಿಗೆ ಕಷ್ಟವಾಗುತ್ತಿದೆ. ಕಬ್ಬು ಸಾಗಿಸುವ ವಾಹನಗಳಿಗೆ ಅಡ್ಡಿ ಆಗುತ್ತಿದೆ. ಅಲ್ಲದೆ, ಶಾಲಾ ಮಕ್ಕಳಿಗೆ ಕೂಡ ತೊಂದರೆ ಆಗುತ್ತಿದೆ ಎಂದು ಗ್ರಾಮಸ್ಥರು ದೂರಿದರು. ಇವರ ಬೇಡಿಕೆಗೆ ಸ್ಪಂದಿಸಿದ ಕುಮಾರಸ್ವಾಮಿ ಅವರು ಗ್ರಾಮಸ್ಥರ ಪರವಾಗಿ ರೈಲ್ವೆ ಸಚಿವರಿಗೆ ಬೇಡಿಕೆ ಇಟ್ಟು, ಅದಷ್ಟು ಬೇಗ ಲೆವೆಲ್ ಕ್ರಾಸಿಂಗ್ ಗಳಲ್ಲಿ ಮೇಲು ಸೇತುವೆ ಅಥವಾ ನಿರ್ಮಾಣ ಮಾಡಲು ಕೋರಿದರು.

ನಂತರ ಯಲಿಯೂರು, ಪಾಂಡವಪುರ, ಶ್ರೀರಂಗಪಟ್ಟಣ ನಿಲ್ದಾಣದಲ್ಲಿ ರೈಲಿನಿಂದ ಕೆಳಗಿಳಿದ ಸಚಿವರು ಸಾರ್ವಜನಿಕರ ಹವಾಲು ಸ್ವೀಕರಿಸಿದರು.

**15 ದಿನಗಳಲ್ಲಿ ಎಲ್ಲಾ ಅರ್ಜಿಗಳ ಬಗ್ಗೆ ಕ್ರಮ:**

ಎಲ್ಲಾ ನಿರ್ಧಾರಗಳಲ್ಲಿ ಸಾರ್ವಜನಿಕರು ಸಲ್ಲಿಸಿರುವ ಮನವಿಗಳ ಬಗ್ಗೆ ಸಚಿವ ಕುಮಾರಸ್ವಾಮಿ ಅವರು ರೈಲ್ವೆ ಸಚಿವರಾದ ಸೋಮಣ್ಣ ಅವರು ಮತ್ತು ಉನ್ನತ ರೈಲ್ವೆ ಅಧಿಕಾರಿಗಳ ಜೊತೆ ಮಾತುಕತೆ ನಡೆಸಿದರು.

ಜನತೆಯ ಬೇಡಿಕೆಗಳು ತುರ್ತು ರೀತಿಯಲ್ಲಿದ್ದು ಅವುಗಳನ್ನು ಆದಷ್ಟು ಬೇಗ ಪರಿಹಾರ ಮಾಡಬೇಕು ಎಂದು ಕೋರಿದರು. ಇದಕ್ಕೆ ಸ್ಪಂದಿಸಿದ ಸಚಿವ ಸೋಮಣ್ಣ ಅವರು, ಒಂದು ವಾರ ಅಥವಾ 15 ದಿನಗಳಲ್ಲಿ ಜನತೆ ನೀಡಿರುವ ಎಲ್ಲ ಅರ್ಜಿಗಳನ್ನು ಪರಿಶೀಲಿಸಿ ಕ್ರಮ ವಹಿಸುತ್ತೇವೆ. ತಮ್ಮೊಂದಿಗೆ ತಮ್ಮೊಂದಿಗೆ ಮತ್ತೊಂದು ಸುತ್ತಿನ ಸಭೆ ನಡೆಸಲಾಗುವುದು. ಅಧಿಕಾರಿಗಳ ಜೊತೆಯು ನಾನು ಸಭೆ ನಡೆಸುತ್ತೇನೆ ಎಂದು ತಿಳಿಸಿದರು.

ಮಂಡ್ಯದಲ್ಲಿ ಕೆಲವು ಹೊಸ ರೈಲುಗಳ ನಿಲುಗಡೆ ಮಾಡಬೇಕೆಂದು ರೈಲ್ವೆ ಸಚಿವರನ್ನು ಕೋರಿದ್ದೇನೆ. ಅದೇ ರೀತಿ ಕೆಲ ಡೆಮೋ ರೈಲುಗಳನ್ನು ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಕೇಳಿದ್ದೇನೆ. ಅಲ್ಲದೆ, ಕೆಲವು ಪ್ರಮುಖ ರೈಲುಗಳ ನಿಲುಗಡೆ ಕೋರಿ ಕೋರಿಕೆ ಸಲ್ಲಿಸಿದ್ದೇನೆ ಎಂದು ಸಚಿವರು ತಿಳಿಸಿದರು

ಮುಖ್ಯವಾಗಿ ಬೆಂಗಳೂರು ಮೈಸೂರು ನಡುವಿನ ಪ್ರಮುಖ ನಗರವಾದ ಮಂಡ್ಯ ಕೃಷಿ ಮತ್ತು ವಾಣಿಜ್ಯ ಶೆಟುವಟಿಕೆಗಳಲ್ಲಿ ಮುಂಚೂಣಿ ನಗರವಾಗಿದೆ. ಅಲ್ಲದೆ ಪ್ರವಾಸೋದ್ಯಮ ವಲಯದಲ್ಲೂ ಪ್ರಮುಖವಾಗಿದೆ. ಹೀಗಾಗಿ ಮಂಡ್ಯದ ರೈಲ್ವೆ ನಿಲ್ದಾಣವನ್ನು ಅತ್ಯಧುನಿಕ ಮತ್ತು ಸ್ವಸಜಿತ ನಿಲ್ದಾಣವನ್ನಾಗಿ ಪರಿವರ್ತಿಸಬೇಕು ಎಂದು ರೈಲ್ವೆ ಸಚಿವರಿಗೆ ಮನವಿ ಮಾಡಿದರು. ಹೆಚ್ಚು ಫ್ಲಾಟ್ ಫಾರ್ಮ್ ಗಳನ್ನು ಮಾಡುವುದು ಹಾಗೂ ಹಾಲಿ ಇರುವ ಪ್ಲಾಟ್ ಫಾರ್ಮ್ ಗಳನ್ನು ಅಭಿವೃದ್ಧಿಪಡಿಸಿ ಪ್ರಯಾಣಿಕರು ಸುಲಭವಾಗಿ ಸಂಚಾರ ಮಾಡುವ ನಿಟ್ಟಿನಲ್ಲಿ ನಿರ್ಧಾರವನ್ನು ಅಭಿವೃದ್ಧಿಪಡಿಸಬೇಕು ಎಂದು ಸಾರ್ವಜನಿಕರು ಸಚಿವರು ಇಬ್ಬರನ್ನು ಕೋರಿದರು.

ಇದಕ್ಕೆ ಸ್ಪಂದಿಸಿದ ಕುಮಾರಸ್ವಾಮಿಯವರು, ಈಗಾಗಲೇ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಮತ್ತು ನಮ್ಮ ರಾಜ್ಯದವರಾದ ವಿ ಸೋಮಣ್ಣ ಅವರ ಸಹಕಾರದಿಂದ ಮಂಡ್ಯ ನಿಲ್ದಾಣವು ಆಧುನಿಕ ನಿರ್ಧಾರವಾಗಿ ರೂಪಗೊಳ್ಳುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಕಾಲದಲ್ಲಿ ರೈಲು ನಿಲ್ದಾಣಗಳು ವಿಮಾನ ನಿಲ್ದಾಣಗಳ ರೀತಿಯಲ್ಲಿ ಅಭಿವೃದ್ಧಿ ಹೊಂದುತ್ತಿವೆ. ಹೀಗಾಗಿ ಮಂಡ್ಯ ರೈಲು ನಿಲ್ದಾಣವನ್ನು ಕಂಡು ಕೇಳರಿಯದ ರೀತಿಯಲ್ಲಿ ಆಧುನಿಕವಾಗಿ ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಈಗಾಗಲೇ ಕ್ರಮ ವಹಿಸಿದ್ದೇವೆ ಎಂದು ಸಚಿವ ಕುಮಾರಸ್ವಾಮಿ ಅವರು ಮಾಹಿತಿ ನೀಡಿದರು.

ಸಚಿವರ ಜತೆ ನೈರುತ್ಯ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಅಶುತೋಷ್ ಕುಮಾರ್ ಸಿಂಗ್ (ಬೆಂಗಳೂರು) ಸೇರಿ ಹಿರಿಯ ರೈಲ್ವೆ ಅಧಿಕಾರಿಗಳು, ಮಾಜಿ ಸಚಿವರಾದ ಡಿ.ಸಿ. ತಮ್ಮಣ್ಣ, ಸಿ.ಎಸ್. ಪುಟ್ಟರಾಜು, ಸಾ.ರಾ. ಮಹೇಶ್, ಮೈಸೂರು ಮತ್ತು ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಚಾಮರಾಜ ಕೃಷ್ಣರಾಜ ಒಡೆಯರ್ ಅವರು ಇದ್ದರು.

ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವರು, ನನ್ನ ಆತ್ಮೀಯರು ಆಗಿರುವ ಸೋಮಣ್ಣ ಅವರೊಂದಿಗೆ ಬೆಂಗಳೂರು ನಗರದ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ಮೈಸೂರು ರೈಲು ನಿಲ್ದಾಣದವರೆಗೆ ವಿಂಡೋ ಟ್ರೈಲಿಂಗ್ ಪರಿವೀಕ್ಷಣೆ ನಡೆಸಲಾಯಿತು. ಪ್ರಧಾನಿಗಳಾದ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತದ ರೈಲ್ವೆ ವಲಯದಲ್ಲಿ ಪರಿವರ್ತನಾತ್ಮಕ ಬೆಳವಣಿಗೆ ಆಗುತ್ತಿದ್ದು, ಕರ್ನಾಟಕಕ್ಕೆ ಅತಿಹೆಚ್ಚು ಒತ್ತು ನೀಡುತ್ತಿರುವ ಅವರ ಕಾಳಜಿಯನ್ನು ನಾನು ಹೃದಯಪೂರ್ವಕವಾಗಿ ಅಭಿನಂದಿಸುತ್ತೇನೆ. ಇದೇ ಸಂದರ್ಭದಲ್ಲಿ ನಮ್ಮ ರಾಜ್ಯದ ಬೇಡಿಕೆಗಳಿಗೆ ಸದಾ ಸಕಾರಾತ್ಮಕವಾಗಿ ಸ್ಪಂದಿಸುವ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನ್ ವೈಷ್ಣವ್ ಅವರನ್ನು ಈ ಸಂದರ್ಭದಲ್ಲಿ ಸ್ಮರಿಸುತ್ತೇನೆ.

**-ಹೆಚ್.ಡಿ. ಕುಮಾರಸ್ವಾಮಿ**
**ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರು**

# ರೈತರ ಅಭ್ಯುದಯಕ್ಕೆ ಸರ್ಕಾರ ಬದ್ಧ- ಸಚಿವ ಪ್ರಿಯಾಂಕ್ ಖರ್ಗೆ

**ಚಿತ್ತಾಪುರ:** ಕಾಂಗ್ರೆಸ್ ಸರ್ಕಾರ ರೈತರ ಅಭ್ಯುದಯಕ್ಕೆ ಶ್ರಮಿಸುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ನುಡಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ತೋಟಗಾರಿಕೆ ಇಲಾಖೆ ಸಂಯುಕ್ತಾಶ್ರಯದಲ್ಲಿ ಚಿತ್ತಾಪುರ ಪಟ್ಟಣದ ಬಜಾಜ್ ಕಲ್ಯಾಣ ಮಂಟಪದಲ್ಲಿ ನಡೆದ ಕಾರ್ಯಕ್ರಮದಲ್ಲಿ

2025-26 ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದಡಿ ತೋಟಗಾರಿಕೆ ಇಲಾಖೆಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ತರಕಾರಿ ಬೀಜಗಳ ಕಿಟ್ ವಿತರಿಸಿ ಅವರು ಮಾತನಾಡಿದರು.

ನಮ್ಮ ಪಕ್ಷ ಅಧಿಕಾರಕ್ಕೆ ಬಂದ ಮೇಲೆ ರೈತರಿಗೆ ರೂ 2590 ಕೋಟಿ ಅನುದಾನ ಬಿಡುಗಡೆ ಮಾಡಿದ್ದೇವೆ. ಇದರಲ್ಲಿ 656 ಕೋಟಿ ಬೆಳೆ ವಿಮೆ ಸೇರಿದೆ. ಇಷ್ಟೊಂದು ಮೊತ್ತದ ಪರಿಹಾರ ಪಡೆದುಕೊಂಡ ಜಿಲ್ಲೆ ರಾಜ್ಯದಲ್ಲಿ ಮತ್ತೊಂದಿಲ್ಲ. ಜಿಲ್ಲೆಯಲ್ಲಿ ತೊಗರಿಗೆ ನೆಟೆ ರೋಗ ಬಂದು 2 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾದಾಗ ರೂ 182 ಕೋಟಿ ಬಿಡುಗಡೆ ಮಾಡಿದ್ದೇವೆ. ಆದರೆ, ಇದೇ ತರ ಜಿಲ್ಲೆಯ ರೈತರು ನೆರೆ ಹಾಗೂ ಬರದಿಂದ ನಷ್ಟ ಅನುಭವಿಸಿದಾಗ ಅಂದಿನ ಬಿಜೆಪಿ ಸರ್ಕಾರ ಜಿಲ್ಲೆಗೆ ಕೇವಲ 22 ಕೋಟಿ ಮಾತ್ರ ಬಿಡುಗಡೆ ಮಾಡಿತ್ತು ಎಂದು ನೆನಪಿಸಿದರು.

ಕೇಂದ್ರ ಸರ್ಕಾರ ನಮ್ಮ ರೈತರ ವಿರೋಧಿ ನಿಲುವು ತೆಗೆದುಕೊಂಡು ಬಿಡುಗಡೆ ಮಾಡಬೇಕಾದ ಅನುದಾನ ತಡೆಹಿಡಿದಿದ್ದರಿಂದ ರಾಜ್ಯದ ಇಡೀ ಸಚಿವ ಸಂಪುಟ ದೆಹಲಿಯಲ್ಲಿ ಪ್ರತಿಭಟನೆ ಮಾಡಿತ್ತು. ಇತಿಹಾಸದಲ್ಲಿ ರಾಜ್ಯ ಸರ್ಕಾರವೊಂದು ಕೇಂದ್ರದ ವಿರುದ್ಧ ಪ್ರತಿಭಟನೆ ಮಾಡಿದ್ದು ಇದೇ ಮೊದಲು. ಅಷ್ಟಾದರೂ ಕೇಂದ್ರ ಬಗ್ಗದಿದ್ದಾಗ ಕೊನೆಗೆ ರಾಜ್ಯ ಸರ್ಕಾರ ಸುಪ್ರಿಂ ಕೋರ್ಟ್ ಗೆ ಅರ್ಜಿ ಹಾಕಿದಾಗ ಸುಪ್ರಿಂ ಕೋರ್ಟ್ ಛೀಮಾರಿ ಹಾಕಿದ್ದರಿಂದ ಅನುದಾನ ಬಿಡುಗಡೆ ಮಾಡಿತ್ತು. ಇದು ರೈತರ ಪರವಾದ ನಮ್ಮ ಬದ್ದತೆಗೆ ಸಾಕ್ಷಿಯಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡುವ ಗುರಿ ಹೊಂದಿದ್ದೇವೆ. ಪಲ್ಸ್ ಪ್ರೋಟಿನ್ ಹಬ್ ಮಾಡುವ ಯೋಜನೆಗಳಿವೆ. ಈಗಾಗಲೇ ಡ್ರೋನ್ ಮೂಲಕ ಕೀಟನಾಶಕ ಸಿಂಪಡಣೆ ಮಾಡುವ ಯಂತ್ರಗಳನ್ನು ಪರಿಚಯಿಸಲಾಗಿದೆ. ಇನ್ನು ಮುಂದೆಯೂ ಕೂಡಾ ತಂತ್ರಜ್ಞಾನ ಬಳಕೆ ಮಾಡಿಕೊಂಡು ರೈತರಿಗೆ ಮತ್ತಷ್ಟು ಸುಧಾರಿತ ಯಂತ್ರಗಳನ್ನು ಒದಗಿಸುಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಪ್ರಗತಿಪರ ರೈತರಿಗೆ ಸನ್ಮಾನಿಸಲಾಯಿತು. ಜೊತೆಗೆ ಡಿಎಪಿ ಬದಲಿಗೆ ಸಾವಯವ ಗೊಬ್ಬರ ಬಳಕೆ ಕುರಿತಂತೆ ಮಾಹಿತಿ ಒದಗಿಸುವ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ವೇದಿಕೆಯ ಮೇಲೆ ಎಂ ಎಲ್ ಸಿ ತಿಪ್ಪಣ್ಣಪ್ಪ ಕಮಕನೂರು, ಜಗದೇವ ಗುತ್ತೇದಾರ, ಸೈಯದ್ ಮಹೆಮೂದ್ ಚಿಸ್ತಿ ಸಾಹೇಬ್, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಸಿಇಒ ಭಂವರ್ ಸಿಂಗ್ ಮೀನಾ, ಎಸ್ ಪಿ ಅಡ್ಡೂರು ಶ್ರೀನಿವಾಸಲು, ನಾಗರೆಡ್ಡಿ ಪಾಟೀಲ ಕರದಾಳ, ಭೀಮಣ್ಣ ಸಾಲಿ, ಸೇರಿದಂತೆ ಹಲವರಿದ್ದರು.

# ಕೆಲವು ಎಸಿಗಳ ಬೇಜವಾಬ್ದಾರಿಯಿಂದ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿರುವ ಎಸಿಗಳಿಗೂ ಕೆಟ್ಟ ಹೆಸರು: ಕೃಷ್ಣ ಬೈರೇಗೌಡ

ಬೆಂಗಳೂರು : ಕೆಲವು ಎಸಿಗಳ ಬೇಜವಾಬ್ದಾರಿಯಿಂದ ಉತ್ತಮವಾಗಿ ಕೆಲಸ ನಿರ್ವಹಿಸುತ್ತಿರುವ ಎಸಿಗಳಿಗೂ ಕೆಟ್ಟ ಹೆಸರು ಬರುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಬೇಸರ ವ್ಯಕ್ತಪಡಿಸಿದ್ದಾರೆ.

ಕೋರ್ಟ್ ಕೇಸ್ ವಿಲೇವಾರಿಗೆ ಸಂಬಂಧಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ರಾಜ್ಯದ ಎಲ್ಲಾ ಎಸಿ ಗಳ (ಉಪ ವಿಭಾಗಾಧಿಕಾರಿಗಳು) ಮಾಸಿಕ ಪ್ರಗತಿ



ಪರಿಶೀಲನಾ ಸಭೆಯ ಪಾಲ್ಗೊಂಡು ಮಾತನಾಡಿದ ಅವರು, ಎಸಿ ನ್ಯಾಯಾಲಯಗಳಲ್ಲಿನ ಅವಧಿ ಮೀರಿದ ಶೇ.80 ಕ್ಕೂ ಹೆಚ್ಚು ಬಾಕಿ ಪ್ರಕರಣಗಳನ್ನು ಈಗಾಗಲೇ ವಿಲೇವಾರಿ ಮಾಡಲಾಗಿದೆ.

ಮೂರು ವರ್ಷದ ಹಿಂದೆ ಎಸಿ ಕೋರ್ಟ್ನಲ್ಲಿ ಅವಧಿ ಮೀರಿದ 73,624 ಪ್ರಕರಣ ಇತ್ತು. ಅದನ್ನೀಗ 9024 ಕ್ಕೆ ಇಳಿಸಲಾಗಿದೆ.

ರೆಗ್ಯುಲರ್ ಎಸಿಗಳು ಮತ್ತಷ್ಟು ಶ್ರಮವಹಿಸಿದರೆ ಮೇ.20ಕ್ಕೆ ಈ ಸಂಖ್ಯೆ ಮತ್ತಷ್ಟು ಇಳಿಯಲಿದೆ ಎಂದು ತಿಳಿಸಿದ್ದಾರೆ.

ಹಳೆ ತಕರಾರು ಪ್ರಕರಣಗಳ ವಿಲೇವಾರಿಗಾಗಿ ವಿಶೇಷ ಎಸಿ ಗಳ ನೇಮಕ ಮಾಡಲಾಗಿತ್ತು. ಹಳೆ ಪ್ರಕರಣಗಳ ವಿಲೇವಾರಿಯಿಂದ ಹಿಂದಿನ ಬಾಕಿ ಕೇಸುಗಳ ವಿಲೇವಾರಿ ಆಗಬೇಕು ಎಂಬುದು ನಮ್ಮ ಉದ್ದೇಶವಾಗಿತ್ತು. ಆ ಮೂಲಕ ಹೊಸ ಪ್ರಕರಣಗಳ ವಿಲೇವಾರಿಯೂ ಗುಣಮಟ್ಟದಿಂದ ಕೂಡಿರಬೇಕು ಎಂಬುದು ವಿಶೇಷ ಎಸಿಗಳ ನೇಮಕದ ಹಿಂದಿನ ಮೂಲ ಉದ್ದೇಶ ಆದರೆ, ರೆಗ್ಯೂಲರ್ ಎಸಿಗಳು ಹೊಸದಾಗಿ ತೆಗೆದುಕೊಂಡ ಪ್ರಕರಣಗಳನ್ನೂ ಸಹ ಸಮಯಕ್ಕೆ ಸರಿಯಾಗಿ ಗುಣಮಟ್ಟದ ವಿಲೇವಾರಿ ಮಾಡುತ್ತಿಲ್ಲ. ರೆಗ್ಯುಲರ್ ಎಸಿಗಳು ದಾಖಲಿಸಿಕೊಂಡಿರುವ ಪ್ರಕರಣಗಳ ಕಾರಣಕ್ಕೆ ಹಳೆಯ ಪ್ರಕರಣಗಳ ಜೊತೆ ಮತ್ತೆ 1,500 ಪ್ರಕರಣಗಳು ಹೆಚ್ಚಾಗಿವೆ. ರಾಮನಗರ, ತುಮಕೂರು, ಕೊಳ್ಳೆಗಾಲ, ಹುಣಸೂರು, ತರೀಕೆರೆ ವಲಯದಲ್ಲಿ ಹೆಚ್ಚು ಪ್ರಕರಣ ಬಾಕಿ ಎಂದು ತಿಳಿಸಿದ್ದಾರೆ.

**ಹುಣಸೂರಿನಲ್ಲಿ 640 ಪ್ರಕರಣಗಳು ಬಾಕಿ ಇದೆ. ಸಚಿವರು ಗರಂ**

ಬೆಂಗಳೂರು ಉತ್ತರ, ತುಮಕೂರು, ದೊಡ್ಡಬಳ್ಳಾಪುರದ ವಿಶೇಷ ಎಸಿಗಳು ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಗಣನೀಯ ಸಂಖ್ಯೆಯಲ್ಲಿ ಪ್ರಕರಣಗಳನ್ನು ಗುಣಮಟ್ಟವಾಗಿ ವಿಲೇ ಮಾಡುತ್ತಿದ್ದಾರೆ ಎಂದು ಪ್ರಶಂಸಿಸಿದ ಸಚಿವರು.

ಒಂದೂವರೆ ವರ್ಷದ ಹಿಂದೆ ವಿಶೇಷ ಎಸಿಗಳಿಗೆ ಬಾಕಿ ಇದ್ದ ಹಳೆಯ 18300 ಪ್ರಕರಣಗಳನ್ನು ವಿಲೇವಾರಿಗಾಗಿ ನೀಡಲಾಗಿತ್ತು. ಆದರೆ, ಇಂದು ಕೇವಲ 4300 ಪ್ರಕರಣಗಳು ಮಾತ್ರ ಬಾಕಿ ಇವೆ. 14,000 ಪ್ರಕರಣಗಳು ವಿಲೇವಾರಿ ಆಗಿದೆ.

ತುಮಕೂರಿನಲ್ಲಿ ಅತಿಹೆಚ್ಚು ಪ್ರಕರಣ ಬಾಕಿ ಇವೆ. ಅವಧಿ ಮೀರಿದ 1900 ಪ್ರಕರಣ ಬಾಕಿ ಇವೆ. ಈ ಪೈಕಿ 180 ದಿನಕ್ಕೂ ಮೀರಿದ 91 ಪ್ರಕರಣಗಳು ಬಾಕಿ ಇವೆ. ಮೂರು ಜನ ವಿಶೇಷ ಎಸಿಗಳಿದ್ದಾರೆ. ಮುಂದಿನ ಎರಡು ತಿಂಗಳಲ್ಲಿ ಎಲ್ಲಾ ಬಾಕಿ ಪ್ರಕರಣ ವಿಲೇಗೊಳಿಸಲು ಸೂಚನೆ.

ದೊಡ್ಡಬಳ್ಳಾಪುರದಲ್ಲಿ ಅವಧಿ ಮೀರಿದ 1,500 ಪ್ರಕರಣಗಳು ಬಾಕಿ ಇವೆ. ಶೀಘ್ರ ವಿಲೇಗೆ ಸೂಚನೆ. ಕೆಲವರ ಅಸಡ್ಡೆಯಿಂದ ಇಲಾಖೆಯ ಒಳ್ಳೆ ಕೆಲಸಕ್ಕೆ ಮಸಿ ಬಳಿಯಬೇಡಿ. ಉದ್ದೇಶಪೂರ್ವಕವಾಗಿ ಕೆಲಸದಲ್ಲಿ ಅಸಡ್ಡೆ ತೋರಿಸುವುದನ್ನು ಸಹಿಸಲಾಗಲ್ಲ. ಸಚಿವರ ಎಚ್ಚರಿಕೆ.

ಅರ್ಹ ಪ್ರಕರಣಗಳನ್ನು ಮಾತ್ರ ದಾಖಲಿಸಿಕೊಳ್ಳಲು ಎಸಿಗಳಿಗೆ ಸೂಚನೆ. ಕೋಲಾರದಲ್ಲಿ ಅವಧಿ ಮೀರಿದ 550 ಪ್ರಕರಣ ಬಾಕಿ. ಜೂನ್ ತಿಂಗಳೊಳಗೆ ರಾಜ್ಯದ ಯಾವ ಎಸಿ ಬಳಿಯೂ 6 ತಿಂಗಳು ಅವಧಿ ಮೀರಿದ ಪ್ರಕರಣಗಳು ಇರುವಂತಿಲ್ಲ ಎಂದು ಖಡಕ್ ಸೂಚನೆ. ಮೇ.20 ಕ್ಕೆ ಸರ್ಕಾರಕ್ಕೆ 3 ವರ್ಷ ಆಗುವುದರಿಂದ ಸಾಧ್ಯವಾದಷ್ಟು ಪ್ರಕರಣಗಳನ್ನು ವಿಲೇ ಮಾಡಲು ಅಧಿಕಾರಿಗಳಲ್ಲಿ ಸಚಿವರ ಮನವಿ. ಎಲ್ಲಾ ಎಸಿಗಳೂ ಅವರ ಅಧಿಕಾರ ವಲಯದಲ್ಲಿ ಎಷ್ಟು ಪ್ರಕರಣ 180 ದಿನ ಮೀರಿವೆ ಅದನ್ನು ವಿಲೇ ಮಾಡಬೇಕು. ಇಲ್ಲದಿದ್ದರೆ ಎಸಿಗಳಿಗೆ ಆಟೋ ಜನರೇಟ್ ನೋಟೀಸ್. ನೋಟೀಸ್ ತಲುಪಿಯೂ ಕೆಲಸ ಮಾಡದಿದ್ದರೆ ಶಿಸ್ತುಕ್ರಮ.ವಿಶೇಷ ಎಸಿಗಳು ಉತ್ತಮ ಕೆಲಸ ಮಾಡುತ್ತಿದ್ದಾರೆ. ಆದರೆ, ರೆಗ್ಯುಲರ್ ಎಸಿಗಳು ಹಳಿ ತಪ್ಪುತ್ತಿದ್ದು ಶೀಘ್ರ ಅವರೂ ಎಚ್ಚೆತ್ತುಕೊಳ್ಳಬೇಕು ಎಂದು ಸಚಿವರು ತಿಳಿಸಿದ್ದಾರೆ.

# ಪ್ರಾಣಿಗಳ ಸೇವೆಯಲ್ಲಿ ಅಮರರಾದ ಡಾ. ಸಮೀಕ್ಷಾ ರೆಡ್ಡಿ: ಕುಟುಂಬಕ್ಕೆ ಸಂಸದ ಡಾ. ಸಿ ಎನ್ ಮಂಜುನಾಥ್ ಸಾಂತ್ವನ

**ಬೆಂಗಳೂರು:** ಗ್ರಾಮಾಂತರ ಜಿಲ್ಲೆಯ ಜಿಗಣಿ ಹೋಬಳಿಯ ಮಂಟಪ್ಪ ಗ್ರಾಮ ಪಂಚಾಯತ್ ವ್ಯಾಪ್ತಿಯ ಸಕಲವಾರ ಗ್ರಾಮದ ಹೆಮ್ಮೆಯ ಮಗಳಾದ ಪಶುವೈದ್ಯೆ ಡಾ. ಸಮೀಕ್ಷಾ ರೆಡ್ಡಿ ಅವರು, ಶಿವಮೊಗ್ಗ ಜಿಲ್ಲೆಯ ತಾವರೆಕೊಪ್ಪ ಹುಲಿ-ಸಿಂಹ ಧಾಮದಲ್ಲಿ ತಮ್ಮ ಕರ್ತವ್ಯ ನಿರ್ವಹಣೆಯ ವೇಳೆ ನೀರಾನೆ (Hippopotamus) ದಾಳಿಗೆ ಒಳಗಾಗಿ ಗಂಭೀರವಾಗಿ ಗಾಯಗೊಂಡು, ಚಿಕಿತ್ಸೆ ಫಲಕಾರಿಯಾಗದೆ ವಿಧಿವಶರಾದ ಸುದ್ದಿ ಹೃದಯವಿದ್ರಾವಕವಾಗಿದೆ.



ಈ ಹಿನ್ನೆಲೆಯಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಮಾನ್ಯ ಸಂಸದರಾದ ಡಾ. ಸಿ. ಎನ್. ಮಂಜುನಾಥ್ ಅವರು ಮೃತರ ನಿವಾಸಕ್ಕೆ ಭೇಟಿ ನೀಡಿ, ಶೋಕಸಂತಪ್ತ ಕುಟುಂಬದವರಿಗೆ ಆಳವಾದ ಸಾಂತ್ವನ ಸೂಚಿಸಿದರು. ಈ ಸಂದರ್ಭದಲ್ಲಿ ಅವರು ಮಾತನಾಡಿ, "ಡಾ. ಸಮೀಕ್ಷಾ ರೆಡ್ಡಿ ಅವರು ಪ್ರಾಣಿಗಳ ರಕ್ಷಣೆಗೆ ತಮ್ಮ ಬದುಕನ್ನೇ ಅರ್ಪಿಸಿದ ನಿಷ್ಠಾವಂತ ಪಶುವೈದ್ಯರು. ಅವರ ಅಗಲಿಕೆ ಸಮಾಜಕ್ಕೂ, ವೈದ್ಯಕೀಯ ಕ್ಷೇತ್ರಕ್ಕೂ ಅಪೂರಣೀಯ ನಷ್ಟವಾಗಿದೆ. ಇಂತಹ ದುರಂತಗಳು ಮರುಕಳಿಸದಂತೆ ಸಂಬಂಧಿಸಿದ ಘಟನೆಯ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಕುಟುಂಬಕ್ಕೆ ನ್ಯಾಯ ದೊರಕುವಂತೆ ಸರ್ಕಾರ ತಕ್ಷಣ ಕ್ರಮ ವಹಿಸಬೇಕು," ಎಂದು ಅಭಿಪ್ರಾಯಪಟ್ಟರು.

ಅವರು ಮುಂದುವರೆದು, ಇಂತಹ ದೈತ್ಯ ಪ್ರಾಣಿಗಳಿಗೆ ಚಿಕಿತ್ಸೆ ನೀಡುವ ಸಂದರ್ಭಗಳಲ್ಲಿ ಅಗತ್ಯ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸದಿರುವುದು, ಒಬ್ಬರೇ ವೈದ್ಯರನ್ನು ಹಲವು ಕಡೆಗಳಲ್ಲಿ ರೋಸ್ಟರ್ ವ್ಯವಸ್ಥೆಯಡಿ ನಿಯೋಜಿಸುವುದು ಹಾಗೂ ಸಿಬ್ಬಂದಿಗಳ ಕೊರತೆ ಸ್ಪಷ್ಟವಾಗಿ ಗೋಚರಿಸುವುದಾಗಿ ಹೇಳಿದರು. ಜೊತೆಗೆ, ಅತ್ಯಂತ ಪರಿಶ್ರಮದಿಂದ ವೈದ್ಯಕೀಯ ವಿದ್ಯಾಭ್ಯಾಸ ಮುಗಿಸಿದ ಪಶುವೈದ್ಯರಿಗೆ ಕೇವಲ 18,000 ಸಂಬಳ ನೀಡುತ್ತಿರುವುದು ವಿಷಾದನೀಯ ಸಂಗತಿಯಾಗಿದೆ ಎಂದರು. ಡಾ. ಸಮೀಕ್ಷಾ ರೆಡ್ಡಿ ಅವರ ವೃತ್ತಿನಿಷ್ಠೆ ಮತ್ತು ಪ್ರಾಣಿಗಳ ಮೇಲಿನ ಅಪಾರ ಪ್ರೀತಿ ಪ್ರಶಂಸನೀಯವಾಗಿದೆ. ತಾವರೆಕೊಪ್ಪದಂತಹ ಪ್ರಮುಖ ಪ್ರಾಣಿ ಸಂಗ್ರಹಾಲಯದಲ್ಲಿ ಶಾಶ್ವತ ಪಶುವೈದ್ಯರ ಕೊರತೆ ಇರುವುದು ದುರದೃಷ್ಟಕರ. ರಾಜ್ಯದಲ್ಲಿ ಖಾಲಿ ಇರುವ ನೂರಾರು ಪಶುವೈದ್ಯರ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಬೇಕು. ಇಂತಹ ದುರ್ಘಟನೆಗಳು ಭವಿಷ್ಯದಲ್ಲಿ ಮರುಕಳಿಸದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮಾನ್ಯ ಸಂಸದರು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಧ್ಯಕ್ಷರಾದ ರಾಜಶೇಖರ ರೆಡ್ಡಿ ಅವರು, ಬಿಜೆಪಿ ಮುಖಂಡರಾದ ಲಕ್ಷ್ಮಿಕಾಂತ್ ರೆಡ್ಡಿ ರವರು ಸೇರಿದಂತೆ ಅನೇಕ ಗಣ್ಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ಮೃತರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

# ಟ್ಯಾಗ್ಮಾ ಇಂಡಿಯಾ ಆಯೋಜನೆ: ಡೈ & ಮೋಲ್ಡ್ ಇಂಡಿಯಾ 2026 ಪ್ರದರ್ಶನದಲ್ಲಿ ಅತ್ಯಾಧುನಿಕ ಉತ್ಪಾದನಾ ತಂತ್ರಜ್ಞಾನಗಳ ಪ್ರದರ್ಶನ

ಮುಂಬೈ: ಭಾರತದ ಡೈ ಮತ್ತು ಮೋಲ್ಡ್ ಉದ್ಯಮಕ್ಕೆ ಸಂಬಂಧಿಸಿದ ಅತ್ಯಂತ ದೊಡ್ಡ ಮತ್ತು ಪ್ರತಿಷ್ಠಿತ ಕಾರ್ಯಕ್ರಮವಾದ ಡೈ & ಮೋಲ್ಡ್ ಇಂಡಿಯಾ 2026 ಪ್ರದರ್ಶನವು ಏಪ್ರಿಲ್ 21 ರಿಂದ 24, 2026ರವರೆಗೆ ಃಟಟಭಚಿಥಿ ಇಥುಭುಣುಱಟ ಅಜಟಣಡಿಜನಲ್ಲಿ ನಡೆಯಲಿದೆ. ಈ ಮಹತ್ವದ ಪ್ರದರ್ಶನವನ್ನು ದೇಶದ ಸಾಧನ ಮತ್ತು ಡೈ ತಯಾರಕರನ್ನು ಪ್ರತಿನಿಧಿಸುವ ಪ್ರಮುಖ ಸಂಸ್ಥೆ ಟ್ಯಾಗ್ಮಾ ಇಂಡಿಯಾ (TAGMA India) ಆಯೋಜಿಸಿದೆ.

ಕಳೆದ 13 ಯಶಸ್ವಿ ಆವೃತ್ತಿಗಳ ಮೂಲಕ ಈ ಪ್ರದರ್ಶನವು ಭಾರತೀಯ ಡೈ ಮತ್ತು ಮೋಲ್ಡ್ ಕ್ಷೇತ್ರದಲ್ಲಿ ತನ್ನದೇ ಆದ ಗುರುತನ್ನು ಮೂಡಿಸಿಕೊಂಡಿದೆ. ಸುಮಾರು 700 ಸದಸ್ಯ ಕಂಪನಿಗಳ ಬಲಿಷ್ಠ ನೆಲೆ ಹೊಂದಿರುವ ಟ್ಯಾಗ್ಮಾ ಇಂಡಿಯಾ, ಈ ಬಾರಿ ಉದ್ಯಮ ತಜ್ಞರು, ತಾಂತ್ರಿಕ ಪೂರೈಕೆದಾರರು ಮತ್ತು ಜಾಗತಿಕ ಹೊಸ ಆವಿಷ್ಕಾರಕರನ್ನು ಒಂದೇ ವೇದಿಕೆಯಲ್ಲಿ ಸೇರಿಸಲು ಮುಂದಾಗಿದೆ.

ಈ ಪ್ರದರ್ಶನದಲ್ಲಿ ಸಾಧನ ತಯಾರಿಕೆ, ಮೋಲ್ಡ್ ನಿರ್ಮಾಣ, ಪ್ಲಾಸ್ಟಿಕ್ ಇಂಜೆಕ್ಷನ್ ಮೋಲ್ಡಿಂಗ್ ಪ್ರಕ್ರಿಯೆ ಮತ್ತು ಪ್ರಿಸಿಷನ್ ಮ್ಯಾನುಫ್ಯಾಕ್ಚರಿಂಗ್ ಕ್ಷೇತ್ರಗಳಲ್ಲಿನ ಇತ್ತೀಚಿನ ತಂತ್ರಜ್ಞಾನಗಳು ಮತ್ತು ನವೀನತೆಗಳನ್ನು ಪರಿಚಯಿಸಲಾಗುತ್ತದೆ. ಕಂಪ್ಯೂಟರ್ ನಿಯಂತ್ರಿತ ಯಂತ್ರೋಪಕರಣಗಳು, ಎಲೆಕ್ಟ್ರಿಕಲ್ ಡಿಸ್ಚಾರ್ಜ್ ಮಷೀನಿಂಗ್ (EDM), CAD/CAM ವ್ಯವಸ್ಥೆಗಳು, ಲೇಯರ್ ಆಧಾರಿತ ಉತ್ಪಾದನಾ ತಂತ್ರಜ್ಞಾನ, ಹೀಟ್ ಟ್ರೀಟ್ಮೆಂಟ್ ಪರಿಹಾರಗಳು ಮತ್ತು ಉನ್ನತ ಮಟ್ಟದ 3ಆ ಮುದ್ರಣ ತಂತ್ರಜ್ಞಾನಗಳ ಪ್ರದರ್ಶನ ಇಲ್ಲಿ ಕಾಣಸಿಗಲಿದೆ. ಯಂತ್ರಗಳಿಂದ ಹಿಡಿದು ಮೋಲ್ಡ್ ಬೇಸ್ ಮತ್ತು ವಿವಿಧ ಘಟಕಗಳವರೆಗೆ ಸಂಪೂರ್ಣ ಎಂಜಿನಿಯರಿಂಗ್ ಸರಪಳಿ ಇಲ್ಲಿ ಒಳಗೊಂಡಿರುತ್ತದೆ.

ಆಟೋಮೊಬೈಲ್, ಗ್ರಾಹಕ ದೀರ್ಘಕಾಲಿಕ ವಸ್ತುಗಳು, ವಿದ್ಯುತ್ ಸಾಧನಗಳು, ಎಲೆಕ್ಟ್ರಾನಿಕ್ಸ್ ಮತ್ತು ಕೈಗಾರಿಕಾ ಉತ್ಪಾದನೆ ಸೇರಿದಂತೆ ವಿವಿಧ ಕ್ಷೇತ್ರಗಳ ವೃತ್ತಿಪರರು ಈ




ಪ್ರದರ್ಶನದಲ್ಲಿ ಭಾಗವಹಿಸಲಿದ್ದಾರೆ. ಇದರಿಂದ ಜ್ಞಾನ ವಿನಿಮಯ, ಸಂವಾದ ಮತ್ತು ವ್ಯಾಪಾರ ವಿಸ್ತರಣೆಗೆ ಇದು ಪ್ರಮುಖ ವೇದಿಕೆಯಾಗಲಿದೆ. ಜಾಗತಿಕ ಮಾರುಕಟ್ಟೆಯೊಂದಿಗೆ ಸಂಪರ್ಕ ಸಾಧಿಸಲು ಮತ್ತು ಅಂತರರಾಷ್ಟ್ರೀಯ ಸಹಕಾರವನ್ನು ವೃದ್ಧಿಸಲು ಈ ಪ್ರದರ್ಶನವು ಉತ್ತಮ ಅವಕಾಶಗಳನ್ನು ಒದಗಿಸುತ್ತದೆ.

ದೇವರಾಯ ಮಂಜುನಾಥ ಶೇರೇಗಾರ್ ಅವರು ಹೇಳುವಂತೆ, "ಈ ಪ್ರದರ್ಶನವು ಭಾರತೀಯ ಸಾಧನ ತಯಾರಿಕಾ ಉದ್ಯಮದ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ. 2026 ಆವೃತ್ತಿಯಲ್ಲಿ ಜಾಗತಿಕ ಮಟ್ಟದ ತಂತ್ರಜ್ಞಾನಗಳ ಪ್ರದರ್ಶನದೊಂದಿಗೆ ಸಹಕಾರ, ಜ್ಞಾನ ವಿನಿಮಯ ಮತ್ತು ಅಂತರರಾಷ್ಟ್ರೀಯ ಭಾಗವಹಿಸುವಿಕೆಗೆ ನಾವು ಹೆಚ್ಚಿನ ಆದ್ಯತೆ ನೀಡುತ್ತಿದ್ದೇವೆ" ಎಂದು ತಿಳಿಸಿದ್ದಾರೆ.

ಡಿ. ಶಣ್ಮುಗಸುಂದರಂ ಅವರು ಹೇಳುವಂತೆ, "ಹಿಂದಿನ ಆವೃತ್ತಿಗಳಿಗೆ ದೊರೆತ ಭರ್ಜರಿ ಪ್ರತಿಕ್ರಿಯೆಯಿಂದ ಭಾರತೀಯ ಡೈ ಮತ್ತು ಮೋಲ್ಡ್ ಕ್ಷೇತ್ರವು ವೇಗವಾಗಿ ಬೆಳೆಯುತ್ತಿದೆ ಎಂಬುದು ಸ್ಪಷ್ಟವಾಗಿದೆ. 2026ರ ಈ ಪ್ರದರ್ಶನವು ಹೆಚ್ಚು ನಿಖರತೆ, ಉತ್ಪಾದಕತೆ ಮತ್ತು ಜಾಗತಿಕ ಸ್ಪರ್ಧಾತ್ಮಕತೆಗೆ ದಾರಿತೋರುತ್ತದೆ" ಎಂದು ಹೇಳಿದ್ದಾರೆ.

2024ರಲ್ಲಿ ನಡೆದ ಡೈ & ಮೋಲ್ಡ್ ಇಂಡಿಯಾ ಪ್ರದರ್ಶನದಲ್ಲಿ 15ಕ್ಕೂ ಹೆಚ್ಚು ಕೈಗಾರಿಕಾ ಕ್ಷೇತ್ರಗಳಿಂದ 38,000ಕ್ಕೂ ಹೆಚ್ಚು ಮಂದಿ ಭೇಟಿ ನೀಡಿದ್ದರು. ಜೊತೆಗೆ 35ಕ್ಕೂ ಹೆಚ್ಚು ಉತ್ಪನ್ನ ಬಿಡುಗಡೆಗಳು, 15ಕ್ಕೂ ಹೆಚ್ಚು ಮೂಲ ಉಪಕರಣ ತಯಾರಕರ ಭಾಗವಹಿಸುವಿಕೆ, ಕೊರಿಯಾ ಪೆವಿಲಿಯನ್‌ನಲ್ಲಿ ಸುಮಾರು 10 ಕಂಪನಿಗಳ ಉಪಸ್ಥಿತಿ ಮತ್ತು 25ಕ್ಕೂ ಹೆಚ್ಚು ಸಂಸ್ಥೆಗಳ ಪ್ರತಿನಿಧಿಗಳ ಭಾಗವಹಿಸುವಿಕೆ ಈ ಪ್ರದರ್ಶನದ ಜಾಗತಿಕ ಮಹತ್ವವನ್ನು ತೋರಿಸಿತು. ಮುಂದಿನ ಡೈ & ಮೋಲ್ಡ್ ಇಂಡಿಯಾ 2026 ಪ್ರದರ್ಶನವು ಈ ಯಶಸ್ಸನ್ನು ಮತ್ತಷ್ಟು ಮುಂದುವರಿಸಿ, ನವೀನ ತಂತ್ರಜ್ಞಾನ ಅನುಭವ, ತಾಂತ್ರಿಕ ಅಧಿವೇಶನಗಳು, ಪ್ರಮುಖ ಪೂರೈಕೆದಾರರೊಂದಿಗೆ ಸಂಪರ್ಕ ಸಾಧಿಸುವ ಅವಕಾಶಗಳು ಮತ್ತು ಭವಿಷ್ಯದ ಕೈಗಾರಿಕಾ ಪ್ರವೃತ್ತಿಗಳ ಬಗ್ಗೆ ಸಮಗ್ರ ಮಾಹಿತಿಯನ್ನು ಒದಗಿಸಲಿದೆ. ಪ್ರಿಸಿಷನ್ ಮ್ಯಾನುಫ್ಯಾಕ್ಚರಿಂಗ್ ಕ್ಷೇತ್ರದ ತಯಾರಕರು, ಇಂಜಿನಿಯರ್‌ಗಳು, ಖರೀದಿದಾರರು ಮತ್ತು ನಿರ್ಧಾರಕರ್ತರಿಗೆ ಇದು ಅತ್ಯಂತ ಪ್ರಮುಖ ವೇದಿಕೆಯಾಗಿ ಪರಿಣಮಿಸಲಿದೆ.

# ಜಪ, ಅನುಷ್ಠಾನದಿಂದ ಶಾಂತಿ, ಪಾಸಿಟಿವ್ ಎನರ್ಜಿ: ದಿನೇಶ್ ಗುಂಡೂರಾವ್

ಬೆಂಗಳೂರು : ವಿಶ್ವದಲ್ಲಿ ಶಾಂತಿ ಸ್ಥಾಪನೆ ಇಂದಿನ ಅತ್ಯಂತ ಅಗತ್ಯದ ವಿಷಯವಾಗಿದೆ. ಜೈನ್ ಸಮುದಾಯದವರು ಸದಾ ಶಾಂತಿ ಪ್ರಿಯರು. ಎರಡನೇ ವರ್ಷ ನವಕಾರ ಮಹಾಮಂತ್ರ ದಿನವನ್ನು ಅತ್ಯಂತ ಶ್ರದ್ಧೆ ಮತ್ತು ಭಕ್ತಿಯಿಂದ ಇಲ್ಲಿ ಆಚರಿಸುತ್ತಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಜೈನ್ ಇಂಟರನ್ಯಾಷನಲ್ ಟ್ರೇಡ್ ಅರ್ಗನೈಜೆಷನ್ (ಎಖಖಿಔ) ಅವರಿಂದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ನಡೆದ ವಿಶ್ವ ನವಕಾರ ಮಹಾಮಂತ್ರ ದಿನದಲ್ಲಿ ಭಾಗವಹಿಸಿ ಮುನಿಶ್ರೇಷ್ಠರ ಆಶೀರ್ವಾದ ಪಡೆದು ಮಾತನಾಡಿದ ಅವರು, ಅಹಿಂಸೆ, ಶಾಂತಿ, ಮತ್ತು ಆತ್ಮಸಾಕ್ಷಾತ್ಕಾರದ ಸಂದೇಶ ಸಾರುವ ಈ ದಿನದಂದು, ಸಾವಿರಾರು ಜನರು ಒಟ್ಟಾಗಿ ಮಂತ್ರ ಪಠಣ ಮಾಡುವ ಮೂಲಕ ಆಧ್ಯಾತ್ಮಿಕ ಏಕತೆ ಮತ್ತು ಸೌಹಾರ್ದತೆಯನ್ನು ಬಯಸುತ್ತಿದ್ದೇವೆ ಎಂದರು.

ಈ ದಿನವು ಆಧ್ಯಾತ್ಮಿಕ ಜಾಗೃತಿ, ನಕಾರಾತ್ಮಕ ಗುಣಗಳನ್ನು (ಕೋಪ, ಅಹಂಕಾರ) ತೊರೆಯುವುದು ಮತ್ತು ಸಾರ್ವತ್ರಿಕ ಭ್ರಾತೃತ್ವವನ್ನು ಬೆಳೆಸಲು ಪ್ರೇರೇಪಿಸುತ್ತದೆ. ಜಪ, ಅನುಷ್ಠಾನದ ಮೂಲಕ ಎಲ್ಲೆಡೆ ಪಾಸಿಟಿವ್ ಎನರ್ಜಿ ಪಸರಣವಾಗುತ್ತದೆ. ಮನುಷ್ಯತ್ವ, ಸಹೋದರತ್ವ, ಸಹಬಾಳ್ವೆ ಇಂದಿನ ಸಮಾಜದಲ್ಲಿ ಬಹಳ ಮುಖ್ಯವಾಗಿದೆ. ಇದನ್ನು ಎಲ್ಲರೂ ಪಾಲಿಸಿದರೆ ದೇಶದಲ್ಲಿ ಮಹತ್ತರ ಬದಲಾವಣೆ ಸಾಧ್ಯ. ಇಂತಹ ಉದ್ದೇಶದಿಂದ ಆಚರಿಸುತ್ತಿರುವ ಮಹಾಮಂತ್ರ ದಿನದಿಂದ ಎಲ್ಲರಿಗೂ ಒಳಿತಾಗಲಿ ಎಂದು ತಿಳಿಸಿದ್ದಾರೆ.

# ಇಂದಿರಾ ಐವಿಎಫ್ ಬೆಂಗಳೂರು ರಾಜರಾಜೇಶ್ವರಿ ನಗರದಲ್ಲಿ ಹೊಸ ಫರ್ಟಿಲಿಟಿ ಕೇಂದ್ರ ಆರಂಭ

**ಬೆಂಗಳೂರು** : ಭಾರತದ ಪ್ರಮುಖ ಫರ್ಟಿಲಿಟಿ ಸೇವಾ ಸಂಸ್ಥೆಗಳಲ್ಲೊಂದು ಇಂದಿರಾ ಐವಿಎಫ್, ಇಂದು ಬೆಂಗಳೂರು ನಗರದಲ್ಲಿನ ಆರ್‌ಆರ್ ನಗರ (ರಾಜರಾಜೇಶ್ವರಿ ನಗರ)ದಲ್ಲಿ ತನ್ನ ಹೊಸ ಫರ್ಟಿಲಿಟಿ ಕೇಂದ್ರವನ್ನು ಉದ್ಘಾಟಿಸಿರುವುದಾಗಿ ಘೋಷಿಸಿದೆ. ಈ ಹೊಸ ಕೇಂದ್ರದ ಆರಂಭವು ನಗರದಲ್ಲಿ ಸಂಘಟಿತ ಹಾಗೂ ತಂತ್ರಜ್ಞಾನಾಧಾರಿತ ಫರ್ಟಿಲಿಟಿ ಚಿಕಿತ್ಸೆಗೆ ಲಭ್ಯತೆಯನ್ನು ಇನ್ನಷ್ಟು ಬಲಪಡಿಸುವ ದಿಕ್ಕಿನಲ್ಲಿ ಇಂದಿರಾ ಐವಿಎಫ್ ತೆಗೆದುಕೊಂಡ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ.

ಈ ಕೇಂದ್ರವು 2ನೇ ಮಹಡಿ, ಕುಶಾಲ್‌ಸ್ ಶೋರೂಮ್ ಮೇಲ್ಭಾಗ, ಜವಾಹರಲಾಲ್ ನೆಹರು ರಸ್ತೆ, ಬಾಲಕೃಷ್ಣ ರಂಗ ಮಂದಿರ ಎದುರು, BEML ಲೇಔಟ್, 3ನೇ ಹಂತ, ರಾಜರಾಜೇಶ್ವರಿ ನಗರ, ಬೆಂಗಳೂರು-560098 ನಲ್ಲಿ ಸ್ಥಿತವಾಗಿದೆ. ಇಲ್ಲಿ ಇಂದಿರಾ ಐವಿಎಫ್‌ನ ಮಾನಕೃತ ಕ್ಲಿನಿಕಲ್ ಪ್ರೋಟೋಕಾಲ್‌ಗಳು ಹಾಗೂ ಅತ್ಯಾಧುನಿಕ ಪ್ರಯೋಗಾಲಯ ವ್ಯವಸ್ಥೆಗಳ ಬೆಂಬಲದೊಂದಿಗೆ ಸಂಪೂರ್ಣ ಫರ್ಟಿಲಿಟಿ ಮೌಲ್ಯಮಾಪನ ಮತ್ತು ಸಹಾಯಕ ಗರ್ಭಧಾರಣಾ ಚಿಕಿತ್ಸಾ ಸೇವೆಗಳು ಲಭ್ಯವಿರಲಿವೆ.

ಉದ್ಘಾಟನಾ ಸಮಾರಂಭದಲ್ಲಿ ಡಾ. ಶ್ಯಾಮ್ ಎನ್. ಗುಪ್ತಾ, ಸೆಂಟರ್ ಹೆಡ್, ಇಂದಿರಾ ಐವಿಎಫ್ ಜೆಪಿ ನಗರ, ಬೆಂಗಳೂರು, ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಡಾ. ಪ್ರಜ್ವಲ್ ಬಿ ಕೆ, ಸಲಹಾ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಹಾಗೂ ಸೆಂಟರ್ ಹೆಡ್, ಇಂದಿರಾ ಐವಿಎಫ್ ರಾಜರಾಜೇಶ್ವರಿ ನಗರ, ಅವರೊಂದಿಗೆ ಇಂದಿರಾ ಐವಿಎಫ್‌ನ ಹಿರಿಯ ಪ್ರತಿನಿಧಿಗಳು ಹಾಗೂ ವೈದ್ಯಕೀಯ ವೃತ್ತಿಪರರು ಉಪಸ್ಥಿತರಿದ್ದರು. ವಿಸ್ತರಣೆಯ ಕುರಿತು ಪ್ರತಿಕ್ರಿಯಿಸಿದ



ನಿತಿಜ್ ಮುರ್ಡಿಯಾ, ಮ್ಯಾನೇಜಿಂಗ್ ಡೈರೆಕ್ಟರ್, ಇಂದಿರಾ ಐವಿಎಫ್ ಹಾಸ್ಪಿಟಲ್ ಲಿಮಿಟೆಡ್ ಅವರು, ರಾಜರಾಜೇಶ್ವರಿ ನಗರದಲ್ಲಿ ನಮ್ಮ ವಿಸ್ತರಣೆ ಪ್ರಮುಖ ನಗರ ಪ್ರದೇಶಗಳಲ್ಲಿ ಸಂಘಟಿತ ಫರ್ಟಿಲಿಟಿ ಆರೈಕೆಯನ್ನು ಬಲಪಡಿಸುವ ನಮ್ಮ ನಿರಂತರ ಪ್ರಯತ್ನವನ್ನು ತೋರಿಸುತ್ತದೆ. ಇಂದಿರಾ ಐವಿಎಫ್‌ನ ಪ್ರತಿಯೊಂದು ಕೇಂದ್ರವೂ ಏಕೀಕೃತ ಕ್ಲಿನಿಕಲ್ ಪ್ರೋಟೋಕಾಲ್ ಮತ್ತು ಸ್ಥಾಪಿತ ಪ್ರಯೋಗಾಲಯ ವ್ಯವಸ್ಥೆಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, ಇದು ನಮ್ಮ ನೆಟ್‌ವರ್ಕ್‌ನ ಎಲ್ಲ ಕೇಂದ್ರಗಳಲ್ಲಿ ರೋಗಿ ಆರೈಕೆಯಲ್ಲಿ ಏಕರೂಪತೆ ಖಚಿತಪಡಿಸುತ್ತದೆ," ಎಂದು ತಿಳಿಸಿದ್ದಾರೆ.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಡಾ. ಶ್ಯಾಮ್ ಎನ್. ಗುಪ್ತಾ ಅವರು,"ನಗರೀಕರಣ ಹೆಚ್ಚುತ್ತಿರುವ ಸಮುದಾಯಗಳಲ್ಲಿ ರಚನೆಗೊಳ್ಳುವ ಪ್ರಜನನ ಆರೋಗ್ಯ ಸೇವೆಗಳನ್ನು ಬಲಪಡಿಸುವಲ್ಲಿ ಸಂಘಟಿತ ಫರ್ಟಿಲಿಟಿ ಆರೈಕೆ ಮಹತ್ವದ ಪಾತ್ರ ವಹಿಸುತ್ತದೆ.

ರಾಜರಾಜೇಶ್ವರಿ ನಗರದಲ್ಲಿ ಈ ಹೊಸ ಕೇಂದ್ರದ ಆರಂಭವು ಹೆಚ್ಚಿನ ದಂಪತಿಗಳಿಗೆ ತಮ್ಮದೇ ನೆರೆಹೊರೆಯಲ್ಲೇ ಸಮಯೋಚಿತ ಸಲಹೆ ಮತ್ತು ಚಿಕಿತ್ಸೆ ಪಡೆಯಲು ನೆರವಾಗಲಿದೆ," ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಪ್ರಜ್ವಲ್ ಬಿ ಕೆ, ಸಲಹಾ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಹಾಗೂ ಸೆಂಟರ್ ಹೆಡ್, ಇಂದಿರಾ ಐವಿಎಫ್ ರಾಜರಾಜೇಶ್ವರಿ ನಗರ, "ಫರ್ಟಿಲಿಟಿ ಚಿಕಿತ್ಸೆಗೆ ಸೂಕ್ಷ್ಮ ನಿರ್ಣಯ, ಸಮಗ್ರ ಸಲಹೆ ಮತ್ತು ವೈಯಕ್ತಿಕ ಚಿಕಿತ್ಸಾ ಯೋಜನೆ ಅಗತ್ಯವಿರುತ್ತದೆ. ರಾಜರಾಜೇಶ್ವರಿ ನಗರದ ಈ ಕೇಂದ್ರವನ್ನು ಅನುಭವೀ ವೈದ್ಯಕೀಯ ತಂಡಗಳು ಹಾಗೂ ಅಭಿವೃದ್ಧಿಗೊಂಡ ಪ್ರಯೋಗಾಲಯ ವಿಧಾನಗಳೊಂದಿಗೆ ರಚನಾತ್ಮಕ ಕ್ಲಿನಿಕಲ್ ವಾತಾವರಣ ಒದಗಿಸುವ ಉದ್ದೇಶದಿಂದ ವಿನ್ಯಾಸಗೊಳಿಸಲಾಗಿದೆ," ಎಂದು ಹೇಳಿದರು.

ಈ ಕೇಂದ್ರದ ಆರಂಭದೊಂದಿಗೆ, ಇಂದಿರಾ ಐವಿಎಫ್ ತನ್ನ ರಾಷ್ಟ್ರವ್ಯಾಪಿ ಹಾಜರಾತಿಯನ್ನು ಮತ್ತಷ್ಟು ವಿಸ್ತರಿಸಿದ್ದು, ಭಾರತಾದ್ಯಂತ 200+ ಕ್ಲಿನಿಕ್‌ಗಳ ನೆಟ್‌ವರ್ಕ್‌ಗೆ ಮತ್ತೊಂದು ಸೇರ್ಪಡೆ ಆಗಿದೆ.

ರಾಜರಾಜೇಶ್ವರಿ ನಗರ ಕೇಂದ್ರದಲ್ಲಿ ಪುರುಷ ಮತ್ತು ಮಹಿಳಾ ವಂಧ್ಯತ್ವಕ್ಕೆ ಸಂಬಂಧಿಸಿದ ಸಂಪೂರ್ಣ ಫರ್ಟಿಲಿಟಿ ಹಾಗೂ ಸಹಾಯಕ ಗರ್ಭಧಾರಣಾ ಸೇವೆಗಳು ಲಭ್ಯವಿರಲಿದ್ದು, ಮಾನಕೃತ ಪ್ರಯೋಗಾಲಯ ಕ್ರಮಗಳು, ಎಲೆಕ್ಟ್ರಾನಿಕ್ ಮೆಡಿಕಲ್ ರೆಕಾರ್ಡ್ಸ್ ಮತ್ತು ರೋಗಿ ಸುರಕ್ಷತಾ ವ್ಯವಸ್ಥೆಗಳ ಬೆಂಬಲವಿರುವುದು ವಿಶೇಷ.

# ಏ.15ರಂದು ನಯನದಲ್ಲಿ ರಂಗಚಂದಿರ ಟ್ರಸ್ಟ್‌ನ ವೈಭವಶಾಲಿ ಸಾಂಸ್ಕೃತಿಕ ಸಂಭ್ರಮ

**ಬೆಂಗಳೂರು:** ರಾಜ್ಯದ ರಂಗಭೂಮಿ ಮತ್ತು ಸಾಹಿತ್ಯ ವಲಯಕ್ಕೆ ಮಹತ್ವದ ಕೊಡುಗೆ ನೀಡುತ್ತಿರುವ ರಂಗಚಂದಿರ ಟ್ರಸ್ಟ್ ವತಿಯಿಂದ ಏಪ್ರಿಲ್ 15ರಂದು ಸಂಜೆ 5 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರ ಆವರಣದ ನಯನ ರಂಗಮಂದಿರದಲ್ಲಿ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಖ್ಯಾತ ಸಾಹಿತಿ ಎಸ್.ಜಿ. ಸಿದ್ದರಾಮಯ್ಯ ಅವರ 'ಮಹಾಮನೆ' ನಾಟಕ ಕೃತಿಯ ಪುಸ್ತಕ ಬಿಡುಗಡೆ, ರಂಗಗೀತೆಗಳ ಗಾಯನ ಹಾಗೂ ರಂಗಗೌರವ ಸಮಾರಂಭ ಒಂದೇ ವೇದಿಕೆಯಲ್ಲಿ ಜರುಗಲಿದ್ದು, ರಂಗಾಸಕ್ತರಿಗೆ ಅಪರೂಪದ ಸಾಂಸ್ಕೃತಿಕ ಸಂಭ್ರಮ ಒದಗಿಸಲಿದೆ. ಈ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಪ್ರೊ. ಶಿವರಾಮಯ್ಯ ಅವರು 'ಮಹಾಮನೆ' ಕೃತಿಯನ್ನು ಬಿಡುಗಡೆಗೊಳಿಸಲಿದ್ದಾರೆ. ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜಮೂರ್ತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ರಂಗ ನಿರ್ದೇಶಕ ಮತ್ತು ನಾಟಕಕಾರ ಡಾ. ಬೇಲೂರು ರಘುನಂದನ್ ಕೃತಿಯ ಕುರಿತು ವಿಮರ್ಶಾತ್ಮಕವಾಗಿ ಮಾತನಾಡಲಿದ್ದಾರೆ.

ಕಾರ್ಯಕ್ರಮಕ್ಕೆ ಬೆಂಗಳೂರು ನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ. ಪ್ರಕಾಶಮೂರ್ತಿ, ಹಿರಿಯ ಪತ್ರಕರ್ತ ಜಿ.ಎನ್. ಮೋಹನ್, ರಂಗಚಂದಿರ ಟ್ರಸ್ಟ್ ಗೌರವಾಧ್ಯಕ್ಷ ರಾಧಾಕೃಷ್ಣ ಹೆಗಡೆ ಹಾಗೂ ಚಾರುಮತಿ ಪ್ರಕಾಶನದ ಜಿ.ಎಸ್. ವಿದ್ಯಾರಣ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

**ರಂಗಗೌರವಕ್ಕೆ ಏಳು ಗಣ್ಯರು**

ಕರ್ನಾಟಕದ ರಂಗಭೂಮಿಗೆ ತಮ್ಮದೇ ಆದ ಕೊಡುಗೆ ನೀಡಿರುವ ಏಳು ಗಣ್ಯರನ್ನು ಇದೇ ಸಂದರ್ಭದಲ್ಲಿ 'ರಂಗಗೌರವ' ಪ್ರಶಸ್ತಿಯಿಂದ ಸನ್ಮಾನಿಸಲಾಗುತ್ತದೆ. ಡಾ. ಎಚ್.ಎಲ್. ಪುಷ್ಪ, ಹೆಚ್.ಎನ್. ರಾಜಶ್ರೀ, ಡಾ. ಟಿ. ಪದ್ಮ, ಡಾ. ತಿಪ್ಪ ನಾಯಕ್, ವಡವಾಟಿ ಶಾರದಾ ಭರತ್, ಕಾವೇರಿ ಶ್ರೀಧರ್ ಹಾಗೂ ಭಾಸ್ಕರ್ ಕುಪ್ಪೂರು ಅವರು ಈ ಗೌರವಕ್ಕೆ ಪಾತ್ರರಾಗಿದ್ದಾರೆ.

**ರಂಗಗೀತೆಗಳ ಮಧುರ ಸಂಭ್ರಮ**

ಕಾರ್ಯಕ್ರಮದ ಮತ್ತೊಂದು ಆಕರ್ಷಣೆಯಾಗಿ "ಆದಿಮೂಲ ಹೊಕ್ಕಳ ಬಳ್ಳಿಯ ಚರಿತೆ" ಎಂಬ ರಂಗಗೀತೆಗಳ ಗಾಯನ ಪ್ರಸ್ತುತಪಡಿಸಲಾಗುತ್ತದೆ. ಸಂಗೀತ ಮತ್ತು ನಾಟಕದ ಸಂಯೋಜನೆಯ ಈ ವಿಶೇಷ ಭಾಗವು ಪ್ರೇಕ್ಷಕರಿಗೆ ಕಲಾತ್ಮಕ ಅನುಭವ ನೀಡಲಿದೆ.

ರಂಗಚಂದಿರ ಟ್ರಸ್ಟ್ ಅಧ್ಯಕ್ಷೆ ಡಾ. ಟಿ. ಪದ್ಮ, ಸಂಚಾಲಕರಾದ ಡಾ. ಮಾಗಡಿ ಗಿರೀಶ್, ಶ್ರೀಧರ್ ಗೌಡ, ಉಪಾಧ್ಯಕ್ಷ ಹೇಮಂತ್ ಗೌಡ ಹಾಗೂ ಕಾರ್ಯದರ್ಶಿ ಎ.ಎಸ್. ಚಂದ್ರಶೇಖರ್ (ಜಿಪಿಒ ಚಂದ್ರು) ಪ್ರಕಟಣೆಯಲ್ಲಿ ರಂಗಾಸಕ್ತರು, ಸಾಹಿತ್ಯಪ್ರಿಯರು ಮತ್ತು ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

# ತಾಲ್ಲೂಕು ರೈತ ಸಂಘ ವತಿಯಿಂದ ತಾಲ್ಲೂಕು ಕಚೇರಿ ಮುತ್ತಿಗೆ

**ಕೆ.ಆರ್.ಪೇಟೆ** : ತಾಲ್ಲೂಕಿನಾದ್ಯಂತ ಸರ್ಕಾರಿ ಕಛೇರಿಗಳಲ್ಲಿ ನಡೆಯುತ್ತಿರುವ ಭ್ರಷ್ಟಾಚಾರವನ್ನು ತಡೆಗಟ್ಟುವಂತೆ ಆಗ್ರಹಿಸಿ ತಾಲ್ಲೂಕು ರೈತ ಸಂಘದ ನೂರಾರು ಕಾರ್ಯಕರ್ತರು ಪಟ್ಟಣದ ಮಿನಿ ವಿಧಾನ ಸೌಧಕ್ಕೆ ಮುತ್ತಿಗೆ ಹಾಕಿ ಅನಿರ್ಧಿಷ್ಠ ಕಾಲದ ಪ್ರತಿಭಟನೆ ನಡೆಸಿದರು. ಕರ್ನಾಟಕ ರೈತ ಸಂಘದ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ನಂದಿನಿಜಯರಾಂ, ಜಿಲ್ಲಾ ರೈತಸಂಘದ ಮಾಜಿ ಅಧ್ಯಕ್ಷ ಎಂ.ವಿ.ರಾಜೇಗೌಡ, ತಾಲೂಕು ಘಟಕದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ, ರೈತ ಮುಖಂಡರಾದ ಕೆ.ಆರ್.ಜಯರಾಂ, ಎಲ್.ಬಿ.ಜಗದೀಶ್ ನೇತೃತ್ವದಲ್ಲಿ ಮಿನಿವಿಧಾನ ಸೌಧಕ್ಕೆ ಮುತ್ತಿಗೆ ಹಾಕಿ ರೈತರು ಭ್ರಷ್ಟ ಅಧಿಕಾರಿಗಳ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ಶಂಕ, ಜಾಗಟೆ ಮತ್ತು ತುತ್ತೂರಿ ಊದಿ ರೈತರ ಪಾಲಿಗೆ ಸರ್ಕಾರ ಸತ್ತಿದೆ, ಗೋವಿಂದಾ.., ಗೋವಿಂದಾ.. ಎಂದು ಕೂಗುವ ಮೂಲಕ ಮಿನಿ ವಿಧಾನ ಸೌಧದ ಮೆಟ್ಟಿಲುಗಳ ಮೇಲೆ ಕುಳಿತು ಧರಣಿ ನಡೆಸುವ ಮೂಲಕ ವಿಶೇಷವಾಗಿ ಪ್ರತಿಭಟನೆ ನಡೆಸಿದರು.

ತಾಲೂಕಿನ ಗವೀಮಠದ ಮೊರಾರ್ಜಿ ವಸತಿ ಶಾಲೆಯ ಅಕ್ಕಿ ಹಗರಣ, ಕಂದಾಯ ಇಲಾಖೆಯಲ್ಲಿ ಅಕ್ರಮವಾಗಿ ಪೌತಿ ಖಾತೆಗಳನ್ನು ಮಾಡಿ ರೈತರಿಗೆ ಕಿರುಕುಳ ನೀಡುತ್ತಿರುವುದು ಮತ್ತು ಮಿನಿ ವಿಧಾನ ಸೌಧದ ಆವರಣದಲ್ಲಿ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ರೈತ ಮುಖಂಡ ಎಂ.ವಿ.ರಾಜೇಗೌಡ ಶಿಕ್ಷಣ ಇಲಾಖೆಯ ಸೂಚನೆಯ ಮೇರೆಗೆ ತಾಲೂಕು ಟಿ.ಎ.ಪಿ.ಸಿ.ಎಂ.ಎಸ್ ನ ಗೋಡನ್ ನಿಂದ ಎತ್ತುವಳಿಯಾಗಿ ಗವೀಮಠದ ವಸತಿ ಶಾಲೆಗೆ ಸೇರಬೇಕಾದ ಅಕ್ಕಿ ವಸತಿ ಶಾಲೆ ಸೇರುವ ಬದಲು ಪಟ್ಟಣದ ಖಾಸಗಿ ರೈಸ್ ಮಿಲ್‌ಗೆ ಹೋಗಿದೆ. ದಿನಾಂಕ: 07 ,03.2026 ರಂದು ಖಾಸಗಿ ರೈಸ್ ಮಿಲ್‌ಗೆ ಹೋದ ಅಕ್ಕಿಯನ್ನು ಲಾರಿ ಸಮೇತ ಪತ್ತೆ ಹಚ್ಚಿ ತಾಲೂಕಿನ ರೈತಸಂಘದ ಕಾರ್ಯಕರ್ತರು ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿ 21ದಿನಗಳು ಕಳೆದರೂ ಇದುವರೆಗೂ ಯಾವುದೇ ತನಿಖೆಯಾಗಿಲ್ಲ. ವಸತಿ ಶಾಲೆಗೆ ಸೇರಬೇಕಾದ ಅಕ್ಕಿಯನ್ನು ಖಾಸಗಿ ರೈಸ್‌ಮಿಲ್‌ಗೆ ಸಾಗಿಸಿದ್ದು ಏಕೆ ಎಂಬುದರ ಬಗ್ಗೆ ತನಿಖೆ ನಡೆಸಬೇಕು. ಸೂಕ್ತ ದಾಖಲೆ ನೀಡಬೇಕು. ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ಥಳಕ್ಕೆ ಕರೆಸಬೇಕು ಎಂದು ಒತ್ತಾಯಿಸಿದರು.

ತಾಲೂಕು ರೈತಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ ಮಾತನಾಡಿ ತಾಲೂಕಿನಾದ್ಯಂತ ಸರ್ಕಾರಿ ಕಛೇರಿಗಳಲ್ಲಿ ರೈತರ ಕೆಲಸ ಆಗುತ್ತಿಲ್ಲ. ಬಹುತೇಕ ಅಧಿಕಾರಿಗಳು ದಲ್ಲಾಳಿಗಳನ್ನು ನೇಮಕ ಮಾಡಿಕೊಂಡಿದ್ದು ಕಮೀಷನ್ ದಂದೆಯಲ್ಲಿ ಮುಳುಗಿದ್ದಾರೆ. ಶೀಘ್ರ ಕೆಲಸ ಆಗಬೇಕಾದರೆ ರೈತರು ದಲ್ಲಾಳಿಗಳ ಮೂಲಕವೇ ಹೋಗಬೇಕಾದ ಅನಿವಾರ್ಯ ಪರಿಸ್ಥಿಯನ್ನು ಅಧಿಕಾರಿಗಳು ನಿರ್ಮಿಸಿದ್ದಾರೆ. ಸರ್ಕಾರಿ ಆಸ್ತಿ ಪಾಸ್ತಿಗಳು ರಾಜಾರೋಷವಾಗಿ ಬಲಾಢ್ಯರ ಅತಿಕ್ರಮಕ್ಕೆ ಒಳಗಾಗುತ್ತಿದ್ದರೂ ಸರ್ಕಾರಿ ಆಸ್ತಿ ಸಂರಕ್ಷಣಗೆ ಅಧಿಕಾರಿಗಳು ಕ್ರಮ ವಹಿಸುತ್ತಿಲ್ಲ. ಬ್ರಷ್ಟ ಅಧಿಕಾರಿಗಳಿಂದ ರೈತರು ನೆಮ್ಮದಿಯ ಬದುಕು ಸಾಗಿಸಲಾಗುತ್ತಿಲ್ಲ ಅಧಿಕಾರಿಗಳು ಮತ್ತು ರಾಜಕಾರಣಿಗಳು ಬ್ರಷ್ಟರ ರಕ್ಷಣೆಗೆ ನಿಂತಿದ್ದಾರೆ. ಉನ್ನತ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ತಪ್ಪಿತಸ್ಥ ನೌಕರರ ವಿರುದ್ಧ ಕಠಿಣ ಕ್ರಮ ಜರುಗಿಸುವವರೆಗೂ ನಾವು ಸ್ಥಳದಿಮದ ಕದಲುವುದಿಲ್ಲ ಎಂದರು.

**ಸಂಧಾನ ವಿಫಲ:** ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ್ ಡಾ.ಎಸ್.ಯು.ಅಶೋಕ್ ಏಪ್ರಿಲ್ 18 ರಂದು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಕರೆಸಿ ರೈತರ ಸಮ್ಮುಖದಲ್ಲಿಯೇ ನಡೆಸಿ ಸೂಕ್ತ ಕ್ರಮ ತೆಗೆದುಕೊಳ್ಳುತ್ತೇನೆ. ಅಲ್ಲಿಯವರೆಗೂ ಪ್ರತಿಭಟನೆಯನ್ನು ಕೈಬಿಡುವಂತೆ ಮನವಿ ಮಾಡಿದರು. ಆದರೆ ತಾಲೂಕು ಆಡಳಿತ ಮನವಿಯನ್ನು ತಿರಸ್ಕರಿಸಿರುವ ರೈತರು ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದ್ದಾರೆ.

ರಾಜ್ಯ ರೈತಸಂಘ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ನಂದಿನಿ ಜಯರಾಂ, ರೈತ ಮುಖಂಡರಾದ ಕೆ.ಆರ್.ಜಯರಾಂ, ಎಲ್.ಬಿ.ಜಗದೀಶ್, ಜಿಲ್ಲಾ ರೈತಸಂಘದ ಉಪಾಧ್ಯಕ್ಷ ಮರುವನಹಳ್ಳಿ ಶಂಕರ್, ಬೂಕನಕೆರೆ ನಾಗರಾಜು, ಮಡುವಿನಕೋಡಿ ಪ್ರಕಾಶ್, ಕೃಷ್ಣಾಪುರ ರಾಜಣ್ಣ, ಸಿಂಧುಘಟ್ಟ ಮುದ್ದುಕುಮಾರ್, ನಗರೂರು ಕುಮಾರ್, ಅಕ್ಕಿಮಂಚನಹಳ್ಳಿ ಹೊನ್ನೇಗೌಡ, ಬೇಲದಕೆರೆ ಶಿವಣ್ಣ, ಚೌಡೇನಹಳ್ಳಿ ಕೃಷ್ಣೇಗೌಡ, ನೀತಿಮಂಗಲ ಮಹೇಶ್, ಕರೋಟಿ ತಮ್ಮಯ್ಯ, ಹಿರೀಕಳಲೆ ಬಸವರಾಜು,ಲಕ್ಷ್ಮೀ ಪುರ ನಾಗರಾಜು, ನಾರಾಯಣಸ್ವಾಮಿ, ಶಿವಪುರ ಕೆ.ಆರ್.ಎಸ್ ನಾಗರಾಜು ಸೇರಿದಂತೆ ನೂರಾರು ರೈತ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಸಮುದಾಯ ಶ್ವಾನಗಳ ದತ್ತು ನೀಡಲು ಅಭಿಯಾನ ನಡೆಸಿ: ದಲ್ಜಿತ್ ಕುಮಾರ್

**ಬೆಂಗಳೂರು** : ಕೇಂದ್ರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ಸಮುದಾಯ ಶ್ವಾನಗಳನ್ನು ಪ್ರಾಣಿಪ್ರಿಯರು ದತ್ತು ಪಡೆದುಕೊಳ್ಳುವಂತೆ ಅಭಿಯಾನ ನಡೆಸುವಂತೆ ಕೇಂದ್ರ



ನಗರ ಪಾಲಿಕೆಯ ಅಭಿವೃದ್ಧಿ ಅಪರ ಆಯುಕ್ತರಾದ ದಲ್ಜಿತ್ ಕುಮಾರ್ ಪಶುಸಂಗೋಪನೆ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಎಬಿಸಿ ಹಾಗೂ ಎ.ಆರ್.ವಿ ಕುರಿತು ಪಶು ಸಂಗೋಪನೆ ವಿಭಾಗದ ಅಧಿಕಾರಿಗಳು ಹಾಗೂ ಸಮುದಾಯದ ಶ್ವಾನಗಳ ನಿರ್ವಹಣೆ ಎನ್.ಜಿ.ಓ ಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು ಸಮುದಾಯ ಶ್ವಾನಗಳನ್ನು ಪ್ರಾಣಿಪ್ರಿಯರು ದತ್ತು ಪಡೆದುಕೊಳ್ಳುವಂತೆ ಅಭಿಯಾನ ನಡೆಸಲು ಹಾಗೂ ದತ್ತು ನೀಡುವಾಗ ಶ್ವಾನಗಳ ಆರೋಗ್ಯ ಪರಿಶೀಲನೆ ನಡೆಸಿ ಅಗತ್ಯ ಲಸಿಕೆಗಳನ್ನು ನೀಡುವುದರೊಂದಿಗೆ ನಾಯಿಗಳನ್ನು ದತ್ತು ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಮಾನ್ಯ ಭಾರತದ ಸರ್ವೋಚ್ಚ**

ನ್ಯಾಯಾಲಯವು ನೀಡಿದ ಆದೇಶದಲ್ಲಿನ ಮಾರ್ಗಸೂಚಿಯಂತೆ ಸಮುದಾಯದ ನಾಯಿಗಳ ನಿರ್ವಹಣೆಗೆ ಹಾಗೂ ಲಸಿಕೆಗಳ ಹಾಕಲು ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

**ಎಬಿಸಿ ಕೇಂದ್ರ ಸ್ವಚ್ಛತೆ ಕಾಪಾಡಿ**

ಕೇಂದ್ರ ನಗರ ಪಾಲಿಕೆಯ ಪಶು ಸಂಗೋಪನೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆವರಣದಲ್ಲಿನ ಎಬಿಸಿ ಕೇಂದ್ರದಲ್ಲಿ ಸ್ವಚ್ಛತೆ ಕಾಪಾಡುವಂತೆ ಸೂಚಿಸಿದರು.

ಸಭೆಯಲ್ಲಿ ಪಶುಸಂಗೋಪನೆ ಸಹಾಯಕ ನಿರ್ದೇಶಕರಾದ ಬಸವರಾಜೇಂದ್ರ ಬಿರಾದಾರ, ಹೆಚ್.ಓ.ಡಿ. ವೀಣಾ, ಡಾ. ರಾಜೇಂದ್ರ, ಡಾ. ಶಿವಕುಮಾರ್, SPCA ಪ್ರತಿನಿಧಿಗಳು ಭಾಗವಹಿಸಿದ್ದರು.

# 40ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಸರ್ವ ಸಜ್ಜಾಗಿ ನಿಂತ ಬೀದರ್

## ಏ.11ಕ್ಕೆ ಸಮ್ಮೇಳನ ಉದ್ಘಾಟಿಸಲಿರುವ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ

ಬೆಂಗಳೂರು: ನಾಡಿನ ಮುಕುಟಪ್ರಾಯವಾಗಿರುವ ಬೀದರನಲ್ಲಿ ಇದೇ 11 ಮತ್ತು 12ರಂದು ನಡೆಯಲಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನಕ್ಕೆ ಸಿದ್ಧತೆಗಳು ಪೂರ್ಣಗೊಂಡಿದ್ದು, ಸುದ್ದಿಮನೆಯ ಪತ್ರಕರ್ತರನ್ನು ಸ್ವಾಗತಿಸಿಕೊಳ್ಳಲು ಬಸವನ ನಾಡು ಬೀದರ ಸಜ್ಜಾಗಿದೆ.

ಬೆಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಸಮ್ಮೇಳನದ ಆಹ್ವಾನ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿದ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಎರಡು ದಶಕಗಳ ಬಳಿಕ ಬೀದರ್‌ನಲ್ಲಿ ನಡೆಯುತ್ತಿರುವ ಸಮ್ಮೇಳನಕ್ಕೆ ಎರಡು ದಿನಗಳಲ್ಲಿ 5 ಸಾವಿರ ಪತ್ರಕರ್ತರು ಭಾಗಿಯಾಗುವ ನಿರೀಕ್ಷೆ ಇದೆ ಎಂದರು.



ಈ ಸಮ್ಮೇಳನದಲ್ಲಿ ಗಾಂಧಿ ಮತ್ತು ಅಂಬೇಡ್ಕರ್ ಕುರಿತು ಗೋಷ್ಠಿ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮತ್ತು ಮಾಧ್ಯಮ ಗೋಷ್ಠಿ, ಮಾಹಿತಿ ಹಕ್ಕು ಮತ್ತು ಪತ್ರಕರ್ತರು ಗೋಷ್ಠಿ, ಆರ್ಟಿಫಿಷಿಯಲ್ ಇಂಟಲಿಜೆನ್ಸಿ ಮತ್ತು ಡಿಜಿಟಲೀಕರಣ ಪ್ರಭಾವ ಕುರಿತಾದ ಗೋಷ್ಠಿಗಳು ನಡೆಯಲಿವೆ. ಗಡಿ ಭಾಗದ ಸಮಸ್ಯೆ ಬಗ್ಗೆ ಸಂವಾದ ಕೂಡ ಇರಲಿದೆ. ಮಾಧ್ಯಮ ಮತ್ತು ಉದ್ಯಮದ ಬಗ್ಗೆ ಉಪನ್ಯಾಸವನ್ನು ಏರ್ಪಡಿಸಲಾಗಿದೆ ಎಂದು ವಿವರಿಸಿದರು.

ಝೀರಾ ಕನ್ವೆನ್ಷನ್ ಹಾಲ್‌ನಲ್ಲಿ ಡಾ. ಭೀಮಣ್ಣ ಖಂಡ್ರೆ ವೇದಿಕೆಯಲ್ಲಿ ಆಯೋಜನೆಗೊಂಡಿರುವ ಸಮ್ಮೇಳನವನ್ನು 11ರಂದು ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ವಸ್ತುಪ್ರದರ್ಶನವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಲಿದ್ದಾರೆ. ಅರಣ್ಯ, ಪರಿಸರ ಮತ್ತು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಲಿದ್ದಾರೆ. ಪೌರಾಡಳಿತ ಸಚಿವ ರಹೀಂಖಾನ್ ಛಾಯಾಚಿತ್ರ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಸಂಸದ ಸಾಗರ ಖಂಡ್ರೆ ವ್ಯಂಗ್ಯಚಿತ್ರ ಪ್ರದರ್ಶನವನ್ನು ಅನಾವರಣಗೊಳಿಸಲಿದ್ದಾರೆ.

ಕಾರಕೂಡ ಹಿರೇಮಠ ಸಂಸ್ಥಾನದ ಡಾ.ಚನ್ನವೀರ ಶಿವಾಚಾರ್ಯರು ಮತ್ತು ಅನುಭವ ಮಂಟಪ ಟ್ರಸ್ಟ್ನ ಅಧ್ಯಕ್ಷರಾದ ಡಾ. ಬಸವಲಿಂಗ ಪಟ್ಟದೇವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ವಿಶ್ವವಾಣಿ ದಿನಪತ್ರಿಕೆಯ ಪ್ರಧಾನ ಸಂಪಾದಕರಾದ ವಿಶ್ವೇಶ್ವರ ಭಟ್ ಪ್ರಧಾನ ಭಾಷಣ ಮಾಡಲಿದ್ದು, ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಲಿದ್ದಾರೆ. ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್, ಡಾ. ಭೀಮರಾವ್ ಪಾಟೀಲ್ ಮತ್ತು ಶಾಸಕರಾದ ಶರಣು ಸಲಗಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಅಶೋಕ ಖೇಣಿ, ಡಾ. ಅಬ್ದುಲ್ ಖದೀರ್ ಸೇರಿದಂತೆ ಹಲವು ಗಣ್ಯರು, ಬೀದರ್ ಜಿಲ್ಲೆಯ ಅಧಿಕಾರಿಗಳು ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

**ಗಾಂಧಿ-ಅಂಬೇಡ್ಕರ್ ಮತ್ತು ಪತ್ರಿಕೋದ್ಯಮ:**

ಮದ್ಯಾಹ್ನ 2 ಗಂಟೆಗೆ ನಡೆಯುವ ಗಾಂಧಿ-ಅಂಬೇಡ್ಕರ್ ಹಾಗೂ ಪತ್ರಿಕೋದ್ಯಮ ವಿಚಾರಗೋಷ್ಠಿಯ ಉದ್ಘಾಟನೆಯನ್ನು ಕಾನೂನು ಮತ್ತು ಸಂಸದೀಯ ಸಚಿವರಾದ ಎಚ್.ಕೆ ಪಾಟೀಲ್ ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್, ಹಿರಿಯ ಪತ್ರಕರ್ತ ಬೆಲಗೂರು ಸಮೀವುಲ್ಲಾ, ವಿಜಯ ಕರ್ನಾಟಕ ಸಂಪಾದಕ ಸುದರ್ಶನ ಚೆನ್ನಂಗಿಹಳ್ಳಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

**ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮತ್ತು ಮಾಧ್ಯಮ:**

ಮದ್ಯಾಹ್ನ 3.30ಕ್ಕೆ ನಡೆಯುವ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮತ್ತು ಮಾಧ್ಯಮ ವಿಚಾರಗೋಷ್ಠಿಯಲ್ಲಿ ಪ್ರಜಾವಾಣಿ ಸಂಪಾದಕ ರವೀಂದ್ರ ಭಟ್, ವಿವೇಕಾನಂದ ಮಹಾಸ್ವಾಮಿ, ಗಂಗಾಂಬಿಕೆ ಅಕ್ಕ, ರಾಮು ಪಾಟೀಲ, ನಿರ್ಮಲಾ ಯಲಿಗಾರ್, ಶೇಷಭೂಷಣ ಅವದಾನಿ, ಬಿಆರ್ ಉದಯಕುಮಾರ್, ಸುರೇಶ ಚನಶೆಟ್ಟಿ ಭಾಗವಹಿಸಲಿದ್ದು ಭಾರತೀಯ ಕಾರ್ಯನಿರತ ಒಕ್ಕೂಟದ ಅಧ್ಯಕ್ಷ ಬಿ.ವಿ ಮಲ್ಲಿಕಾರ್ಜುನ ಅಧ್ಯಕ್ಷತೆ ವಹಿಸುವರು.

**ಸಂವಾದ ಮತ್ತು ಉಪನ್ಯಾಸ:**

5 ಗಂಟೆಗೆ ಗಡಿ ಸಮಸ್ಯೆಗಳ್ ಬಗ್ಗೆ ಕರ್ನಾಟಕ ಗಡಿ ಪ್ರಾಧಿಕಾರದ ಸೋಮಣ್ಣ ಬೇವಿನಮರ ಮತ್ತು ಮಾಧ್ಯಮ ಮತ್ತು ಉದ್ಯಮ್ ಬಗ್ಗೆ ದಿಲೀಪ್ ಕುಮಾರ್ ಕುರುಂದವಾಡೆ ಮಾತನಾಡಲಿದ್ದಾರೆ.

ಸಂಜೆ ಏಳು ಗಂಟೆಗೆ ಸಂಗೀತ ಸಂಜೆ ಕಾರ್ಯಕ್ರಮ್ ನಡೆಯಲಿದೆ. 1

**ಪ್ರತಿನಿಧಿಗಳ ಸಮಾವೇಶ:**

2ನೇ ತಾರೀಕಿನಂದು ಬೆಳಿಗ್ಗೆ 9.40ಕ್ಕೆ ಪ್ರತಿನಿಧಿಗಳ ಸಮಾವೇಶ ಮತ್ತು ಸರ್ವ ಸದಸ್ಯರ ಸಭೆ ನಡೆಯಲಿದ್ದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಲಿದ್ದು, ರಾಜ್ಯ ಘಟಕದ ಎಲ್ಲಾ ಪದಾಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿರುತ್ತಾರೆ.

**ಮಾಹಿತಿ ಹಕ್ಕು ಮತ್ತು ಪತ್ರಕರ್ತರು:**

ಬೆಳಿಗ್ಗೆ 11.30ಕ್ಕೆ ಮಾಹಿತಿ ಹಕ್ಕು ಮತ್ತು ಪತ್ರಕರ್ತರು ವಿಚಾರಗೋಷ್ಠಿಯಲ್ಲಿ ರಾಜ್ಯ ಮಾಹಿತಿ ಹಕ್ಕು ಆಯೋಗದ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ, ಬದ್ರುದ್ದೀನ್, ಬಿ.ವೆಂಕಟಸಿಂಗ್ ಮತ್ತು ಪತ್ರಕರ್ತರಾದ ಕೆ.ವಿ. ಪರಮೇಶ್, ಬಾಬುರಾವ್ ಯಡ್ರಾಮಿ, ಮಹಮ್ಮದ್ ಭಾಷಾ ಗೂಳ್ಯಂ ಮತ್ತು ಚಿದಾನಂದ ಪಟೇಲ್ ಭಾಗವಹಿಸಲಿದ್ದಾರೆ.

**ಆರ್ಟಿಫಿಶಿಯಲ್ ಇಂಟೆಲಿಜೆನ್ಸ್/ಡಿಜಿಟಲೀಕರಣ:**

12.30ಕ್ಕೆ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್/ಡಿಜಿಟಲೀಕರಣದ ಪ್ರಭಾವ ವಿಚಾರಗೋಷ್ಠಿಯನ್ನು ಕನ್ನಡಪ್ರಭ ಪ್ರಧಾನ ಸಂಪಾದಕ ರವಿ ಹೆಗಡೆ ಉದ್ಘಾಟಿಸಲಿದ್ದು, ಹಿರಿಯ ಪತ್ರಕರ್ತರಾದ ಪ್ರಶಾಂತ್ ನಾತು, ಎಸ್. ರಶ್ಮಿ, ಮತ್ತು ಮಾಧ್ಯಮ ಅಕಾಡಮಿ ಅಧ್ಯಕ್ಷರಾದ ಅಯೇಷಾ ಖಾನಂ ಭಾಗವಹಿಸಲಿದ್ದಾರೆ.

**ಪ್ರಶಸ್ತಿ ಪ್ರದಾನ ಸಮಾರಂಭ:**

ಅಪರಾಹ್ನ ಮೂರು ಗಂಟೆಗೆ ನಡೆಯುವ ಸಮಾರೋಪ ಸಮಾರಂಭ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಸಮಾರೋಪ ಭಾಷಣ ಮಾಡಲಿದ್ದು, ಸ್ಪೀಕರ್ ಯು.ಟಿ. ಖಾದರ್ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಉಪಸ್ಥಿತರಿರುವರು. ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ ಪ್ರಭಾಕರ್ ಅಭಿನಂದನಾ ನುಡಿ ನೆರವೇರಿಸಲಿದ್ದು, ಸಚಿವರಾದ ಪ್ರಿಯಾಂಕ ಖರ್ಗೆ, ಶರಣ ಪಾಟೀಲ್, ಬೋಸರಾಜು ಪಾಲ್ಗೊಳ್ಳಲಿದ್ದಾರೆ. ಕಲ್ಯಾಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಜೇಯ ಸಿಂಗ್ ಉಪಸ್ಥಿತರಿರುವರು. ಕೆಯುಡಬ್ಲ್ಯುಜೆ ಅಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಲಿದ್ದು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್, ಶಾಸಕರಾದ ಪ್ರಭು ಚವ್ಹಾಣ್, ಶಶೀಲ್ ನಮೋಶಿ, ಬಂಡೆಪ್ಪ ಖಾಶೆಂಪುರ್, ಶೈಲೇಂದ್ರ ಬೆಲ್ದಾಳೆ, ಮಾರುತಿ ರಾವ್ ಮೂಳೆ ಮತ್ತು ರಮೇಶ್ ಪಾಟೀಲ್, ಸಿದ್ದು ಪಾಟೀಲ್, ಸೋಮನಾಥ ಪಾಟೀಲ್ ಮತ್ತಿತರರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬೆಂಗಳೂರು ನಗರ ಘಟಕ ಅಧ್ಯಕ್ಷ ಸೋಮಶೇಖರಗಾಂಧಿ, ಪ್ರಧಾನ ಕಾರ್ಯದರ್ಶಿ ಜಯಕುಮಾರಗೌಡ, ರಾಜ್ಯ ಸಮಿತಿ ಸದಸ್ಯ ಎಚ್.ಆರ್.ರವೀಶ್, ಉಪಾಧ್ಯಕ್ಷ ಡಾ.ಸ್ವಾಮಿ, ಹಿರಿಯ ಪತ್ರಕರ್ತರಾದ ಧ್ಯಾನ್ ಪೂಣಚ್ಚ, ಜುಕ್ರಿಯಾ ಮತ್ತಿತರರು ಹಾಜರಿದ್ದರು.

# ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ 260 ವಿದ್ಯಾರ್ಥಿಗಳಿಗೆ 35,000 ರೂ. ಪ್ರೋತ್ಸಾಹ ಧನ ವಿತರಣೆ

**ಬೆಂಗಳೂರು** : ಗ್ರೇಟರ್ ಬೆಂಗಳೂರು ಪ್ರಾಧಿಕಾರದ 5 ನಗರ ಪಾಲಿಕೆಗಳಲ್ಲಿ ಬರುವ ಶಿಕ್ಷಣ ಇಲಾಖೆಯಲ್ಲಿ ಒಟ್ಟು 19 ಪದವಿ ಪೂರ್ವ ಕಾಲೇಜುಗಳಿದ್ದು, 2025-26ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಒಟ್ಟು 2,593 ವಿದ್ಯಾರ್ಥಿಗಳು ಹಾಜರಾಗಿದ್ದರು. ಈ ಪೈಕಿ 1,923 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶೇ. 74.16 ರಷ್ಟು ಫಲಿತಾಂಶ ಬಂದಿರುತ್ತದೆ. ಅದರಂತೆ, ಪರೀಕ್ಷೆಗೆ ಹಾಜರಾಗಿದ್ದ ಒಟ್ಟು 2,593 ವಿದ್ಯಾರ್ಥಿಗಳ ಪೈಕಿ 260 ವಿದ್ಯಾರ್ಥಿಗಳು ಶೇ. 85 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ಜಿಬಿಎ ನಗರ ಪಾಲಿಕೆಗಳ ಪದವಿ ಪೂರ್ವ ಕಾಲೇಜುಗಳಲ್ಲಿ ಪಶ್ಚಿಮ ನಗರ ಪಾಲಿಕೆಯ ಭೈರವೇಶ್ವರನಗರ ಪದವಿ ಪೂರ್ವ ಕಾಲೇಜು ಶೇ. 88.82 ಫಲಿತಾಂಶದೊಂದಿಗೆ ಅಗ್ರಸ್ಥಾನ ಪಡೆದಿದೆ.

ಕೇಂದ್ರ ನಗರ ಪಾಲಿಕೆಯ ಕಸ್ತೂರಿಬಾನಗರ ಪದವಿ ಪೂರ್ವ ಕಾಲೇಜು ಶೇ. 86.45 ಫಲಿತಾಂಶದೊಂದಿಗೆ ದ್ವಿತೀಯ ಸ್ಥಾನ ಪಡೆದುಕೊಂಡಿದ್ದು, ಪಶ್ಚಿಮ ನಗರ ಪಾಲಿಕೆಯ ಶ್ರೀರಾಂಪುರ ಪದವಿ ಪೂರ್ವ ಕಾಲೇಜು ಶೇ. 81.99 ಫಲಿತಾಂಶದೊಂದಿಗೆ ತೃತೀಯ ಸ್ಥಾನ ಪಡೆದಿದೆ. ವೈಯಕ್ತಿಕ ಸಾಧನೆಯಲ್ಲಿ, ಉತ್ತರ ನಗರ ಪಾಲಿಕೆಯ ಕ್ಲೀವ್ ಲ್ಯಾಂಡ್ ಟೌನ್ ಪದವಿ ಪೂರ್ವ ಕಾಲೇಜಿನ ಫಿರ್ದೋಸ್ ಹಾಗೂ ಶಾಜೀದ್ ಅವರು ವಾಣಿಜ್ಯ ವಿಭಾಗದಲ್ಲಿ 600 ಕ್ಕೆ 582 ಅಂಕಗಳನ್ನು (97.00%) ಗಳಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಅದೇ ಕಾಲೇಜಿನ *ಅರ್ಫಿನ್ ಖಾನಂ ಅವರು ವಿಜ್ಞಾನ ವಿಭಾಗದಲ್ಲಿ 600 ಕ್ಕೆ 578 ಅಂಕಗಳನ್ನು (96.33%)* ಪಡೆದು ಮೆಚ್ಚುಗೆ ಪಡೆದಿದ್ದಾರೆ.

ಪಶ್ಚಿಮ ನಗರ ಪಾಲಿಕೆಯ ಭೈರವೇಶ್ವರನಗರ ಪದವಿ ಪೂರ್ವ ಕಾಲೇಜಿನ ಮುಸ್ರತ್ ಅವರು ಕಲಾ ವಿಭಾಗದಲ್ಲಿ 600 ಕ್ಕೆ ಲ್ಲಿ 574 ಅಂಕಗಳನ್ನು (95.66%) ಗಳಿಸಿ ಸಾಧನೆ ಮಾಡಿದ್ದಾರೆ. ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ಎಲ್ಲಾ 260 ವಿದ್ಯಾರ್ಥಿಗಳಿಗೆ ನಗರಪಾಲಿಕೆಗಳ ವತಿಯಿಂದ ತಲಾ ರೂ. 35,000/- ಪ್ರೋತ್ಸಾಹಧನ ನೀಡಿ ಗೌರವಿಸಲಾಗುವುದು.

**ಮುಖ್ಯ ಆಯುಕ್ತರಿಂದ ವಿದ್ಯಾರ್ಥಿಗಳಿಗೆ ಅಭಿನಂದನೆ:**

ಜಿಬಿಎ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳಿಗೂ ಜಿಬಿಎ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ರವರು ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಕಿಚ್ಚ ಸುದೀಪ್ ಹೆಜ್ಜೆ ಹಾಕಿರುವ, ಸಾನ್ವಿ ಸುದೀಪ್ ಧ್ವನಿಯಾದ ಮಸ್ತ್ ಮಲೈಕಾ ಹಾಡಿಗೆ 50 ಮಿಲಿಯನ್ ವೀಕ್ಷಣೆ

ಬೆಂಗಳೂರು : ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಟನೆಯ 'ಮಾರ್ಕ್' ಸಿನಿಮಾ 'ಮಸ್ತ್ ಮಲೈಕಾ' ಹಾಡು ಈಗ ದಾಖಲೆ ಬರೆದಿದೆ. ಬಿಡುಗಡೆಯಾದ ಬಳಿಕ ಈ ಪಾರ್ಟಿ ಸಾಂಗ್ ಸಖತ್ ಕ್ರೇಜ್ ಕ್ರಿಯೇಟ್ ಮಾಡಿತ್ತು. ಪುಟ್ಟ ಪುಟ್ಟ ಮಕ್ಕಳಿಂದ ಹಿಡಿದು ದೊಡ್ಡವರ ಬಾಯಲ್ಲಿ ನೋಡಿದ್ರೂ ಮಲೈಕಾಳದ್ದೇ ಮಸ್ತ್ ಮಸ್ತ್ ಗುನುಗು. ಅಷ್ಟರಮಟ್ಟಿಗೆ 'ಮಸ್ತ್ ಮಲೈಕಾ' ಹಾಡು ಭರ್ಜರಿ ಹಿಟ್ ಆಗಿದೆ. ಇದೀಗ ಯೂಟ್ಯೂಬ್‌ನಲ್ಲಿ 'ಮಸ್ತ್ ಮಲೈಕಾ' ಹಾಡು ದಾಖಲೆ ಬರೆದಿದೆ. ಸರೆಗಮ ಕನ್ನಡ ಯೂಟ್ಯೂಬ್ ನಲ್ಲಿ ಮಸ್ತ್ ಮಲೈಕಾ ಗೀತೆ ಐದು ಮಿಲಿಯನ್ ಗಟ್ಟಲೇ ವ್ಯೂಸ್ ಕಂಡಿದೆ. ಈ ಮೂಲಕ ಕಿಚ್ಚನ ಮಾರ್ಕ್ ಚಿತ್ರದ ಹಾಡು ರೆಕಾರ್ಡ್ ಕ್ರಿಯೇಟ್ ಮಾಡಿದೆ. ಅಂದಹಾಗೇ ಮಸ್ತ್ ಮಲೈಕಾ ಹಾಡಿಗೆ ಕಂಠ ಕುಣಿಸಿದವರು ಸಾನ್ವಿ ಸುದೀಪ್. ಅವರ ಜೊತೆ ನಕಾಶ್ ಅಜೀಜ್ ಹಾಡಿದ್ದಾರೆ. ಮಗಳ ಧ್ವನಿಗೆ ಕಿಚ್ಚ ಮಸ್ತ್ ಹೆಜ್ಜೆ ಹಾಕಿದ್ದರು. ಈ ಸಿನಿಮಾಗೆ ಅಜನೀಶ್ ಬಿ. ಲೋಕನಾಥ್ ಅವರು ಸಂಗೀತ ನೀಡಿದ್ದಾರೆ. ಅನೂಪ್ ಭಂಡಾರಿ ಅವರು ಈ ಹಾಡನ್ನು ಬರೆದಿದ್ದಾರೆ.

ಸಾನ್ವಿ ಚೊಚ್ಚಲ ಸಾಂಗ್ ಕ್ರಿಯೇಟ್ ರೆಕಾರ್ಡ್ ಮಸ್ತ್ ಮಲೈಕಾ ಹಾಡಿಗೆ ಧ್ವನಿಯಾಗುವ ಮೂಲಕ ಸಾನ್ವಿ ಸುದೀಪ್ ಸ್ಯಾಂಡಲ್ ವುಡ್ ಗೆ ಎಂಟ್ರಿ ಕೊಟ್ಟಿದ್ದಾರೆ. ಸಾನ್ವಿ ಹಾಡಿರುವ ಚೊಚ್ಚಲ ಹಾಡು 50 ಮಿಲಿಯನ್ ವೀವ್ಸ್ ಕಂಡಿರುವುದು ದಾಖಲೆಯೇ ಸರಿ. ಇನ್ನೊಂದು ವಿಶೇಷ ಏನಂದರೆ ಸರೆಗಮ ಯೂಟ್ಯೂಬ್ ನಲ್ಲಿ 50 ಮಿಲಿಯನ್ ವೀಕ್ಷಣೆ ಕಂಡ ಮೊದಲ ಕನ್ನಡ ಹಾಡು ಕೂಡ ಮಸ್ತ್ ಮಲೈಕಾ. ಯೂಟ್ಯೂಬ್ ಮಾತ್ರವಲ್ಲದೆ ರೀಲ್ಸ್ ನಲ್ಲಿಯೂ ಕಮಾಲ್ ಮಾಡಿದ ಮಸ್ತ್ ಮಲೈಕಾ ಸಾಂಗ್ 50 ಮಿಲಿಯನ್ ವೀಕ್ಷಣೆ ಕಂಡು ಮುಂದೆ ಸಾಗ್ತಿದೆ. ಈ ಹಾಡಿನಲ್ಲಿ ಮಲೈಕಾ ಆಗಿ ನಿಶ್ವಿಕಾ ನಾಯ್ಡು ಅವರು ಕಾಣಿಸಿಕೊಂಡಿದ್ದಾರೆ. ಕನ್ನಡ, ತಮಿಳು, ತೆಲುಗು, ಹಿಂದಿಯಲ್ಲಿ ಈ ಹಾಡು ಬಿಡುಗಡೆಯಾಗಿತ್ತು. ಅದರಲ್ಲಿಯೂ ಕನ್ನಡ ಗೀತೆ ಸಖತ್ ಟ್ರೆಂಡ್ ಕ್ರಿಯೇಟ್ ಮಾಡಿದೆ.

# ಆಹಾರ ಗೋದಾಮಿಗೆ ಬೆಂಕಿ: ಕೋಟ್ಯಂತರ ಮೌಲ್ಯದ ವಸ್ತುಗಳು ಬೆಂಕಿಗಾಹುತಿ

ತಾಲೂಕಿನ ಅಡಕಮಾರನಹಳ್ಳಿಯ ಅಂಜನೇಯ ದೇವಸ್ಥಾನದ ಬಳಿ ಇರುವ ಬೃಹತ್ ಆಹಾರ ಗೋದಾಮಿಗೆ ಬುಧವಾರ ರಾತ್ರಿ 10 ಗಂಟೆಗೆ ಬೆಂಕಿ ಬಿದ್ದಿದ್ದು ಅಪಾರ ಪ್ರಮಾಣದ ವಸ್ತುಗಳು ಬೆಂಕಿಗಾಹುತಿಯಾಗಿವೆ. ಆಹಾರ ಗೋದಾಮಿನಲ್ಲಿ ಅಡುಗೆ ಎಣ್ಣೆ ಸೇರಿದಂತೆ ವಿವಿಧ ಆಹಾರ ಪದಾರ್ಥಗಳನ್ನು ಶೇಖರಣೆ ಮಾಡಲಾಗಿತ್ತು.



ಕ್ಷಣದಲ್ಲೇ ಬೆಂಕಿ ಇಡೀ ಗೋದಾಮನ್ನು ಆವರಿಸಿದೆ. ಗೋದಾಮಿನಲ್ಲಿ ಕಾರ್ಮಿಕರು ಇರಲಿಲ್ಲ. ಇದರಿಂದ ಯಾವುದೇ ಪ್ರಾಣಪಾಯ ಸಂಭವಿಸಿಲ್ಲ. ಘಟನಾ ಸ್ಥಳಕ್ಕೆ ನೆಲಮಂಗಲ, ಪೀಣ್ಯ, ಸುಂಕದಕಟ್ಟೆ ಹಾಗೂ ನಾಗರಭಾವಿ ಅಗ್ನಿಶಾಮಕ ಠಾಣೆಗಳ ಸಿಬ್ಬಂದಿ ದೌಡಾಯಿ ಸಿದ್ದು, ಐದಾರು ಅಗ್ನಿಶಾಮಕ ವಾಹನಗಳ ಸಹಾಯದಿಂದ ಬೆಂಕಿ ನಂದಿಸುವ ಕಾರ್ಯಾಚರಣೆ ಮುಂದುವರಿದಿದೆ.

ಮಾಹಿತಿ ಪ್ರಕಾರ, ವಿದ್ಯುತ್ ಕಂಬದಿಂದ ಉಂಟಾದ ಸಣ್ಣ ಸ್ಪಾರ್ಕ್ ಬೆಂಕಿ ಅವಘಡಕ್ಕೆ ಕಾರಣವಾಗಿದೆ. ಅವಘಡದಲ್ಲಿ ಕೋಟ್ಯಂತರ ಮೌಲ್ಯದ ವಸ್ತುಗಳು ಸುಟ್ಟು ಭಸ್ಮವಾಗಿದೆ. 18 ವರ್ಷಗಳ ಹಿಂದೆ ಈ ಬೃಹತ್ ಗೋದಾಮ್ ನಿರ್ಮಾಣ ಮಾಡಲಾಗಿದ್ದು, ಆಹಾರ ಪದಾರ್ಥಗಳ ದಾಸ್ತಾನು ಮಾಡಲಾಗುತ್ತಿತ್ತು.

ಅವಘಡ ನಡೆದಾಗ ಗೋದಾಮಿನಲ್ಲಿ ಕಾರ್ಮಿಕರು ಇರಲಿಲ್ಲ. ಇದರಿಂದ ದೊಡ್ಡ ಅನಾಹುತ ತಪ್ಪಿದೆ ಎಂದು ಗೋದಾಮು ಮಾಲೀಕ ಪದ್ಮರಾಜ್ ತಿಳಿಸಿದ್ದಾರೆ.

ಹೆದ್ದಾರಿಯಲ್ಲೇ ಸಾಗುತ್ತಿದ್ದ ವಾಹನ ಸವಾರರು ವಾಹನಗಳನ್ನು ನಿಲ್ಲಿಸಿ ಮೊಬೈಲ್ ಕ್ಯಾಮರಾದಲ್ಲಿ ದೃಶ್ಯವನ್ನು ಸೆರೆ ಹಿಡಿಯಲು ಮುಂದಾದರು.

ಇದರಿಂದ ರಾಷ್ಟ್ರೀಯ ಹೆದ್ದಾರಿ-48ರಲ್ಲಿ ಟ್ರಾಫಿಕ್ ಜಾಮ್ ಉಂಟಾಗಿತ್ತು. ಘಟನೆ ಮಾದನಾಯಕನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಹೆಚ್ಚಿನ ತನಿಖೆ ಮುಂದುವರಿದಿದೆ.

**ಮೆಕ್ಕೆಜೋಳ ಬಣವೆಗೆ ಆಕಸ್ಮಿಕ ಬೆಂಕಿ, 70 ಕ್ವಿಂಟಾಲ್ ಜೋಳ ಭಸ್ಮ:** ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲೂಕಿನ ಪರಗೋಡು ಗ್ರಾಮದಲ್ಲಿ ಮೆಕ್ಕೆಜೋಳದ ರಾಶಿಗೆ ಬೆಂಕಿ ಬಿದ್ದು, ಸುಮಾರು 70 ಕ್ವಿಂಟಾಲ್ ಮೆಕ್ಕೆಜೋಳ ಸುಟ್ಟು ಭಸ್ಮವಾಗಿರುವ ಘಟನೆ ನಡೆದಿದೆ.

ರೈತ ಗಂಗಾಧರ್ ಕಳೆದ ನಾಲ್ಕು ತಿಂಗಳು ಕಷ್ಟಪಟ್ಟು ಬೆಳದಿದ್ದ ಮೆಕ್ಕೆಜೋಳವನ್ನು ರಾಶಿ ಮಾಡಿ ಇಟ್ಟಿದ್ದರು. ಬಣವೆಗೆ ಆಕಸ್ಮಿಕ ಬೆಂಕಿ ತಗುಲಿದೆ. ಅಕ್ಕಪಕ್ಕದ ರೈತರು ಬೆಂಕಿ ನಂದಿಸಲು ಪ್ರಯತ್ನಿಸಿದ್ದಾರೆ. ಆದರೆ, ಸಂಪೂರ್ಣ ಮೆಕ್ಕೆಜೋಳ ಬೆಂಕಿಗಾಹುತಿಯಾಗಿದೆ. ಸುಮಾರು ಎರಡು ಲಕ್ಷ ರೂಪಾಯಿ ಬೆಲೆ ಬಾಳುವ ಮೆಕ್ಕೆಜೋಳ ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ.


ರೈತ ಗಂಗಾಧರ್ ಮಾತನಾಡಿ, ನಾನು ಸಾಲ ಮಾಡಿ ಮೆಕ್ಕೆಜೋಳ ಬೆಳೆ ಹಾಕಿದ್ದೆ. ಈಗ ಎಲ್ಲ ಸುಟ್ಟು ಕರಕಲಾಗಿದೆ. ಇನ್ನೇನು ಮೂರು ನಾಲ್ಕು ದಿನಗಳಲ್ಲಿ ಹಸನುಮಾಡಿ ಮಾರ್ಕೆಟ್‌ಗೆ ಹೋಗಿ ಮಾರಾಟ ಮಾಡಬೇಕು ಅಂದುಕೊಂಡೆ.

ಆದರೆ, ಈ ದುರಂತದಿಂತ ದಿಕ್ಕು ತೋಚದಂತೆ ಆಗಿದೆ. ಸುಮಾರು 2 ಲಕ್ಷ ರೂ. ನಷ್ಟವಾಗಿದೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ. ಸರ್ಕಾರದಿಂದ ಪರಿಹಾರ ಕೊಡಿಸುವಂತೆ ಅನ್ನದಾತ ತನ್ನ ಅಲಳನ್ನು ತೋಡಿಕೊಂಡಿದ್ದಾರೆ.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಅಧಿಕಾರಿಗಳು ಆಕಸ್ಮಿಕ ಬೆಂಕಿ ಅವಘಡಕ್ಕೆ ಸಂಬಂಧಿಸಿದಂತೆ ವರದಿ ಸಿದ್ದಪಡಿಸಿ ಶೀಘ್ರ ಪರಿಹಾರ ಕೊಡಿಸುವ ಭರವಸೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ಪ್ರಶಾಂತ್, ಕಾರ್ಯದರ್ಶಿ ಮಂಜುನಾಥ್, ಪರಗೋಡು ಪಂಚಾಯಿತಿ ಗಂಗಿರೆಡ್ಡಿ, ಗೋವಿಂದರೆಡ್ಡಿ, ರೈತ ಗಂಗಾಧರ, ಶ್ವೇತಾ, ಸಿ. ಪರಗೋಡು ವೆಂಕಟೇಶ್, ವಿಎಸ್‌ಎಸ್‌ಎನ್ ನಿರ್ದೇಶಕ ನರೇಶ್ ರಾಯಲ್, ಪಿ.ಎನ್. ವೆಂಕಟೇಶ್, ಅಶೋಕ್ ಇದ್ದರು.

# ದ್ವಿತೀಯ ಪಿಯುಸಿ: ಕೆ ಆರ್ ಪೇಟೆ ಕದಂಬ ಕಾಲೇಜಿನ ಸಂಜನಾ ಟಾಪರ್

ಕೆ.ಆರ್.ಪೇಟೆ : ಪಟ್ಟಣದ ಕದಂಬ ಪದವಿ ಪೂರ್ವ ಕಾಲೇಜು ಈ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸತತ ಮೂರನೇ ಭಾರಿಗೂ ಶೇ.100ರಷ್ಟು(ಕಾಮರ್ಸ್) ಫಲಿತಾಂಶ ಪಡೆದುಕೊಳ್ಳುವ ಜೊತೆಗೆ ತಾಲ್ಲೂಕು ಟಾಪರ್ ಫಲಿತಾಂಶ ಪಡೆದುಕೊಳ್ಳುವ ಮೂಲಕ ಸಾಧನೆ ಮಾಡಿದೆ. 128ವಿದ್ಯಾರ್ಥಿಗಳ ಪರೀಕ್ಷೆ ಬರೆದಿದ್ದು 127ವಿದ್ಯಾರ್ಥಿಗಳು ಉತ್ತೀರ್ಣ ಹೊಂದಿರುತ್ತಾರೆ. ಒಬ್ಬ ವಿದ್ಯಾರ್ಥಿನಿ ಅನುತ್ತೀರ್ಣ ಹೊಂದಿರುತ್ತಾರೆ. ವಿಜ್ಞಾನ ವಿಭಾಗದಲ್ಲಿ 58ಡಿಸ್ಟಿಂಕ್ಷನ್ ಪಡೆದು ಸಾಧನೆ ಮಾಡಿದ್ದಾರೆ, 69ಮಂದಿ ಪ್ರಥಮ ಶ್ರೇಣಿ ದರ್ಜೆಯಲ್ಲಿ ಉತ್ತೀರ್ಣ ಹೊಂದಿರುತ್ತಾರೆ.



ಕಾಲೇಜಿನ ರಾಯಸಮುದ್ರ ಗ್ರಾಮದ ರೈತನ ಮಗಳು ಹಾಗೂ ಗ್ರಾಮೀಣ ವಿದ್ಯಾರ್ಥಿನಿ ವಿಜ್ಞಾನ ವಿಭಾಗದಲ್ಲಿ ಸಂಜನಾ ಎಂಬಾಕೆಯು 587ಅಂಕಗಳನ್ನು ಪಡೆದುಕೊಳ್ಳುವ ಮೂಲಕ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದುಕೊಳ್ಳುವ ಮೂಲಕ ತಾಲ್ಲೂಕು ಟಾಪರ್ ಆಗಿ ತಾಲ್ಲೂಕು ಮಟ್ಟದಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾಳೆ. ಅದೇ ರೀತಿ ವಾಣಿಜ್ಯ ವಿಭಾಗದಲ್ಲಿ ಹೆಚ್.ಎಂ.ನಾಗೇಶ್ 578ಅಂಕಗಳನ್ನು ಪಡೆದು ಟಾಪರ್ ಸಾಧನೆ ಮಾಡಿದ್ದಾರೆ.

ಕದಂದ ಕಾಲೇಜಿನ ವಾಣಿಜ್ಯ ವಿಭಾಗದಲ್ಲಿ ಪರೀಕ್ಷೆ ಬರೆದಿದ್ದ 33ವಿದ್ಯಾರ್ಥಿಗಳ ಪೈಕಿ ಎಲ್ಲರೂ ಉತ್ತೀರ್ಣ ಹೊಂದಿದ್ದು ಶೇ.100ರಷ್ಟು ಫಲಿತಾಂಶ ಬಂದಿರುತ್ತದೆ. 18ಡಿಸ್ಟಿಂಕ್ಷನ್, 15ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿರುತ್ತಾರೆ. ವಿಜ್ಞಾನ ವಿಭಾಗದಲ್ಲಿ 587ಅಂಕಗಳನ್ನು ಪಡೆದು ತಾಲ್ಲೂಕು ಟಾಪರ್ ಆಗಿ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ ವಿದ್ಯಾರ್ಥಿನಿ ಸಂಜನ ಎಂಬಾಕೆಯನ್ನು ಹಾಗೂ ವಾಣಿಜ್ಯ ವಿಭಾಗದಲ್ಲಿ 578ಅಂಕಗಳನ್ನು ಪಡೆದ ಟಾಪರ್ ಆಗಿ ಸಾಧನೆ ಮಾಡಿರುವ ಹೆಚ್.ಎಂ.ನಾಗೇಶ್ ಅವರನ್ನು ಕಾಲೇಜಿನಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಮೈಸೂರು ಪೇಟ ತೊಡಿಸಿ ಸನ್ಮಾನಿಸಿ ಗೌರವಿಸಲಾಯಿತು. ಅಭಿನಂದನಾ ಸಮಾರಂಭದಲ್ಲಿ ನಿವೃತ್ತ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಕೆ.ಕಾಳೇಗೌಡ, ಕದಂಬ ಕಾಲೇಜಿನ ಅಧ್ಯಕ್ಷರಾದ ಎಸ್.ಮಂಜುನಾಥ್, ಕಾರ್ಯದರ್ಶಿ ಡಿ.ಜೆ.ಕಿರಣ್, ನಿರ್ದೇಶಕರಾದ ಬಿ.ಸಿ.ಕೃಷ್ಣ, ಉದ್ಯಮಿ ಟಿ.ವೈ.ಆನಂದ್, ಸಂಜನಾ ಪೋಷಕರಾದ ರಾಯಸಮುದ್ರ ರೈತ ಮಂಜು, ಮಂಜುಳಾ ಮತ್ತಿತರರು ಉಪಸ್ಥಿತರಿದ್ದರು.

# ಹಿತ್ತಲ ಗಿಡ ಮದ್ದು ಅಲ್ಲವೇ..?

ಆರೋಗ್ಯವೇ ಶಕ್ತಿ.

ಬೆಲ್ಲದ ಹಣ್ಣು.ಬೋಳಲ ಹಣ್ಣು , ಬಳ್ಳೊಳ್ಳಿ ಹಣ್ಣಿನ ಗಿಡ. ಬೆಲ್ಲದ ಹಣ್ಣಿನ ಮರ ಎಂದು ಕನ್ನಡದಲ್ಲಿ ಹೇಳುವರು. ಬೆಲ್ಲದ ಮರ ಹೊಲದಲ್ಲಿ ಹಾದಿಬೀದಗಳಲ್ಲಿ ಕಾಡುಬೆಟ್ಟಗಳಲ್ಲಿ 30 ಅಡಿಯಿಂದ 60 ಅಡಿವರಿಗೂ ಬೆಳೆಯುವುದು. ಬೆಲ್ಲದ ಹಣ್ಣಿನಿಂದ ಪಾನಕ ಮಾಡಿ ಹಿರಿಯರು ಪ್ರತಿನಿತ್ಯ ಬೇಸಿಗೆಯು ಕಾಲದಲ್ಲಿ ಕುಡಿಯುತ್ತಿದ್ದರು. ಬೆಲ್ಲದ ಕಾಯಿಯಿ ಒಳಗಿರುವ ತಿರುಳು ರುಚಿಗೆ ತಕ್ಕಷ್ಟು ಬೆಳ್ಳುಳ್ಳಿ ಉಪ್ಪು ಹಸಿಮೆಣಸಿನಕಾಯಿ ಹಾಕಿ ಕುಟ್ಟಿ ಚಟ್ನಿ ಮಾಡಿ 2 ರೊಟ್ಟಿ ತಿನ್ನುವಂತವರು 3 ರೊಟ್ಟಿ ತಿನ್ನುತ್ತಾನೆ. 3 ರೊಟ್ಟಿ ತಿನ್ನುವರು 4 ರೊಟ್ಟಿ ತಿನ್ನುವರು ಚಟ್ನಿ ಮಾಡಿ ಪ್ರತ್ಯಕ್ಷವಾಗಿ ತಿಂದು ನೋಡಿ.

1. ಅಥವಾ2 ಬೆಲ್ಲದ ಹಣ್ಣು ರುಚಿಗೆ ತಕ್ಕಷ್ಟು ಬೆಲ್ಲ 1 ಅಥವಾ 2 ಯಾಲಕ್ಕಿ ಕೊಟ್ಟಿ ಮಿಶ್ರಣ ಮಾಡಿ 300 ರಿಂದ 400 ಟಟ ನೀರಲ್ಲಿ ಈ ಜ್ಯೂಸ್ ಮಾಡಿ ಮಧ್ಯಾಹ್ನ ಸಮಯದಲ್ಲಿ ಕುಡಿದರೆ ಮನಸ್ಸು ಹಗುರವಾಗುವುದು ದೇಹ ತಂಪು ಆಗುವುದು. ಮಲಬದ್ಧತೆ ತೊಂದರೆ ಇದ್ದವರು ಇದನ್ನು ಪ್ರತಿನಿತ್ಯ ಬೇಸಿಗೆಯ ಕಾಲದಲ್ಲಿ ಕುಡಿತ್ತಾ ಬಂದರೆ ಮಲಬದ್ಧತೆಗೆ ತುಂಬಾ ಸಹಕಾರಿ ಆಗುವದು ಮತ್ತು ತಿಂದಂತಹ ಆಹಾರ ಪಚನ ಕ್ರಿಯೆ ಆಗುವುದು ಅಪೆಂಡಿಕ್ಸ್ ಮತ್ತು ಕಿಡ್ನಿ ಸ್ಟೋನ್ ಹುಳಿ ತೆಗು ಮತ್ತು ಗ್ಯಾಸ್ಟ್ರಿಕ್ ಹೊಟ್ಟೆ ಕಡಿತ ಹೊಟ್ಟೆ ನೋವಿಗೆ ಸುಸ್ತು, ಮಹಿಳೆಯರ ಗುಪ್ತ ಸಮಸ್ಯೆಗೆ ಉತ್ತಮ. ಸಣ್ಣಪುಟ್ಟ ಸಮಸ್ಯೆಗೆ ಪರಿಣಾಮಕಾರಿಯಾಗಿ ರಾಮಬಾಣದಂತೆ ಕೆಲಸ ಮಾಡುವುದು.

ಮಾಡಿ ನೋಡಿ ಮದ್ದಿನ ಗುಣ ನೂರಾರು ಕಂಪನಿಯಿಂದ ತಯಾರು ಮಾಡಿದಂತ ಸಕ್ಕರೆಯ ಕೆಮಿಕಲ್ಲಿನಿಂದ ಮಾಡಿ ಬಾಟ್ಲಿಯಲ್ಲಿ ಇರುವಂತಹ ಜ್ಯೂಸ್ ಕುಡಿದು ಆರೋಗ್ಯವನ್ನು ಹಾಳು ಮಾಡಿಕೊಳ್ಳದೆ ರೈತರಿಗೆ ಬೆನ್ನೆಲುಬಾಗಿ ನಿಲ್ಲೋಣ ಈ ಬೆಲ್ಲದ ಹಣ್ಣಿನ ಪಾನಕ ಸೇವನೆ ಮಾಡೋಣ.

ನಮ್ಮ ಭಾರತ ದೇಶದ ಋಷಿಮುನಿಗಳು ಇದರ ಅಪಾರಜ್ಞಾನವನ್ನು ಸಾವಿರಾರು ವರ್ಷಗಳ ಹಿಂದೆ ವೇದ ಗ್ರಂಥಗಳಲ್ಲಿ ಉಲ್ಲೇಖ ಇರುವುದು ತಿಳಿದು ಬಂದಿರುವುದು. ಆಯುರ್ವೇದ ಪ್ರಕಾರ ಹೇಳುವುದಾದರೆ ಬೆಲ್ಲದ ಮರದ ಬೇರು ಕಾಂಡ ಕಾಯಿ ತೊಗಟೆ ಈ ಎಲ್ಲಾ ಸಮೂಲವನ್ನು ಆಯುರ್ವೇದದಲ್ಲಿ ಉಪಯೋಗ ಮಾಡಿಕೊಳ್ಳುತ್ತಾರೆ. ಇತ್ತೀಚಿನ ದಿನಗಳಲ್ಲಿ ಬೆಲ್ಲದ ಹಣ್ಣಿನ ಮರಗಳು ಕಣ್ಣಮರೆಯಾಗಿ ಮಂಜಿನಂತೆ ಕರಗಿ ಅಳಿವಿನ ಅಂಚಿನಲ್ಲಿ ಇರುವುದು .

ಬೆಲ್ಲದ ಹಣ್ಣಿನ ಮರದ ಬಗ್ಗೆ ನಮ್ಮ ರೈತರು ಮಹಾವೀನ ಮರ. ತೆಂಗಿನ ಮರ ನುಗ್ಗೆ ಸೊಪ್ಪು ಕರಿಬೇವಿನ ಸೊಪ್ಪು .ಬೆಟ್ಟದ ನಲ್ಲಿಕಾಯಿ. ಬೆಳೆಸಿ ಫಲ ಪಡೆದುಕೊಳ್ಳುತ್ತೀರಿ ಅದೇ ರೀತಿ ಇದು. ಬೆಲ್ಲದ ಹಣ್ಣಿನ ಮರದ ಕಡೆ ಗಮನಹರಿಸಿ ತಮ್ಮ ಹೊಲದ ಸುತ್ತಮುತ್ತಲು 5 ಅಥವಾ10 ಗಿಡಗಳನ್ನು ಬೆಳೆಸಿದರೆ ಒಂದು ಮರಕ್ಕೆ 200 ರಿಂದ 500 ಕಾಯಿ ಬಿಡುವದು ಇದರ ಕಾಯಿ 10 ರಿಂದ 15 ರೂಪಾಯಿಗೆ ಮಾರಾಟ ಮಾಡಬಹುದು ಬೇಸಿಗೆಯ ಫಲವನ್ನು ಪಡೆದುಕೊಳ್ಳಬಹುದು.

ಈ ಪ್ರಕೃತಿ ದೇವ ಸೃಷ್ಟಿಕರ್ತ ಎಷ್ಟೊಂದು ಸುಂದರ ಅಲ್ಲವೇ ಸಂಕ್ಷಿಪ್ತವಾಗಿ ಒಂದು ಔಷದ ಮಾಡುವುದು ತಿಳಿಯೋಣ. ಸಣ್ಣಪುಟ್ಟ ಪ್ರಥಮದಲ್ಲಿ ಚರ್ಮರೋಗ ತದ್ದು ಇಸಬು ಇದ್ದವರಿಗೆ ಗುರುವಾರ ಅಥವಾ ಭಾನುವಾರ ಪುಷ್ಯ ನಕ್ಷತ್ರ ಇರುವ ದಿನ ಬೆಲ್ಲದ ಹಣ್ಣಿನ ಮರದ ಬೇರು ಪೂರ್ವದಿಕ್ಕಿಗೆ ಹೋಗಿರುವಂತೆ ಈ ಬೇರನ್ನು ಕಡಿಯುವುದಕ್ಕೆ ಮುಂಚೆ ಪ್ರಕೃತಿ ಧನವಂತ್ರಿ ದೇವನಿಗೆ ನಮಸ್ಕರಿಸಿ 3. 4 ಇಂಚ್ ಉದ್ದ 1 ಇಂಚು ದಪ್ಪ ತಂದು ನೀರಿನಲ್ಲಿ ತೊಳೆದು ನಿಂಬೆರಸದಲ್ಲಿ ತೇಯ್ದು ಈ ಗಂಧವನ್ನು ಚರ್ಮದ ಸಮಸ್ಯೆ ಇರುವಂತ ಸ್ಥಳಕ್ಕೆ ಹಚ್ಚಬೇಕು.

15 ರಿಂದ21 ದಿನ ಊಟದಲ್ಲಿ ಉಪ್ಪು ಉಳಿ ಖಾರ ಕಡಿಮೆ ಇರಲಿ ಎಣ್ಣೆಯಲ್ಲಿ ಕರೆದಂತ ಪದಾರ್ಥ ಮತ್ತು ಮಾಂಸಹಾರ ನಿಷೇಧ. ಪ್ರಯತ್ನಕ್ಕೆ ಫಲ ಉಂಟು.

ಈ ಎಲ್ಲಾ ಬೇರೆಗಳನ್ನು ಕಡೆದು ಮರವನ್ನು ಹಾಳು ಮಾಡಬೇಡಿ.

ಈ ಹಿಂದೆ ಕಿಡಿಗೇಡಿ ಕಿರಾತಕರು ನಯ ವಂಚಕರು ಇತ್ತಲ ಗಿಡ ಮದ್ದು ಅಲ್ಲ ಎಂದು ಬಿತ್ತಿ ಬಿಂಬಿಸಿದರು ಆದರೆ ನಮ್ಮ ಹಿರಿಯ ಪೂರ್ವಿಕರು ಇತ್ತಲ ಗಿಡವೇ ಮದ್ದು ಎಂದು ಸಾರಿದ್ದಾರೆ.



**ಚಂದ್ರಶೇಖರ್ ಪಂಡಿತ್**
**ಪಾರಂಪರಿಕ ನಾಟಿ ವೈದ್ಯ**

# ಶಾಲೆಗಳಲ್ಲಿ ವಂದೇ ಮಾತರಂ ಹಾಡುವ ಬಗ್ಗೆ ಕೇಂದ್ರ ಸರ್ಕಾರದ ಮಾರ್ಗಸೂಚಿ ಪ್ರಶ್ನಿಸಿದ್ದ ಅರ್ಜಿ ವಜಾ

ಬೆಂಗಳೂರು: 'ವಂದೇ ಮಾತರಂ' ರಾಷ್ಟ್ರೀಯ ಹಾಡಿನಲ್ಲಿ ಎಲ್ಲ ಆರು ಚರಣಗಳನ್ನು ಕಡ್ಡಾಯವಾಗಿ ಹಾಡಬೇಕು ಎಂಬುದಾಗಿ ಕೇಂದ್ರ ಗೃಹ ಇಲಾಖೆ ಹೊರಡಿಸಿದ್ದ ಶಿಷ್ಟಾಚಾರ ಮಾರ್ಗಸೂಚಿಗಳನ್ನು ಅಸಿಂಧು ಎಂದು ಘೋಷಣೆ ಮಾಡಬೇಕೆಂದು ಕೋರಿ ಸಲ್ಲಿಸಲಾಗಿದ್ದ ಸಾರ್ವ ಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿದೆ.




ಬೆಂಗಳೂರಿನ ವಕೀಲ ಸೋಮಶೇಖರ್ ರಾಜವಂಶಿ ಎಂಬವರು ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯ ಮೂರ್ತಿ ಸಿ.ಎಂ.ಪೂಣಚ್ಚ ಅವರ ನೇತೃತ್ವದ ವಿಭಾಗೀಯ ವಿಚಾರಣೆ ನಡೆಸಿತು. ವಿಚಾರಣೆ ಆರಂಭವಾಗುತ್ತಿದ್ದಂತೆ, ಕೇಂದ್ರ ಸರ್ಕಾರದ ಪರ ವಕೀಲರು, ವಂದೇ ಮಾತರಂ ಹಾಡಿಗೆ ಸಂಬಂಧಿಸಿದಂತೆ ಕೇಂದ್ರ ಗೃಹ ಇಲಾಖೆಯು ಆದೇಶದಲ್ಲಿ ಹಾಡು ಹಾಡಬಹುದು ಎಂಬ ಪದ ಬಳಕೆ ಮಾಡಲಾಗಿದ್ದು, ಅದು ಕಡ್ಡಾಯವಲ್ಲ ಎಂಬುದನ್ನು ಸೂಚಿಸುತ್ತದೆ.

ಅಲ್ಲದೇ, ಇತ್ತೀಚೆಗೆ ಸುಪ್ರೀಂ ಕೋರ್ಟ್ ಇಂಥದ್ದೇ ಮನವಿ ಒಳಗೊಂಡಿದ್ದ ಅರ್ಜಿಯನ್ನು ವಜಾಗೊಳಿಸಿದೆ ಎಂದು ಆದೇಶಿಸಿದೆ ಎಂದು ಪೀಠಕ್ಕೆ ವಿವರಿಸಿದರು.

# ಗೃಹಲಕ್ಷ್ಮೀ ಬೇಡಯ್ಯ, ಮನೆ ನೀಡಯ್ಯ: ಹಕ್ಕುಪತ್ರ ನೀಡದ ಸರ್ಕಾರಕ್ಕೆ ಹಾಡಿನ ಮೂಲಕ ಮಹಿಳೆ ಚಾಟಿ..!

ತುಮಕೂರು: ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಬೇಸತ್ತು, ಶಿರಾ ಪಟ್ಟಣದ ಮಹಿಳೆ ಒಬ್ಬರು ಜನಸ್ಪಂದನ ಕಾರ್ಯಕ್ರಮದಲ್ಲಿ ಹಾಡು ಹಾಡಿ ಮತ್ತು ಪ್ರತಿಭಟನೆ ನಡೆಸಿದ ಘಟನೆ ಗಮನ ಸೆಳೆದಿದೆ. ಗೃಹ ಸಚಿವ ಜಿ.ಪರಮೇಶ್ವರ್ ಅವರ ಉಪಸ್ಥಿತಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ, ರಾಬಿಯಾ ಅಸ್ಲಾಂ ಪಾಷಾ ಎಂಬ ಮಹಿಳೆ ಮನೆ ಜಾಗಕ್ಕೆ ಹಕ್ಕುಪತ್ರ ನೀಡದ ಅಧಿಕಾರಿಗಳ ವಿರುದ್ಧ ತನ್ನ ಅಸಮಾಧಾನವನ್ನು ವ್ಯಕ್ತಪಡಿಸಿದರು.

ಕೂಡಲೇ ಪೊಲೀಸರು ಅವರು ಸ್ಥಳದಿಂದ ಹೊರಗೆ ಕರೆದೊಯ್ದರು. ಇದೇ ವೇಳೆ ಕಾರ್ಯಕ್ರಮದಲ್ಲಿ ಅಡ್ಡಿಪಡಿಸಲು ಯತ್ನಿಸಿದ ಆರೋಪದ ಮೇಲೆ ಕರ್ನಾಟಕ ರಾಷ್ಟ್ರ ಸಮಿತಿ ಸದಸ್ಯರನ್ನೂ ಪೊಲೀಸರು ವಶಕ್ಕೆ ಪಡೆದರು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಸಂಬಂಧ ಸುಮಾರು 2,500ಕ್ಕೂ ಹೆಚ್ಚು ದೂರುಗಳು ಬಂದಿದ್ದು, ಅವುಗಳಲ್ಲಿ ಸುಮಾರು 450 ದೂರುಗಳು ಆದಾಯ ಇಲಾಖೆಗೆ ಸಂಬಂಧಿಸಿದ್ದಾಗಿವೆ ಎಂದು ತಿಳಿದುಬಂದಿದೆ. ಈ ಬಗ್ಗೆ ಸಚಿವ ಪರಮೇಶ್ವರ್ ಅವರು, ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು, ತಹಶೀಲ್ದಾರರು ಮತ್ತು ಸಹಾಯಕ ಆಯುಕ್ತರು ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂಬುದು ಇದರಿಂದ ಸ್ಪಷ್ಟವಾಗುತ್ತಿದೆ. ಪಡಿತರ ಚೀಟಿಯಲ್ಲಿ ಹೆಸರು ಬದಲಾಯಿಸಲು ಒಂದು ವರ್ಷದಿಂದ ಅಲೆದಾಡುತ್ತಿದ್ದಾರೆ, ಈ ಪ್ರವೃತ್ತಿ ಮುಂದುವರಿದರೆ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.



ಸರ್ಕಾರದ ಯೋಜನೆಯಡಿ ನೀಡಬೇಕಾದ ಹಕ್ಕುಪತ್ರವನ್ನು ಬಹುಕಾಲದಿಂದ ನೀಡದ ಹಿನ್ನೆಲೆಯಲ್ಲಿ, ರಾಬಿಯಾ ವ್ಯಂಗ್ಯಗೀತೆ ರಚಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಉಲ್ಲೇಖಿಸಿ ಹಾಡು ಹಾಡಿದರು. "ಐದು ಗ್ಯಾರಂಟಿಗಳ ಬದಲು ನನಗೆ ಮನೆ ಕೊಡಿ" ಎಂಬ ಅರ್ಥದ ಗೀತೆಯ ಮೂಲಕ ಅವರು ತಮ್ಮ ಸಮಸ್ಯೆಯನ್ನು ಬಹಿರಂಗಪಡಿಸಲು ಪ್ರಯತ್ನಿಸಿದರು.

2024ರಲ್ಲಿ ಮುಖ್ಯಮಂತ್ರಿಗಳ ಭೇಟಿಯ ವೇಳೆ ಕೂಡ ಇದೇ ರೀತಿಯ ಪ್ರತಿಭಟನೆ ನಡೆಸಿದ್ದರು. ಬಳಿಕ ಜಿಲ್ಲಾಧಿಕಾರಿ ಸಮಸ್ಯೆ ಪರಿ ಹರಿಸಲು ಸೂಚನೆ ನೀಡಿದರೂ, ಇದುವರೆಗೆ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ್ದಾರೆ. ಈ ಬಾರಿ ಜನಸ್ಪಂದನ ಕಾರ್ಯ ಕ್ರಮದಲ್ಲಿ ತಮ್ಮ ಇಬ್ಬರು ಮಕ್ಕಳೊಂದಿಗೆ ವೇದಿಕೆಯ ಮೇಲೆ ತೆರಳಿ ಹಾಡು ಹಾಡಿ, ಅಧಿಕಾರಿಗಳ ವಿರುದ್ಧ ಪ್ರತಿಭಟಿಸಿದರು.

ನ್ಯಾಯಾಲಯದ ಆದೇಶಗಳಿ ದ್ದರೆ, ಜನರಿಗೆ ನ್ಯಾಯ ಒದಗಿಸಲು ಅವುಗಳನ್ನು ತ್ವರಿತವಾಗಿ ಕಾರ್ಯ ಗತಗೊಳಿಸಬೇಕು ಎಂದೂ ಸ್ಪಷ್ಟಪಡಿಸಿದ್ದಾರೆ. ಜೊತೆಗೆ, ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮದ ಪ್ರಗತಿ ನಿಧಾನವಾಗಿರುವುದಕ್ಕೂ ಅಧಿಕಾರಿಗಳ ವಿರುದ್ಧ ಕಿಡಿಕಾರಿದ ಅವರು, ಒಂದು ತಿಂಗಳೊಳಗೆ ಯೋಜನೆ ಪ್ರಾರಂಭಿಸಲು ಗಡುವು ನೀಡಿದರು.

# ಮತದಾರರನ್ನು ಕೈಬೀಸಿ ಕರೆಯುತ್ತಿವೆ ವಿಶೇಷ ಮತಗಟ್ಟೆಗಳು

ಬಾಗಲಕೋಟೆ: ಇಂದು ಬಾಗಲಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಉಪಚುನಾವಣೆಗೆ ಮತದಾನ ನಡೆಯುತ್ತಿದೆ. ಮತದಾನದ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಂತೆ ಬಾಗಲಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಖಿ, ವಿಶೇಷಚೇತನಸ್ನೇಹಿ, ಯುವ ಹಾಗೂ ಥೀಮ್ ಆಧಾರಿತ ಮತಗಟ್ಟೆಗಳನ್ನು ಸಜ್ಜುಗೊಳಿಸ ಲಾಗಿದೆ ಎಂದು ಜಿ.ಪಂ ಸಿಇಒ ಹಾಗೂ ಜಿಲ್ಲಾ ಸ್ವೀಪ್ ಅಧ್ಯಕ್ಷ ಶಶಿಧರ ಕುರೇರ್ ತಿಳಿಸಿದರು.



ಬುಧವಾರ ನವನಗರ ಅಂಬೇಡ್ಕರ ಭವನದಲ್ಲಿ ಸ್ಥಾಪಿಸಲಾದ ಸಖಿ ಮತ್ತು ಯುವ ಮತಗಟ್ಟೆ ಹಾಗೂ ಅಂಜುಮನ್ ಇಂಗ್ಲಿಷ್ ಮೀಡಿಯಂ ಪ್ರೀ ಪ್ರೈಮರಿ ಸ್ಕೂಲ್, ಪಿಎಂಶ್ರೀ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಸ್ಥಾಪಿಸಲಾದ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿದ ಅವರು, ಬಾಗಲಕೋಟೆ ವಿಧಾನಸಭಾ ಉಪಚುನಾವಣೆಗೆ ಸಂಬಂಧಿಸಿದಂತೆ ಎರಡು ಪಿಂಕ್ (ಸಖಿ), ತಲಾ ಒಂದು ಯುವ, ವಿಶೇಷಚೇತನಸ್ನೇಹಿ ಹಾಗೂ ಥೀಮ್ ಆಧಾರಿತ ಮತಗಟ್ಟೆಗಳನ್ನು ಸಜ್ಜುಗೊಳಿಸಲಾಗಿದೆ ಎಂದರು.

ಮತದಾನದ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಜಿಲ್ಲಾ ಹಾಗೂ ತಾಲೂಕು ಸ್ವೀಪ್ ಸಮಿತಿಯಿಂದ ಜಾಗೃತಿ ಮೂಡಿಸಲಾಗಿದೆ. ಇನ್ನು ಮತದಾರರನ್ನು ಮತಗಟ್ಟೆಯತ್ತ ಆಕರ್ಷಿಸಲು ಒಟ್ಟು 5 ಬಗೆಯ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮತಗಟ್ಟೆ ಗೋಡೆಗಳ ಮೇಲೆ ಬಗೆ ಬಗೆಯ ಚಿತ್ರಗಳ ಜೊತೆಗೆ ಮತದಾನದ ಜಾಗೃತಿ ಕುರಿತು ಘೋಷ ವಾಕ್ಯಗಳನ್ನು ಬರೆಯಲಾಗಿದೆ. ವಿಶೇಷ ಚೇತನ ಮತದಾರರನ್ನು ಆಕರ್ಷಿಸುವ ರಂಗು ರಂಗಿನ ಚಿತ್ರಗಳು, ಪಿಂಕ್ ಬಣ್ಣದಿಂದ ಅಲಂಕೃತಗೊಂಡ ಸಖಿ ಮತಗಟ್ಟೆಗಳು ಮತದಾರ ರನ್ನು ಕೈ ಬೀಸಿ ಕರೆಯುವಂತಿವೆ.

ಭಾರತದಂತಹ ಬೃಹತ್ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮುಕ್ತ, ನ್ಯಾಯಸಮ್ಮತ ಹಾಗೂ ಅಚ್ಚುಕಟ್ಟಾಗಿ ಮತದಾನ ನಡೆಸುವುದು ಸವಾಲಿನ ಕೆಲಸ. ಮತದಾರರಲ್ಲಿ ಜಾಗೃತಿ ಮೂಡಿಸಲು ಕೇಂದ್ರ ಚುನಾವಣಾ ಆಯೋಗ ಹಲವು ಕ್ರಮಗಳನ್ನು ನಿರಂತರವಾಗಿ ಕೈಗೊಳ್ಳುತ್ತಾ ಬಂದಿದೆ.

ಆ ಮಾರ್ಗದಲ್ಲಿಯೇ ಜಿಲ್ಲಾ ಸ್ವೀಪ್ ಸಮಿತಿಯ ಮತ್ತೊಂದು ಅದ್ಭುತ ಕಲ್ಪನೆ ಇದಾಗಿದೆ. ಎಲ್ಲರನ್ನೂ ಒಳಗೊಳ್ಳುವಿಕೆಯ ಮಂತ್ರ ಈ ವಿಶೇಷ ಮತಗಟ್ಟೆಗಳ ನಿರ್ಮಾಣದ ಹಿಂದಿದೆ. ಮತದಾರ ರನ್ನು ಮತಗಟ್ಟೆಯೆಡೆ ಸೆಳೆದು ಅವರಲ್ಲಿ ಜಾಗೃತಿ ಮೂಡಿಸುವ ಮೂಲಕ ಮತದಾನದ ಪ್ರಮಾಣವನ್ನು ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದು ಸಿಇಒ ತಿಳಿಸಿದರು. ಮತಗಟ್ಟೆ ಭೇಟಿ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಬಡದಾನಿ, ಜಿ.ಪಂ ಸಹಾಯಕ ಯೋಜನಾ ಧಿಕಾರಿ ಭೀಮಪ್ಪ ತಳವಾರ, ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್ ಸೇರಿದಂತೆ ಇತರರು ಇದ್ದರು.

# ಮೈಸೂರಿನಲ್ಲಿ ನಿಮ್ಹಾನ್ಸ್ ಕಾಮಗಾರಿಗೆ ರೈತರ ವಿರೋಧ

ಮೈಸೂರು: ಫಲವತ್ತಾದ ಕೃಷಿ ಭೂಮಿಯಲ್ಲಿ ನಿಮ್ಹಾನ್ಸ್ ಕಟ್ಟಡ ಕಟ್ಟಲು ಸ್ಥಳೀಯ ರೈತರು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಕಾಮಗಾರಿಯನ್ನು ಸ್ಥಗಿತಗೊಳಿಸಿದೆ. ಹಾಗಾದರೆ ಈ ಪ್ರದೇಶದಲ್ಲಿ ನಿಮ್ಹಾನ್ಸ್ ಕಟ್ಟಡ ಕಟ್ಟಲು ರೈತರು ವಿರೋಧಿಸುತ್ತಿರುವುದಾದರೂ ಏಕೆ ಎಂಬ ಮಾಹಿತಿ ಇಲ್ಲಿದೆ.

ಕಳೆದ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ವರುಣ ಕ್ಷೇತ್ರದ ಗುಡುಮಾದನಹಳ್ಳಿ ಗ್ರಾಮದ ಸುಮಾರು 20 ಎಕರೆ ಭೂಮಿಯಲ್ಲಿ 83 ಕೋಟಿ ವೆಚ್ಚದಲ್ಲಿ ನಿಮ್ಹಾನ್ಸ್ ಮಾದರಿಯ ಆಸ್ಪತ್ರೆ ಮತ್ತು ಸಂಶೋಧನಾ ಕಾಲೇಜನ್ನು ನಿರ್ಮಾಣ ಮಾಡುವುದಾಗಿ ಘೋಷಣೆ ಮಾಡಿದರು. ಆದರೆ, ಈ ಸ್ಥಳ ಮೈಸೂರಿನಿಂದ 7 ಕಿಮೀ ದೂರದಲ್ಲಿದ್ದು, ಫಲವತ್ತಾದ ನೀರಾವರಿ ಜಮೀನಾಗಿದೆ. ಇಲ್ಲಿರುವ ಸುಮಾರು 80 ರೈತ ಕುಟುಂಬಗಳು ಕೃಷಿ ಚಟುವಟಿಕೆಗಳನ್ನು ಮಾಡಿಕೊಂಡು ಜೀವ ನಡೆಸುತ್ತಿವೆ. ವರ್ಷವಿಡೀ ಫಲವತ್ತಾದ ಭೂಮಿಯಾಗಿರುವ ಈ ಪ್ರದೇಶದಲ್ಲಿ ತೆಂಗು, ಭತ್ತ, ರಾಗಿ, ಜೋಳ ಬೆಳೆಯಲಾಗುತ್ತಿದೆ. ಇದರ ಜೊತೆಗೆ ಹೈನುಗಾರಿಕೆಯನ್ನೇ ಆದಾಯದ ಮೂಲವಾಗಿ ನಂಬಿರುವ ಈ ಕುಟುಂಬಗಳು ಸುಮಾರು 80 ವರ್ಷಗಳಿಂದ ಇಲ್ಲೇ ವಾಸವಾಗಿದ್ದಾರೆ. ಇಂತಹ ಫಲವತ್ತಾದ ಪ್ರದೇಶದಲ್ಲಿ ನಿಮ್ಹಾನ್ಸ್ ಆಸ್ಪತ್ರೆ ಕಟ್ಟಡ ಬೇಡ ಎಂದು ರೈತರು ಕಳೆದ 90 ದಿನಗಳಿಂದಲೂ ಪ್ರತಿಭಟನೆ ನಡೆಸುತ್ತಿದ್ದಾರೆ. ಹಾಗೂ ಸರ್ಕಾರಕ್ಕೂ ಮನವಿ ಸಲ್ಲಿಸಿದ್ದಾರೆ.

**ಕಾಮಗಾರಿಗೆ ತಡೆ:** ರೈತರ ವಿರೋಧದ ನಡುವೆಯೂ ಮಂಗಳವಾರ ಬೆಳಗ್ಗಿನ ಜಾವ ಜೆಸಿಬಿ ಮೂಲಕ ಜಿಲ್ಲಾಡಳಿತ ಕಾಮಗಾರಿ ಆರಂಭಿಸಲು ಆಗಮಿಸಿದಾಗ ರೈತರು ಜೆಸಿಬಿಯನ್ನು ತಡೆದು ಆಕ್ರೋಶ ವ್ಯಕ್ತಪಡಿಸಿದರು.

ಅಲ್ಲದೇ ಗುಡು ಮಾದನಹಳ್ಳಿಯ ಈ ನೀರಾವರಿ ಜಾಗ ನಿಮ್ಹಾನ್ಸ್ ಆಸ್ಪತ್ರೆ ಕಟ್ಟಲು ಯೋಗ್ಯವಲ್ಲ. ಬೇರೆ ಕಡೆ ಈ ಕಟ್ಟಡವನ್ನು ಕಟ್ಟಿ ಎಂದು ರೈತರು ಆಗ್ರಹಿಸಿದರು. ಆದ್ದರಿಂದ ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿ ಜೆಸಿಬಿ ವಾಪಸ್ ಆಯಿತು.

**ಏಪ್ರಿಲ್ 9ಕ್ಕೆ ಹೋರಾಟ:** ಕಾಮಗಾರಿ ವಿರೋಧಿಸಿ, ರೈತರು ನಡೆಸುತ್ತಿರುವ ಹೋರಾಟದ ಸಂದರ್ಭದಲ್ಲಿ ಒಬ್ಬ ಸಬ್ ಇನ್ಸ್‌ಪೆಕ್ಟರ್ ರೈತರ ಕೆನ್ನೆಗೆ ಹೊಡೆದಿದ್ದಾರೆ. ಹಾಗೂ ಈ ಸ್ಥಳದಲ್ಲಿ ಕಾಮಗಾರಿಯನ್ನು ಮಾಡಬಾರದು ಎಂದು ಆಗ್ರಹಿಸಿ ರಾಜ್ಯ ರೈತ ಸಂಘ ಏ.9 ರಂದು ಜಿಲ್ಲಾಧಿಕಾರಿ ಕಚೇರಿಗಳ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ತಿಳಿಸಿದರು.

**ಮುಖ್ಯಮಂತ್ರಿಗೆ ಮನವಿ:** ತಮ್ಮ ವರುಣ ಕ್ಷೇತ್ರದ ವ್ಯಾಪ್ತಿಯ ಗುಮಾದನಹಳ್ಳಿಯಲಿ ನಿಮ್ಹಾನ್ಸ್ ಕಟ್ಟಡ ಕಟ್ಟಲು ಹೊರಟ ರಾಜ್ಯ ಸರ್ಕಾರ ಕೂಡಲೇ ಈ ಕಟ್ಟಡವನ್ನು ಬೇರೆ ಕಡೆ ನಿರ್ಮಿಸಿ, ಫಲವತ್ತಾದ ಕೃಷಿ ಭೂಮಿಯನ್ನು ಉಳಿಸಿ ಎಂದು ರೈತ ಸಂಘದ ಮುಖಂಡರು ಸ್ಥಳೀಯ ಶಾಸಕರು ಹಾಗೂ ರಾಜ್ಯದ ಮುಖ್ಯಮಂತ್ರಿ ಆದ ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡಿದ್ದಾರೆ.

ಪ್ರತಿಭಟನೆ ನಡೆಯುತ್ತಿರುವ ಸ್ಥಳಕ್ಕೆ ಪ್ರತಿ ದಿನ ಪೊಲೀಸರು ಬಂದು ಕಿರುಕುಳ ನೀಡುತ್ತಾರೆ. ಯಾವುದೇ ಕಾರಣಕ್ಕೂ ನಮ್ಮ ಬದುಕಾಗಿರುವ ಈ ಭೂಮಿಯನ್ನು ಬಿಡುವುದಿಲ್ಲ ಬೇರೆ ಕಡೆ ನಿಮ್ಹಾನ್ಸ್ ಕಟ್ಟಡವನ್ನು ಕಟ್ಟಲಿ ಎಂದು ರೈತರಾದ ಉಮೇಶ್ ಗೌಡ, ರಘು ಹಾಗೂ ಪ್ರಸನ್ನ ಆಗ್ರಹಿಸಿದ್ದಾರೆ.

# ಪ್ರವಾಸಕ್ಕೆ ಬಂದಿದ್ದ ಮೂವರು ಕೆರೆಯಲ್ಲಿ ಮುಳುಗಿ ಸಾವು

**ವಿಜಯಪುರ:** ಪ್ರವಾಸಕ್ಕೆ ಬಂದಿದ್ದ ಬಾಲಕ ಹಾಗೂ ಇತರ ಇಬ್ಬರು ನಗರದ ಐತಿಹಾಸಿಕ ಭೂತನಾಳ ಕೆರೆಯಲ್ಲಿ ಮುಳುಗಿ ಮೃತಪಟ್ಟ ಘಟನೆ ಬುಧವಾರ ಸಂಭವಿಸಿದೆ. ಕುಟುಂಬಸ್ಥರು ಕೆರೆ ವೀಕ್ಷಣೆ ಮಾಡುತ್ತಿದ್ದ ವೇಳೆ ಅವಘಡ ನಡೆದಿದೆ. ಬೆಂಗಳೂರಿನ ಆರ್.ಟಿ.ನಗರದ ಮಹಮ್ಮದ್ ಹಯಾತ್ (12), ಹೈದರ್ ಪಾಷಾ (32) ಹಾಗೂ ಅಬ್ದುಲ್ ಖುದ್ದುಸ್ (35) ಮೃತಪಟ್ಟವರು. ಒಟ್ಟು 14 ಜನ ಪ್ರವಾಸಕ್ಕೆಂದು ಕುಟುಂಬ ಸಮೇತ ವಿಜಯಪುರಕ್ಕೆ ಆಗಮಿಸಿದ್ದರು.

ಮೊದಲಿಗೆ ಬಾಲಕ ಹೈದರ್ ಪಾಷಾ ನೀರಿಗೆ ಇಳಿದಿದ್ದ ವೇಳೆ ಮುಳುಗಿದ್ದಾನೆ.

ಆತನ ರಕ್ಷಣೆಗೆ ಅಬ್ದುಲ್ ಖುದ್ದುಸ್ ಹಾಗೂ ಹೈದರ್ ಪಾಷಾ ಮುಂದಾದಾಗ ಅನಾಹುತ ನಡೆದಿದೆ ಎಂದು ತಿಳಿದುಬಂದಿದೆ.

ಘಟನೆ ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಹಾಗೂ ಆದರ್ಶನಗರ ಠಾಣೆ ಪೊಲೀಸರು, ಮೂವರನ್ನೂ ನೀರಿನಿಂದ ಹೊರತೆಗೆದಿದ್ದಾರೆ. ಬಾಲಕ ಮಹಮ್ಮದ್ ಹಯಾತ್ ಹಾಗೂ ಹೈದರ್ ಪಾಷಾ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ತೀವ್ರ ಅಸ್ವಸ್ಥಗೊಂಡಿದ್ದ ಅಬ್ದುಲ್ ಖುದ್ದುಸ್ ಆಸ್ಪತ್ರೆಗೆ ಸಾಗಿಸುವಾಗ ಮಾರ್ಗ ಮಧ್ಯೆ ಕೊನೆಯುಸಿ ರೆಳೆದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಳಿಕ ಮೂವರ ಮೃತದೇಹ ಗಳನ್ನು ಜಿಲ್ಲಾಸ್ಪತ್ರೆಗೆ ರವಾನೆ ಮಾಡಲಾಗಿದೆ.

ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿ ಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮರಣೋತ್ತರ ಪರೀಕ್ಷೆ ಬಳಿಕ ಮೃತದೇಹಗಳನ್ನು ಕುಟುಂಬಸ್ಥರಿಗೆ ಹಸ್ತಾಂತರ ಮಾಡಲಾಗುತ್ತಿದೆ. ಈ ಬಗ್ಗೆ ಆದರ್ಶನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖ ಲಾಗಿದೆ.

# ದ್ವಿತೀಯ ಪಿಯುಸಿ ದಾಖಲೆ ಫಲಿತಾಂಶ; ಶೇ.86.48ರಷ್ಟು ಪಾಸ್ ಬಾಲಕಿಯರೇ ಮೇಲುಗೈ

ಬೆಂಗಳೂರು : ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 5,46,698 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಕರ್ನಾಟಕದಲ್ಲಿ ಮೊದಲ ಬಾರಿಗೆ ಶೇ.86.48ರಷ್ಟು ದಾಖಲೆಯ ಫಲಿತಾಂಶ ಬಂದಿದೆ.

ನಗರದಲ್ಲಿ ಗುರುವಾರ ಸಂಜೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 6,32,200 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 5,46,698 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಈ ಪೈಕಿ 2,32,928 ( 83.65%) ಬಾಲಕರು, 3,13,770 (88.70%) ಬಾಲಕಿಯರು ಉತ್ತೀರ್ಣರಾಗಿದ್ದು, ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ ಎಂದರು.

ದಾಖಲೆಯ ಫಲಿತಾಂಶ ಪ್ರಕಟವಾದ ಇದು ಐತಿಹಾಸಿಕ ದಿನವಾಗಿದೆ, ಮೊದಲು ಮಕ್ಕಳಿಗೆ ಧನ್ಯವಾದ ಹೇಳುತ್ತೇನೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹರ್ಷ ವ್ಯಕ್ತಪಡಿಸಿದರು. ಕಲಾ ವಿಭಾಗದಲ್ಲಿ 98,310 (72.86%) ವಿದ್ಯಾರ್ಥಿಗಳು, ವಾಣಿಜ್ಯ ವಿಭಾಗದಲ್ಲಿ 1,82,317(88.04%) ವಿದ್ಯಾರ್ಥಿಗಳು ಹಾಗೂ ವಿಜ್ಞಾನ ವಿಭಾಗದಲ್ಲಿ 2,66,071( 86.48%) ಉತ್ತೀರ್ಣರಾಗಿದ್ದಾರೆ. ಈ ಪೈಕಿ ನಗರ ವಿಭಾಗದಲ್ಲಿ 3,71,853 (85.95%) ಮಕ್ಕಳು, ಗ್ರಾಮೀಣ ವಿಭಾಗದ 1,74,845 (87.62%) ಮಕ್ಕಳು ಉತ್ತೀರ್ಣರಾಗಿದ್ದಾರೆ.

ಉನ್ನತ ಶ್ರೇಣಿಯಲ್ಲಿ 1,70,529 ಮಕ್ಕಳು, ಪ್ರಥಮ ದರ್ಜೆಯಲ್ಲಿ 2,95,385 ಮಕ್ಕಳು, ದ್ವಿತಿಯ ದರ್ಜೆಯಲ್ಲಿ 63,957 ಮಕ್ಕಳು ಉತ್ತೀರ್ಣರಾಗಿದ್ದು, 16,827 ಮಕ್ಕಳು ಜಸ್ಟ್ ಪಾಸ್ ಆಗಿದ್ದಾರೆ ಎಂದು ಮಾಹಿತಿ ನೀಡಿದರು.

ಇನ್ನೂ 5,577 ವಿದ್ಯಾರ್ಥಿಗಳು 35% ನಿಂದ 33% ಪಾಸಿಂಗ್ ಅಂಕದಿಂದ ಪಾಸ್ ಆಗಿದ್ದಾರೆ. ಮಕ್ಕಳಿಗೆ ಫಲಿತಾಂಶ ಮೊದಲು ಕೊಡಬೇಕು ಎಂದು ವೆಬ್‌ಸೈಟ್‌ನಲ್ಲಿ ಫಲಿತಾಂಶ ಪ್ರಕಟ ಮಾಡಿದ್ದೇವೆ. ಅಂಕಪಟ್ಟಿ ಕೂಡ ಇಂದೇ ಲಭ್ಯವಾಗಿದೆ. ಡಿಜಿ ಲಾಕರ್‌ನಲ್ಲೂ ಅಂಕಪಟ್ಟಿ ಸಿಗಲಿದೆ.

ಈ ವರ್ಷ ಶೇ.86ರಷ್ಟು ಮಕ್ಕಳು ಉತ್ತೀರ್ಣರಾಗಿದ್ದಾರೆ. ಅಂದರೆ 7,10,363 ವಿದ್ಯಾರ್ಥಿಗಳ ಪೈಕಿ 6.10 ಲಕ್ಷ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಳೆದ ವರ್ಷ ಶೇ.73.45ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದರು. ಇದರೊಂದಿಗೆ ಈ ಬಾರಿ ಪಿಯುಸಿ ಫಲಿತಾಂಶದಲ್ಲಿ ಭಾರೀ ಸುಧಾರಣೆ ಕಂಡು ಬಂದಿದೆ.

**590ಕ್ಕಿಂತ ಅಧಿಕ ಅಂಕ:**

ವಾಣಿಜ್ಯ ವಿಭಾಗದಲ್ಲಿ 9 ವಿದ್ಯಾರ್ಥಿಗಳು 590ಕ್ಕಿಂತ ಅಧಿಕ ಅಂಕ ಗಳಿಸಿದ್ದಾರೆ. ಒಂದೇ ಕಾಲೇಜಿನ 9 ವಿದ್ಯಾರ್ಥಿಗಳು ವಾಣಿಜ್ಯ ವಿಭಾಗದಲ್ಲಿ ಈ ಸಾಧನೆ ಮಾಡಿದ್ದಾರೆ. ರಾಜಾಜಿನಗರದ ಎಎಸ್ ಸಿ ಕಾಲೇಜಿನ 9 ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಿದ್ದಾರೆ. ಈ ಬಾರಿಯ ಪಿಯುಸಿ ಫಲಿತಾಂಶದಲ್ಲಿ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳು ಪ್ರಥಮ ಸ್ಥಾನ ಪಡೆದಿವೆ. ಈ ಬಾರಿಯೂ ಈ ಎರಡು ಜಿಲ್ಲೆಗಳು ಅತ್ಯಧಿಕ ಪಾಸ್ ಪ್ರಮಾಣ ದಾಖಲಿಸಿವೆ.

ಶೇಕಡಾ 96.39 ಫಲಿತಾಂಶ ಪಡೆದು ಉಡುಪಿ ಜಿಲ್ಲೆ ರಾಜ್ಯಕ್ಕೆ ಮತ್ತೆ ಪ್ರಥಮ ಸ್ಥಾನ ಪಡೆದುಕೊಂಡರೆ, ಉತ್ತರ ಕನ್ನಡ ಜಿಲ್ಲೆ ಶೇಕಡಾ 96.35 ಫಲಿತಾಂಶದೊಂದಿಗೆ ರಾಜ್ಯಕ್ಕೆ ಎರಡನೇ ಸ್ಥಾನ ಪಡೆದಿದೆ.

ಬೆಂಗಳೂರು ನಗರ ಮತ್ತು ಮೈಸೂರು ಜಿಲ್ಲೆಗಳೂ ಉತ್ತಮ ಸಾಧನೆ ತೋರಿದ್ದು, ಹಾಸನ ಹಾಗೂ ಯಾದಗಿರಿ ಜಿಲ್ಲೆಗಳು ಶೇಕಡಾ 71.21 ಫಲಿತಾಂಶದೊಂದಿಗೆ ರಾಜ್ಯಕ್ಕೆ ಕೊನೆಯ ಸ್ಥಾನದಲ್ಲಿವೆ.

**ಟಾಪರ್ ಗಳು:**

ವಾಣಿಜ್ಯ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ ಅವರು 600 ಅಂಕಗಳಿಗೆ 600 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಇನ್ನು ಕಲಾ ವಿಭಾಗದಲ್ಲಿ ಬಳ್ಳಾರಿ ಜಿಲ್ಲೆಯ ಕೊಟ್ಟೂರಿನ ಇಂದು ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರಾದ ಅರ್ಚನಾ ಮತ್ತು ಸಂಗೀತ ಅವರು 600 ಅಂಕಗಳಿಗೆ 598 ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಶಮನ್ಯು ಎಸ್. ಶೆಟ್ಟಿ ಅವರು 600 ಅಂಕಗಳಿಗೆ 598 ಅಂಕ ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ಫಲಿತಾಂಶ ಲಭ್ಯ:

ಇದೇ ಮೊದಲ ಬಾರಿಗೆ ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿಯು ಡಿಜಿಲಾಕರ್ ಮೂಲಕ ಲಭ್ಯವಾಗಲಿದೆ. ಒಂದು ವೇಳೆ ವೆಬ್??ಸೈಟ್??ನಲ್ಲಿ ರಿಸಲ್ಟ್ ನೋಡುವಾಗ ಸರ್ವರ್ ಸಮಸ್ಯೆ ಎದುರಾದರೆ ಡಿಜಿಲಾಕರ್ ಮೂಲಕವೇ ಮಾರ್ಕ್ಸ್ ಕಾರ್ಡ್ ಪಡೆದುಕೊಳ್ಳಬಹುದು.

**ದಿಶಾ ವಾಣಿಜ್ಯ ಪ್ರಥಮ**

ಮೂಡುಬಿದಿರೆಯ ಆಳ್ವಾಸ್ ಪಿಯು ಕಾಲೇಜು ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶದಲ್ಲಿ ರಾಜ್ಯಮಟ್ಟದಲ್ಲಿ ಅಭೂತಪೂರ್ವ ಯಶಸ್ಸು ಸಾಧಿಸಿದೆ.

ವಾಣಿಜ್ಯ ವಿಭಾಗದಲ್ಲಿ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆಯುವ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಹೊಸ ದಾಖಲೆ ಬರೆದಿದ್ದಾರೆ.

ಮೂಡುಬಿದಿರೆಯ ದಿಶಾ. ವಾಣಿಜ್ಯ ವಿಭಾಗದ ಆರೂ ವಿಷಯಗಳಲ್ಲಿ 600 (ಶೇ.100) ಅಂಕಗಳನ್ನು ಪಡೆಯುವ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಕಲಾ ವಿಭಾಗದಲ್ಲಿ ಬಳ್ಳಾರಿ ಜಿಲ್ಲೆಯ ಕೊಟ್ಟೂರಿನ ಇಂದು ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರಾದ ಅರ್ಚನಾ ಮತ್ತು ಸಂಗೀತ ಅವರು 600 ಅಂಕಗಳಿಗೆ 598 ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಶಮನ್ಯು ಎಸ್. ಶೆಟ್ಟಿ ಅವರು 600 ಅಂಕಗಳಿಗೆ 598 ಅಂಕ ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ಬಳ್ಳಾರಿ ಸೆಂಟ್ರಲ್ ಜೈಲಿನ

ಕೈದಿಗೆ 600ಕ್ಕೆ 481

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಬಳ್ಳಾರಿ ಸೆಂಟ್ರಲ್ ಜೈಲಿನ ಶಿಕ್ಷಾ ಬಂಧಿ ಫಸ್ಟ್ ಕ್ಲಾಸ್‌ನಲ್ಲಿ ಪಾಸಾಗಿದ್ದಾನೆ. 600ಕ್ಕೆ 481 ಅಂಕಗಳನ್ನು ಪಡೆದಿದ್ದಾನೆ.

ಶಿಕ್ಷಾಬಂಧಿ ಅಶೋಕ್ ಕುಮಾರ್ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಫಸ್ಟ್ ಕ್ಲಾಸ್ ಬಂದಿದ್ದಾನೆ. ಈತ ಕಲಾ ವಿಭಾಗದಲ್ಲಿ ಪರೀಕ್ಷೆ ಬರೆದಿದ್ದ. 600ಕ್ಕೆ 481 ಅಂಕ ಪಡೆಯುವ ಮೂಲಕ ಶೇ.81% ಫಲಿತಾಂಶದ ಸಾಧನೆ ಮಾಡಿದ್ದಾನೆ.

ಕನ್ನಡದಲ್ಲಿ 82, ಇಂಗ್ಲಿಷ್ 69, ಇತಿಹಾಸ 94, ಅರ್ಥಶಾಸ್ತ್ರ 84, ಸಮಾಜಶಾಸ್ತ್ರ 77, ರಾಜ್ಯಶಾಸ್ತ್ರ75 ಅಂಕ ಗಳಿಸಿದ್ದಾನೆ. ಶಿಕ್ಷಾಬಂಧಿ ಅಶೋಕ್ ಕುಮಾರ್ ಜೈಲಿನ ಪ್ರತ್ಯೇಕ ಸೆಲ್‌ನಲ್ಲಿಯೇ ಅಭ್ಯಾಸ ಮಾಡಿದ್ದ.

ಯಾವ ಜಿಲ್ಲೆ ಎಷ್ಟನೇ ಸ್ಥಾನ

ಕಳೆದ ಬಾರಿ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಉಡುಪಿ ಪ್ರಥಮ ಸ್ಥಾನ ಪಡೆದುಕೊಂಡಿದ್ದರೆ, ಯಾದಗಿರಿ ಕೊನೆ ಸ್ಥಾನದಲ್ಲಿತ್ತು.

ಈ ಬಾರಿಯೂ ಸಹ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಉಡುಪಿ ಪ್ರಥಮ, ಯಾದಗಿರಿ ಕೊನೇ ಸ್ಥಾನದಲ್ಲಿದೆ. ಶೇಕಡಾ 9639 ಫಲಿತಾಂಶ ಪಡೆದು ಉಡುಪಿ ಜಿಲ್ಲೆ ರಾಜ್ಯಕ್ಕೆ ಮತ್ತೆ ಪ್ರಥಮ ಸ್ಥಾನ ಪಡೆದುಕೊಂಡರೆ, ಉತ್ತರ ಕನ್ನಡ ಜಿಲ್ಲೆ ಶೇಕಡಾ 96.35 ಫಲಿತಾಂಶದ ಮೂಲಕ ರಾಜ್ಯದಲ್ಲೇ ಎರಡನೇ ಸ್ಥಾನ ಪಡೆದಿದೆ.

ಇನ್ನು ಹಾಸನ ಯಾದಗಿರಿ ಜಿಲ್ಲೆ ಶೇಕಡಾ 71.21 ಫಲಿತಾಂಶದ ಮೂಲಕ ರಾಜ್ಯಕ್ಕೆ ಕೊನೆಯ ಸ್ಥಾನದಲ್ಲಿದೆ.

ಜಿಲ್ಲಾವಾರು ಫಲಿತಾಂಶ

ಉಡುಪಿ – 96.39%
ದಕ್ಷಿಣ ಕನ್ನಡ – 96.35%
ಕೊಡಗು – 92.34%
ವಿಜಯಪುರ – 92%
ಉತ್ತರ ಕನ್ನಡ – 91.78%
ಬೆಂಗಳೂರು ಗ್ರಾಮಾಂತರ – 91.00%
ಚಿಕ್ಕಮಗಳೂರು – 90.80%
ಬೆಂಗಳೂರು ದಕ್ಷಿಣ – 90.55%
ಚಿಕ್ಕಬಳ್ಳಾಪುರ – 90.24%
ಬೆಂಗಳೂರು ಉತ್ತರ – 90.05%
ಹಾಸನ – 89.71%
ಮಂಡ್ಯ – 88.85%
ರಾಮನಗರ – 87.90%
ಕೋಲಾರ – 87.38%
ಶಿವಮೊಗ್ಗ – 87.62%
ತುಮಕೂರು – 86.89%
ಕೊಪ್ಪಳ – 86.80%
ಚಾಮರಾಜನಗರ – 84.68%
ಮೈಸೂರು – 84.80%
ಬೀದರ್ – 84.61%
ಬಾಗಲಕೋಟೆ – 84.12%
ಹಾವೇರಿ – 84.11%
ಧಾರವಾಡ – 83.31%
ಚಿಕ್ಕೋಡಿ – 83.10%
ದಾವಣಗೆರೆ – 81.99%
ಬೆಳಗಾವಿ – 80.32%
ಚಿತ್ರದುರ್ಗ – 79.12%
ಬಳ್ಳಾರಿ – 78.69%
ಕಲಬುರಗಿ – 76.97%
ಗದಗ – 76.65%
ರಾಯಚೂರು – 74.09%
ಯಾದಗಿರಿ – 71.21%

# ಕದನ ವಿರಾಮ.....

ಯುದ್ಧ ವಿರಾಮ ಘೋಷಣೆಯಾಗಿದೆ. ಸಾವಿರಾರು ಜನರ ಹತ್ಯೆಗಳ ನಂತರ,

ಅಪಾರ ಪ್ರಮಾಣದ ಭೂಪ್ರದೇಶ, ನೈಸರ್ಗಿಕ ಸಂಪನ್ಮೂಲಗಳು, ತೈಲ ಘಟಕಗಳು ಮತ್ತು ಪರಿಸರವನ್ನು ನಾಶ ಮಾಡಿದ ನಂತರ,

ಅತ್ಯಂತ ಉಪಯುಕ್ತ ಕಟ್ಟಡಗಳು, ಆಸ್ಪತ್ರೆ, ಶಾಲೆಗಳು ನಾಶವಾದ ನಂತರ, ಈ ಕದನ ವಿರಾಮ

ಸತ್ತವರನ್ನು ಮರಳಿ ತರುವುದೇ ?,

ಸತ್ತವರಿಗೆ ನ್ಯಾಯ ಕೊಡಿಸುವುದೇ ?

ಅಪಾರ ಪರಿಸರ ನಾಶಕ್ಕೆ ಹೊಣೆ ಯಾರು ?.....

ಅರ್ಥ ಮಾಡಿಕೊಳ್ಳಿ, ಕೊನೆಗೂ ಗೆಲ್ಲುವುದು ಹಿಂಸೆಯಲ್ಲ ಅಹಿಂಸೆ, ಕೊನೆಗೂ ಗೆಲ್ಲುವುದು ಸಂಧಾನವೇ ಹೊರತು ಸಂಘರ್ಷವಲ್ಲ, ಕೊನೆಗೂ ಗೆಲ್ಲುವುದು ಪ್ರೀತಿಯೇ ಹೊರತು ದ್ವೇಷವಲ್ಲ....

ಸೇಡಿಗಿಂತ ಸಂಧಾನ ಅತ್ಯುತ್ತಮ, ಸೇಡು ಶಾಪ, ಸಂಧಾನ ವರ....

ಕದನ ವಿರಾಮವೆಂಬ ಅಜ್ಞಾನದ ನಾಟಕ.....

ಸಾವಿರಾರು ಜನ ಸತ್ತು, ನೂರಾರು ಮಕ್ಕಳು, ಮಹಿಳೆಯರು ಗಾಯಗೊಂಡು, ಅನೇಕರು ಅನಾಥರಾದ ನಂತರ ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ನಡುವೆ ಹದಿನೈದು ದಿನಗಳ ಕದನ ವಿರಾಮ ಘೋಷಣೆಯಾಗಿದೆ. ಆ ನಂತರ ಯುದ್ಧ ಮುಂದುವರಿಯುತ್ತದೆ ಅಥವಾ ಇನ್ನೊಂದಿಷ್ಟು ದಿನ ಕದನ ವಿರಾಮ ಜಾರಿಯಲ್ಲಿರಬಹುದು.

ಇದೇ ಕೆಲಸವನ್ನು ಮೊದಲೇ ಮಾಡಿದ್ದರೆ ಸಾವಿರಾರು ಜನರ ಜೀವ ಉಳಿಯುತ್ತಿತ್ತಲ್ಲವೇ. ಮೂರೂ ದೇಶಗಳು ಇದರಿಂದ ಮಾಡಿದ ಸಾಧನೆಯಾದರು ಏನು. ಯುದ್ಧದಿಂದ ಎಲ್ಲಾ ಕಡೆ ಸಾವು ನೋವುಗಳೇ ಎಂಬುದು ತಿಳಿದಿಲ್ಲವೇ. ಮತ್ತೆ ಯುದ್ಧ ಮಾಡಿ, ಮುಂದೆ ಯಾವುದೋ ಒಂದು ದಿನ, ಯಾವುದೋ ಹಂತದಲ್ಲಿ ಒಪ್ಪಂದ ಮಾಡಿಕೊಂಡು ಯುದ್ಧ ನಿಲ್ಲುವುದು ಖಚಿತ. ಆದರೆ ಅದು ಮಾಡಬಹುದಾದ ಘೋರ ದುರಂತವನ್ನು ಮರಳಿ ಸರಿಪಡಿಸುವುದು ಸಾಧ್ಯವೇ.....

ಇದೇ ಪ್ರಶ್ನೆ ರಷ್ಯಾ, ಉಕ್ರೇನ್ ಯುದ್ಧದ ಬಗ್ಗೆಯೂ ಏಳುತ್ತದೆ. ನಾಶದ ನಂತರ ಶರಣಾಗುವುದಕ್ಕಿಂತ ಮೊದಲೇ ಇದನ್ನು ಗ್ರಹಿಸಿ ಸ್ವಲ್ಪ ಹೊಂದಾಣಿಕೆಯ ಒಪ್ಪಂದ ಮಾಡಿಕೊಳ್ಳಬಹುದಲ್ಲವೇ......

ಅನೇಕ ಸೈನಿಕರು, ಅಮಾಯಕರು ಯುದ್ಧದ ದಾಳಿಗೆ ಬಲಿಯಾಗಿರುವ ಈ ಸಂದರ್ಭದಲ್ಲಿ ಮನಸ್ಸು ಮತ್ತೆ ಮತ್ತೆ ಹುತಾತ್ಮ ಭಾವನೆಗಿಂತ ಜೀವ ಉಳಿಸದೆ ಕೆಲವು ರಾಜಕಾರಣಿಗಳು ಮತ್ತು ಧರ್ಮದವರು ತಮ್ಮ ತೆವಲಿಗಾಗಿ ಅಮಾಯಕ ಜನರನ್ನು ಬಲಿಕೊಡುತ್ತಿರುವ ವ್ಯವಸ್ಥೆಯ ಬಗ್ಗೆ ಜಿಗುಪ್ಸೆ ಮೂಡುತ್ತದೆ.....

ಹಿಂಸೆಯ ಫಲಿತಾಂಶಗಳು ಮತ್ತೊಂದು ಹಿಂಸೆಗೆ ಬಿತ್ತುವ ಬೀಜ ಎಂದು ಖಚಿತವಾಗಿರುವಾಗಲೂ ಮತ್ತೆ ಮತ್ತೆ ಹಿಂಸೆಯಿಂದಲೇ ಪರಿಹಾರ ಹುಡುಕುವ ಹುಚ್ಚು ಮನಸ್ಸಿನ ಮನುಷ್ಯರ ಬಗ್ಗೆಯೇ ಕೋಪ ಬರುತ್ತದೆ. ಬದುಕಲು ಬಾರದ ಮನುಷ್ಯರು ಎಂದೇ ಕರೆಯಬೇಕಾಗುತ್ತದೆ. ರಾಜಕಾರಣಿಗಳೇನೋ ಅಧಿಕಾರಕ್ಕಾಗಿ ಹೋರಾಟ ಮಾಡುತ್ತಾರೆ. ಅವರೇನು ಯುದ್ಧ ಭೂಮಿಯಲ್ಲಿ ಹೋರಾಡುವುದಿಲ್ಲ. ಇವರ ರಕ್ಷಣೆಗಾಗಿ ಸೈನಿಕರು ಮತ್ತು ಸಾಮಾನ್ಯ ಜನರು ಜೀವ ತ್ಯಾಗ ಮಾಡಬೇಕು. ಇದು ಯಾವ ನ್ಯಾಯ..........

ಸಂಧಾನ ಸೂತ್ರಗಳು ಯಾವಾಗಲೂ ಇದ್ದೇ ಇರುತ್ತದೆ. ಆದರೆ ಅದನ್ನು ಗ್ರಹಿಸುವ ಮತ್ತು ಅನುಷ್ಠಾನ ಗೊಳಿಸುವ ವಿಶಾಲ ಮನೋಭಾವ ಮತ್ತು ಒಳ್ಳೆಯತನ ಮಾತ್ರ ಕಾಣೆಯಾಗಿದೆ. ಅದರ ಪರಿಣಾಮವೇ ಬಹುತೇಕ ಈ ಜಗತ್ತಿನಲ್ಲಿ ಶಾಂತಿಗಿಂತ ಹಿಂಸೆಯ ಪ್ರಮಾಣ ಜಾಸ್ತಿಯಾಗಿದೆ......

ಹೊಡೆತ ಬೀಳುವವರೆಗೆ ತಾನು ಸೂಪರ್ ಮ್ಯಾನ್ ಎಂಬಂತೆ ವರ್ತಿಸುವ ಮನುಷ್ಯರು ಮತ್ತು ಅವರ ನಿಯಂತ್ರಣದ ದೇಶಗಳು ಒಮ್ಮೆ ಬಲವಾದ ಹೊಡೆತ ಬಿದ್ದರೆ ನರಳುತ್ತಾ ಶರಣಾಗುತ್ತಾರೆ. ಅದೂ ಸಹ ತಾತ್ಕಾಲಿಕ. ಒಳಗೊಳಗೆ ದ್ವೇಷ ಅಸೂಯೆ ಹೊಗೆಯಾಡುತ್ತಲೇ ಇರುತ್ತದೆ. ಮತ್ತೆ ಕೆಲವು ಸಮಯದ ನಂತರ ಹಿಂಸೆಗೆ ಇಳಿಯುತ್ತಾರೆ. ಇಡೀ ಮಾನವ ಇತಿಹಾಸ ಇಂತಹ ಮನಸ್ಥಿತಿಯಿಂದಲೇ ತುಂಬಿದೆ.....

ಶಾಂತಿ ಎಂಬುದು ವಿನಾಶದ ಸಿದ್ದತೆ ಎಂಬಂತಾಗಿದೆ. ಬದುಕು ಎಂಬುದು ಸಾವಿಗೆ ಸಿದ್ದತೆ ಎಂಬಂತೆ. ಒಟ್ಟಿನಲ್ಲಿ ಇದೇ ವಿಶ್ವದ ಸ್ವಾಭಾವಿಕ ಗುಣವಾಗಿರಬಹುದು. ಅದನ್ನು ಅನುಭವಿಸುತ್ತಲೇ ಬದುಕುವುದು ಅನಿವಾರ್ಯವೇ ಅಥವಾ ಅಹಿಂಸೆಯ ಪರ್ಯಾಯ ಮಾರ್ಗಗಳ ಹುಡುಕಾಟ ಸಾಧ್ಯವೇ.....

ಏಕೆಂದರೆ, ದಿನ ನಿತ್ಯ ಈ ರೀತಿ ತಮ್ಮ ದೇಶಗಳಿಗಾಗಿ ಪ್ರಾಣತ್ಯಾಗ ಮಾಡುತ್ತಿರುವ ಅನೇಕ ಯುವಕರ ಜೀವಗಳನ್ನು ಉಳಿಸಲು ಸಾಧ್ಯವಾಗದ ಈ ಜಗತ್ತಿನ ಎಲ್ಲಾ ದೇವರು, ಧರ್ಮಗಳು, ಸರ್ಕಾರಗಳಿಗೆ ದಯವಿಟ್ಟು ಮನುಷ್ಯ ಜೀವಿಗಳ ಬದುಕುವ ಹಕ್ಕು ಮತ್ತು ಸ್ವಾತಂತ್ರ್ಯವನ್ನು ಕಾಪಾಡಿ, ಮನುಷ್ಯ ಪ್ರಾಣಿಯ ಘನತೆಯನ್ನು ರಕ್ಷಿಸಿ, ಉಳಿಸಿ ಎಂದು ಮನವಿ ಮಾಡಿಕೊಳ್ಳುತ್ತಾ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



ವಿವೇಕಾನಂದ. ಎಚ್. ಕೆ.
9663750451......
9844013068......

## ವಿಧಾನಸಭಾ ಚುನಾವಣೆಯಲ್ಲೂ ಮಹಿಳೆಯರಿಗೆ ಮೀಸಲಾತಿ:

# ಶೀಘ್ರದಲ್ಲೇ ಜಾರಿ; ಸಚಿವ ಚಲುವರಾಯಸ್ವಾಮಿ

ಮಂಡ್ಯ: ರಾಜ್ಯದಲ್ಲಿ ಮಹಿಳೆಯರ ಸಬಲೀಕರಣಕ್ಕೆ ಸರ್ಕಾರ ಹಲವು ಯೋಜನೆ ಗಳನ್ನು ಜಾರಿಗೆ ತಂದಿದ್ದು, ಗ್ಯಾರಂಟಿ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಮೂಲಕ ಈಗಾಗಲೇ 1.3 ಲಕ್ಷ ಕೋಟಿ ರೂ.ಕ್ಕಿಂತ ಹೆಚ್ಚು ಹಣವನ್ನು ವಿತರಿಸಲಾಗಿದೆ ಎಂದು ಕೃಷಿ ಸಚಿವ ಎನ್ ಚಲುವರಾಯ ಸ್ವಾಮಿ ಅವರು ಬುಧವಾರ ಹೇಳಿದರು.

ಜಿಲ್ಲಾಡಳಿತ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬುಧವಾರ ಇಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು, ಸವಾಲುಗಳು ಜೀವನದ ಒಂದು ಭಾಗವಾಗಿದ್ದರೂ, ಸರ್ಕಾರವು ಒದಗಿಸುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಮಹಿಳೆಯರು ಮುಂದೆ ಸಾಗಬೇಕು ಎಂದು ಹೇಳಿದರು.

ಇದೇ ವೇಳೆ ಸಮಾಜದಲ್ಲಿ ಮಹಿಳೆಯರ ಪಾತ್ರದ ಮಹತ್ವವನ್ನು ಒತ್ತಿಹೇಳಿದ ಅವರು, ಸ್ವಾತಂತ್ರ್ಯಕ್ಕೂ ಮುನ್ನವೇ ಮಹಿಳೆಯರಿಗೆ ಪ್ರತಿನಿಧಿತ್ವ ಮತ್ತು ಮನ್ನಣೆ ದೊರಕಿತ್ತು.. "ಹೆಣ್ಣು ಮಗು ಶಿಕ್ಷಣ ಪಡೆದರೆ ಒಂದು ಶಾಲೆ ತೆರೆದಂತೆಯೇ" ಎಂಬ ಸಂದೇಶದಡಿ ಮಹಿಳಾ ಶಿಕ್ಷಣಕ್ಕೆ ಸರ್ಕಾರ ವಿಶೇಷ ಒತ್ತು ನೀಡುತ್ತಿದೆ. ಶಿಕ್ಷಕರ ನೇಮಕಾತಿಯಲ್ಲಿ ಶೇ.50ರಷ್ಟು ಮೀಸಲಾತಿ ನೀಡಲಾಗಿದೆ. ಜೊತೆಗೆ ಜಿಲಾ ಪಂಚಾಯುತ್ ಮತ್ತು ಗ್ರಾಮ ಪಂಚಾಯತ್ ಚುನಾವಣೆಯಲ್ಲೂ ಮಹಿಳೆಯರಿಗೆ ಮೀಸಲಾತಿ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಇನ್ನೂ ಕೆಲವೇ ದಿನಗಳಲ್ಲಿ ವಿಧಾನಸಭೆ ಚುನಾವಣೆಯಲ್ಲಿಯೂ ಮಹಿಳೆಯರಿಗೆ ಮೀಸಲಾತಿ ನೀಡುವ ದಿನ ದೂರವಿಲ್ಲ. ಎಂದೂ ಇದೇ ವೇಳೆ ಹೇಳಿದರು. ಬಳಿಕ ಮಹಿಳೆಯರ ಶಿಕ್ಷಣ ಮತ್ತು ಆರ್ಥಿಕ ಸಬಲೀಕರಣದ ಅಗತ್ಯವನ್ನು ಒತ್ತಿ ಹೇಳಿದ ಅವರು, ರಾಷ್ಟ್ರ ನಿರ್ಮಾಣದಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.



ಇದಲ್ಲದೆ, ಎನ್‌ಆರ್ ಎಲ್‌ಎಂ ಯೋಜನೆಯಡಿ ಮಂಡ್ಯ ಜಿಲ್ಲೆಯಲ್ಲಿ ಮಹಿಳೆಯರು ತಯಾರಿಸುವ ಉತ್ಪನ್ನಗಳಿಗೆ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಘೋಷಿಸಿದರು. ಈ ಸಂದರ್ಭದಲ್ಲಿ ಶಾಸಕ ಪಿ. ರವಿಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಮಹಿಳೆಯರಿಗೆ ಸಣ್ಣ ಕೈಗಾರಿಕೆಗಳನ್ನು ಉತ್ತೇಜಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು. ಸಣ್ಣ ಕೈಗಾರಿಕೆಗಳ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್ ಅವರು ಮಾತನಾಡಿ, ಗಾರ್ಮೆಂಟ್ ಘಟಕಗಳನ್ನು ಸ್ಥಾಪಿಸುವುದರ ಕುರಿತಂತೆಯೂ ಚರ್ಚೆ ನಡೆಯುತ್ತಿದೆ ಎಂದು ತಿಳಿಸಿದರು.

# ನಾಲ್ವರು ಬಾಂಗ್ಲಾದೇಶಿಯರಿಗೆ ಮೂರು ವರ್ಷ ಜೈಲು ಶಿಕ್ಷೆ ಪ್ರಕಟ

ಬೆಂಗಳೂರು: ಅಂತಾರಾಷ್ಟ್ರೀಯ ಮಾನವ ಕಳ್ಳಸಾಗಣೆ ಪ್ರಕರಣದಲ್ಲಿ ನಾಲ್ವರು ಬಾಂಗ್ಲಾದೇಶಿಯರನ್ನು ದೋಷಿಗಳೆಂದು ತೀರ್ಪು ನೀಡಿರುವ ಬೆಂಗಳೂರಿನ ಎನ್‌ಐಎ ವಿಶೇಷ ನ್ಯಾಯಾಲಯ ಮೂರು ವರ್ಷ ಕಠಿಣ ಜೈಲು ಶಿಕ್ಷೆ ವಿಧಿಸಿ ಆದೇಶ ಹೊರಡಿಸಿದೆ. ಬಾಂಗ್ಲಾದೇಶದ ಜಕೀರ್ ಖಾನ್, ಬಾದಲ್ ಹೌಲಾದರ್, ಕಬೀರ್ ತಾಲೂಕ್ದಾರ್ ಮತ್ತು ಮೊಹಮ್ಮದ್ ಬಚ್ಚು ಘರಾಮಿ ಶಿಕ್ಷೆಗೊಳಗಾದವರು. ಜೊತೆಗೆ, ಎಲ್ಲಾ ಅಪರಾಧಿಗಳು ತಲಾ 20 ಸಾವಿರ ರೂ. ದಂಡ ಪಾವತಿಸಬೇಕು. ದಂಡ ಕಟ್ಟಲು ವಿಫಲವಾದರೆ 1 ತಿಂಗಳು ಹೆಚ್ಚುವರಿ ಜೈಲು ಶಿಕ್ಷೆ ಅನುಭವಿಸಬೇಕು ಎಂದು ಕೋರ್ಟ್ ಆದೇಶಿಸಿದೆ.

ಕಳ್ಳಸಾಗಣೆ ಮೂಲಕ ಬಾಂಗ್ಲಾದೇಶಿ ಕೆಲಸಗಾರರ ನೇಮಕ: ಅಪರಾಧಿಗಳು ಬಾಂಗ್ಲಾದೇಶದಿಂದ ಬೆನ್‌ಪೋಲ್, ಜಶೋರ್ ಮತ್ತು ಅಖೌರಾ ಮೂಲಕ ಭಾರತ ಪ್ರವೇಶಿಸಿದ್ದಾಗಿ ತಪ್ಪೊಪ್ಪಿಕೊಂಡಿದ್ದರು. ಜೊತೆಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಭಾರತೀಯ ಗುರುತಿನ ದಾಖಲೆಗಳನ್ನು ಪಡೆದುಕೊಂಡಿದ್ದರು. ಬಳಿಕ ಬೆಂಗಳೂರಿನ ಕೆಲ ಪ್ರದೇಶಗಳಲ್ಲಿ ಕಸ ವಿಂಗಡಣೆ ವ್ಯವಹಾರ ಮಾಡಿಕೊಂಡಿದ್ದರು. ಅಲ್ಲದೇ, ಕಳ್ಳಸಾಗಣೆ ಮೂಲಕ ಬಾಂಗ್ಲಾದೇಶಿ ಪ್ರಜೆಗಳನ್ನು ಕರೆಸಿಕೊಂಡು ಕೆಲಸಕ್ಕೆ ನೇಮಿಸಿಕೊಂಡಿದ್ದರು ಎಂಬುದು ರಾಷ್ಟ್ರೀಯ ತನಿಖಾ ದಳ (ಎನ್‌ಐಎ) ತನಿಖೆಯಲ್ಲಿ ಪತ್ತೆಯಾಗಿದೆ.

ಬಳಿಕ ತನಿಖೆ ನಡೆಸಿ 12 ಮಂದಿ ಆರೋಪಿಗಳನ್ನು ಬಂಧಿಸಲಾಗಿತ್ತು. ಅವರಿಂದ ಡಿಜಿಟಲ್ ಸಾಧನಗಳು, ಬಾಂಗ್ಲಾದೇಶದ ಗುರುತಿನ ದಾಖಲೆಗಳು, ನಕಲಿ ದಾಖಲೆ ನೀಡಿ ಪಡೆದ ಭಾರತೀಯ ಗುರುತಿನ ಚೀಟಿಗಳು ಹಾಗೂ ಭಾರತೀಯ ಕರೆನ್ಸಿಗಳನ್ನು ವಶಕ್ಕೆ ಪಡೆದುಕೊಂಡಿತ್ತು. 2024ರ ಫೆಬ್ರವರಿಯಲ್ಲಿ ಆರೋಪಿಗಳ ವಿರುದ್ಧ ಆರೋಪಪಟ್ಟಿ ಸಲ್ಲಿಸಲಾಗಿತ್ತು. ಬೆಂಗಳೂರು ಸೇರಿ ರಾಜ್ಯದಲ್ಲಿ ಅಕ್ರಮವಾಗಿ ವಾಸವಾಗಿರುವ ಅಕ್ರಮ ಬಾಂಗ್ಲಾದೇಶಿ ಪ್ರಜೆಗಳ ಬಗ್ಗೆ ನಿರಂತರ ಕಾರ್ಯಾಚರಣೆ ನಡೆಸಲಾಗುತ್ತಿದೆ ಎನ್‌ಐಎ ಮಾಹಿತಿ ನೀಡಿದೆ.

## ರಾಜ್ಯದ ವಿದ್ಯಾರ್ಥಿಗಳಿಗೆ ಕ್ರಾಂತಿಕಾರಿ ಎಐ ಆಪ್: ಗ್ರಾಮೀಣ–ನಗರ ವಿದ್ಯಾರ್ಥಿಗಳಿಗೆ ಸಮಾನ ಶಿಕ್ಷಣ ಅವಕಾಶ

# ಪ್ರೊ. ಡಾ. ಎಸ್.ಎಸ್. ಅಯ್ಯಂಗಾರ್ ಅಭಿವೃದ್ಧಿಪಡಿಸಿದ ಎಐ ಆಧಾರಿತ ಕಲಿಕಾ ತಂತ್ರಜ್ಞಾನ

ಬೆಂಗಳೂರು : ಗ್ರಾಮೀಣ ಮತ್ತು ನಗರ ಪ್ರದೇಶಗಳ ವಿದ್ಯಾರ್ಥಿಗಳ ನಡುವಿನ ಶಿಕ್ಷಣ ಅಂತರವನ್ನು ಕಡಿಮೆ ಮಾಡುವ ಮಹತ್ವದ ಹೆಜ್ಜೆಯಾಗಿ, ಹಿರಿಯ ವಿಜ್ಞಾನಿ ಪ್ರೊ. ಡಾ. ಎಸ್.ಎಸ್. ಅಯ್ಯಂಗಾರ್ ಅವರು ಕರ್ನಾಟಕದ ಪದವಿ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗಾಗಿ ಅತ್ಯಾಧುನಿಕ ಎಐ ಆಧಾರಿತ ಸ್ವಯಂ ಕಲಿಕಾ ಆಪ್ ಅನ್ನು ಅಭಿವೃದ್ಧಿಪಡಿಸಿದ್ದಾರೆ.



ಈ ಆಪ್ ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ಪ್ರಯತ್ನಗಳಿಗೆ ಪೂರಕವಾಗಿದ್ದು, ಬಿಎ, ಬಿಕಾಂ, ಬಿಎಸ್ಸಿ ಹಾಗೂ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತಾವು ಬೇಕಾದ ವಿಷಯಗಳು, ಅಧ್ಯಯನ ಸಾಮಗ್ರಿಗಳು ಮತ್ತು ಉತ್ತರಗಳನ್ನು ಸುಲಭವಾಗಿ ಪಡೆಯಲು ಸಹಾಯ ಮಾಡಲಿದೆ. ಎಐ ತಂತ್ರಜ್ಞಾನದ ಮೂಲಕ ವಿದ್ಯಾರ್ಥಿಗಳಲ್ಲಿ ಸ್ವಯಂ ಕಲಿಕೆಯ ಸಾಮರ್ಥ್ಯವನ್ನು ವೃದ್ಧಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರೊ. ಡಾ. ಎಸ್.ಎಸ್. ಅಯ್ಯಂಗಾರ್, ಈ ಎಐ ಆಪ್‌ನ ವಿನ್ಯಾಸ ಬಹುತೇಕ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ವಿದ್ಯಾರ್ಥಿಗಳಿಗೆ ಲಭ್ಯವಾಗಲಿದೆ ಎಂದು ಹೇಳಿದರು. "ಎಐ ತಂತ್ರಜ್ಞಾನ ಬಳಕೆಯಿಂದ ಕಲಿಕೆ ಹೆಚ್ಚು ಪರಿಣಾಮಕಾರಿ ಮತ್ತು ಸುಲಭವಾಗುತ್ತದೆ. ವಿಶೇಷವಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಇದು ಬಹಳ ಸಹಾಯಕವಾಗಲಿದೆ," ಎಂದು ಅವರು ಹೇಳಿದರು.

ಈ ಆಪ್ ಅನ್ನುಮೊಬೈಲ್ ವಾಟ್ಸಾಪ್ ಹಾಗೂ ಡೆಸ್ಕ್‌ಟಾಪ್ ಪ್ಲಾಟ್‌ಫಾರ್ಮ್‌ಗಳಲ್ಲಿ ಬಳಸಬಹುದಾಗಿದ್ದು, ಡಿಜಿಟಲ್ ಸೌಲಭ್ಯ ಕಡಿಮೆ ಇರುವ ವಿದ್ಯಾರ್ಥಿಗಳಿಗೂ ಇದು ಅನುಕೂಲಕರವಾಗಿದೆ. ವಿದ್ಯಾರ್ಥಿ ಸಮುದಾಯಕ್ಕೆ ಸೇವೆ ಸಲ್ಲಿಸುವ ಉದ್ದೇಶದಿಂದ ಈ ಆಪ್ ಅಭಿವೃದ್ಧಿಪಡಿಸಲಾಗಿದೆ.

ಮುಖ್ಯ ಅಂಶವಾಗಿ, ಪ್ರೊ. ಡಾ. ಎಸ್.ಎಸ್. ಅಯ್ಯಂಗಾರ್ ಅವರು ಈಗಾಗಲೇ ಶಿಕ್ಷಣ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದ್ದು, ಬೆಂಗಳೂರು ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ಅನೇಕ ಸಂಸ್ಥೆಗಳಿಗೆ ?50 ಲಕ್ಷ ಮೌಲ್ಯದ ಡೆಸ್ಕ್‌ಟಾಪ್ ಕಂಪ್ಯೂಟರ್‌ಗಳನ್ನು ವಿತರಿಸಿದ್ದಾರೆ.

ದೇಶದಾದ್ಯಂತ ಇಂತಹ ಶಿಕ್ಷಣಾಭಿವೃದ್ಧಿ ಯೋಜನೆಗಳನ್ನು ವಿಸ್ತರಿಸುವ ಮಹತ್ವಾಕಾಂಕ್ಷೆಯ ಯೋಜನೆಗಳನ್ನೂ ಹೊಂದಿದ್ದಾರೆ.

ಈ ಯೋಜನೆ ಕರ್ನಾಟಕದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಗೇಮ್‌ಚೇಂಜರ್ ಆಗಿ ಪರಿಣಮಿಸಲಿದೆ. ಗ್ರಾಮೀಣ ಮತ್ತು ನಗರ ವಿದ್ಯಾರ್ಥಿಗಳು ವಾಣಿಜ್ಯ, ವಿಜ್ಞಾನ, ಕಲಾ ಹಾಗೂ ಅಕೌಂಟಿಂಗ್ ಕ್ಷೇತ್ರಗಳಲ್ಲಿ ವೇಗವಾಗಿ ಮತ್ತು ಪರಿಣಾಮಕಾರಿಯಾಗಿ ಕಲಿಯಲು ಇದು ಸಹಕಾರಿಯಾಗಲಿದೆ.

ತಾಂತ್ರಿಕ ಸಲಹೆಗಾರರಾಗಿ ಕಾರ್ಯನಿರ್ವಹಿಸುತ್ತಿರುವ ಅವರು, ಪ್ರತಿಯೊಬ್ಬ ವಿದ್ಯಾರ್ಥಿಗೂ ಜ್ಞಾನ ಮತ್ತು ಆತ್ಮವಿಶ್ವಾಸವನ್ನು ನೀಡಿ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಸಿದ್ಧಗೊಳಿಸುವ ದೃಷ್ಟಿಯನ್ನು ಹೊಂದಿದ್ದಾರೆ.

ಅವರ ವಿಶಿಷ್ಟ ಸಾಧನೆಗಳಿಗೆ ಮಾನ್ಯತೆ ನೀಡಿ, "ಎಐ ಮತ್ತು ಡಿಜಿಟಲ್ ಫರೆನ್ಸಿಕ್ಸ್ ಕ್ಷೇತ್ರದ ಸ್ಥಾಪಕ ಪಿತಾಮಹ" ಎಂಬ ಗೌರವ ಪ್ರಶಸ್ತಿಯನ್ನೂ ಅವರಿಗೆ ನೀಡಲಾಗಿದೆ.

ಟಿ. ನರಸಿಪುರ ತಾಲ್ಲೂಕಿನ ಹೆಮ್ಮಿಗೆ ಗ್ರಾಮದ ಮೂಲದವರು ಆದ ಅವರು, ಶ್ರೀರಾಮಪುರ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಪಡೆದು, 1970ರಲ್ಲಿ ಅಮೇರಿಕಾದ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣ ಪಡೆದಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತಂತ್ರಜ್ಞಾನದ ಮೂಲಕ ಶಿಕ್ಷಣ ಒದಗಿಸುವುದು ತನ್ನ ಧ್ಯೇಯ ಎಂದು ಅವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಎಸ್‌ಎಸ್‌ಐಟಿ ಶಿಕ್ಷಣ ಸಂಸ್ಥೆಗಳ ಹಿರಿಯ ಸಲಹೆಗಾರ ಕೈಲಾಶ್ ಶಿವನಗಿ, "ಎಐ ತಂತ್ರಜ್ಞಾನದಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯಲಿದೆ. ಅವರು ಕೇಳುವ ಎಲ್ಲ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರಗಳು ಸಿಗಲಿವೆ," ಎಂದು ಹೇಳಿದರು.

ಈ ಎಐ ಆಧಾರಿತ ಪ್ರಯತ್ನವು ಕರ್ನಾಟಕದ ಶಿಕ್ಷಣ ಕ್ಷೇತ್ರದಲ್ಲಿ ತಂತ್ರಜ್ಞಾನಾಧಾರಿತ ಸಮಾನ ಶಿಕ್ಷಣ ವ್ಯವಸ್ಥೆಗೆ ಹೊಸ ದಾರಿ ತೆರೆದಿದೆ.

# ಹಳೆ ದ್ವೇಷ, ಮನೆ ಮುಂದೆ ಡ್ಯಾನ್ಸ್ ಮಾಡಿದ ವ್ಯಕ್ತಿಯ ಬರ್ಬರ ಕೊಲೆ

**ಬೆಳಗಾವಿ:** ಬೈಲಹೊಂಗಲ ತಾಲೂಕಿನ ಹಣ್ಣಿಕೇರಿ ಗ್ರಾಮದ ಸಿದ್ದೇಶ್ವರ ಜಾತ್ರೆಯ ಸಂಭ್ರಮದಲ್ಲೇ ನೆತ್ತರು ಹರಿದಿದೆ. ಹಳೆ ದ್ವೇಷ ಮತ್ತು ಜಾತ್ರೆ ಮೆರವಣಿಗೆಯಲ್ಲಿ ಮನೆ ಮುಂದೆ ನೃತ್ಯ ಮಾಡಿದ ಕಾರಣಕ್ಕೆ ವ್ಯಕ್ತಿಯೋರ್ವನನ್ನು ಕೊಚ್ಚಿ ಕೊಲೆ ಮಾಡಲಾಗಿದೆ. ಹಣ್ಣಿಕೇರಿ ಗ್ರಾಮದ ಸಂಗನಗೌಡ ಶಂಕರಗೌಡ ಪಾಟೀಲ್ (50) ಕೊಲೆಯಾದ ವ್ಯಕ್ತಿ. ಅದೇ ಗ್ರಾಮದ ಮುದಕಪ್ಪ ಬಳಗನ್ನವರ, ಮಂಜುನಾಥ ಬಳಗನ್ನವರ, ರುದ್ರಪ್ಪ ಬಳಗನ್ನವರ, ವಿಜಯ ಬಳಗನ್ನವರ, ಸೂರಪ್ಪ ಬಳಗನ್ನವರ, ಸಿದ್ದಪ್ಪ ಸಿಂಗಾಡಿ, ನಾಗರಾಜ ಬಳಗನ್ನವರ ಹಾಗೂ ಲಕ್ಷ್ಮಣ ಬಳಗನ್ನವರ, ಇತರರು ಕೊಲೆ ಮಾಡಿದ ಆರೋಪಿಗಳು. ಸದ್ಯ ಈ ಎಲ್ಲ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಮಾರ್ಚ್ 30ರಂದು ಗ್ರಾಮದ ಸಿದ್ದೇಶ್ವರ ಜಾತ್ರೆ ಅದ್ದೂರಿಯಾಗಿ ನಡೆಯುತ್ತಿತ್ತು. ಸಂಗನಗೌಡ ಪಾಟೀಲ್, ತಮ್ಮ ವೈರಿಗಳಾದ ಬಳಗನ್ನವರ ಎಂಬವರ ಮನೆಯ ಮುಂದೆ ಸಾರಾಯಿ ನಶೆಯಲ್ಲಿ ಬಹಳ ಹೊತ್ತು ಡ್ಯಾನ್ಸ್ ಮಾಡಿದ್ದಾನೆ. ಈ ವೇಳೆ, ನಮ್ಮ ಮನೆ ಮುಂದೆ ಯಾಕೆ ಕುಣಿಯುತ್ತಿದ್ದೀಯಾ ಅಂತಾ ಬಳಗನ್ನವರ ಮನೆಯವರು ಪ್ರಶ್ನಿಸಿದ್ದಾರೆ. ಹೀಗೆ ಮಾತಿಗೆ ಮಾತು ಬೆಳೆದು ಗಲಾಟೆ ಶುರುವಾಗಿದೆ. ಅಷ್ಟರಲ್ಲಿಯೇ ಬಳಗನ್ನವರ ಕುಟುಂಬದ ಅನೇಕರು ಅಲ್ಲಿ ಸೇರಿದ್ದಾರೆ. ತಕ್ಷಣ ಮನೆಯಲ್ಲಿ ಇದ್ದ ಕೊಡ್ಲಿ, ಕುಡಗೋಲು, ಕಬ್ಬಿಣದ ರಾಡ್‌ಗಳಿಂದ ಸಂಗನಗೌಡ ಪಾಟೀಲ್ ಮೇಲೆ ಹಲ್ಲೆ ಮಾಡಿದ್ದಾರೆ. ಜಾತ್ರೆ ಬಂದೋಬಸ್ತ್‌ಗೆ ಬಂದಿದ್ದ ಪೊಲೀಸರು ತಕ್ಷಣ ಸ್ಥಳಕ್ಕೆ ದೌಡಾಯಿಸಿ, ರಕ್ತದ ಮಡುವಿನಲ್ಲಿ ಬಿದ್ದು ಒದ್ದಾಡುತ್ತಿದ್ದ ಸಂಗನಗೌಡನನ್ನು ಆಸ್ಪತ್ರೆಗೆ ಕರೆದೊಯ್ಯುತ್ತಿರುವಾಗ ಮಾರ್ಗಮಧ್ಯದಲ್ಲೇ ಮೃತಪಟ್ಟಿದ್ದ. ನೇಸರಗಿ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿತ್ತು. ತನಿಖೆ ಕೈಗೊಂಡು 8 ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರಿಂದ ಎಚ್ಚರಿಕೆ: ಹಣ್ಣಿಕೇರಿ ಗ್ರಾಮವು ಈ ಹಿಂದೆ ಕೊಲೆ, ಹೊಡೆದಾಟಕ್ಕೆ ಕುಖ್ಯಾತಿ ಗಳಿಸಿತ್ತು. ಕಳೆದ ಕೆಲವು ವರ್ಷಗಳಿಂದ ಶಾಂತವಾಗಿದ್ದ ಈ ಊರಲ್ಲಿ ಮತ್ತೆ ರಕ್ತದೋಕುಳಿ ಕಂಡು ಬಂದಿರುವುದು ಗ್ರಾಮಸ್ಥರಲ್ಲಿ ಆತಂಕ ತಂದಿದೆ. ಹೀಗಾಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇನ್ನುಮುಂದೆ ಯಾರಾದರೂ ಗಲಾಟೆ ಮಾಡಿದರೆ ಎಫ್‌ಐಆರ್ ಹಾಕುತ್ತೇವೆ. ಜೊತೆಗೆ ಗಡಿಪಾರು ಸಹ ಮಾಡುತ್ತೇವೆ. ಸಣ್ಣಪುಟ್ಟ ಗಲಾಟೆಗೂ ಯಾವುದೇ ರೀತಿಯ ಅವಕಾಶ ಎಂದು ಕೊಲೆಯಾದ ಸಂಗನಗೌಡ ಪಾಟೀಲ ಸಂಬಂಧಿಕರಿಗೆ ಮತ್ತು ಆರೋಪಿಗಳ ಕುಟುಂಬಸ್ಥರಿಗೆ ಎಚ್ಚರಿಕೆ ನೀಡಿದ್ದಾರೆ.

ಎಸ್‌ಪಿ ಪ್ರತಿಕ್ರಿಯೆ: ಪ್ರಕರಣದ ಬಗ್ಗೆ ಮಾಧ್ಯಮಗಳಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾಹಿತಿ ನೀಡಿ, ಕೊಲೆಯಾದ ಸಂಗನಗೌಡ ಪಾಟೀಲ್ ಗ್ರಾಮದಲ್ಲಿ ರಾಜಕೀಯ ಮುಖಂಡನಾಗಿದ್ದ. ಕೊಲೆ ಆರೋಪಿ ಮುದಕಪ್ಪ ಬಳಗನ್ನವರ ಜೊತೆಗೆ ರಾಜಕೀಯ ಹಾಗೂ ವೈಯಕ್ತಿಕ ದ್ವೇಷವು ಸಹ ಬೆಳೆದಿತ್ತು. ಇಬ್ಬರು ಕುಟುಂಬದ ಯುವಕ, ಯುವತಿಯರು ಪರಸ್ಪರ ಪ್ರೀತಿ ಮಾಡಿದ್ದರು. ಆದರೆ, ಮದುವೆ ಹಂತದಲ್ಲಿ ಅದು ಮುರಿದು ಬಿದ್ದಿತ್ತು. ಇದರಿಂದ ಎರಡೂ ಕುಟುಂಬಗಳ ನಡುವೆ ಆಗುತ್ತಿರಲಿಲ್ಲ. ಜಾತ್ರೆಯ ಸಂದರ್ಭದಲ್ಲಿ ಆರೋಪಿಗಳ ಮನೆ ಮುಂದೆ ಡ್ಯಾನ್ಸ್ ಮಾಡಿದ್ದರಿಂದಲೇ ಸಿಟ್ಟಿಗೆದ್ದು ಆರೋಪಿಗಳು ಕೊಲೆ ಮಾಡಿದ್ದಾರೆ ಎಂದು ತಿಳಿಸಿದರು.

# ತಾವರೆ, ನೈದಿಲೆ ತೋಟ: ಆದಾಯದ ಮೂಲವಾದ ಗೃಹಿಣಿ ಪುಷ್ಪಲತಾ ಹೂದೋಟ

ಮಂಗಳೂರು: ಪುತ್ತೂರು ತಾಲೂಕಿನ ಮುರಾ ಸಮೀಪದ ಪಡ್ನೂರು ಗ್ರಾಮದಲ್ಲಿ ಒಂದು ವಿಭಿನ್ನ ಕೃಷಿ ಪ್ರಯತ್ನ ಇಂದು ಎಲ್ಲರ ಗಮನ ಸೆಳೆಯುತ್ತಿದೆ. ಸಾಮಾನ್ಯವಾಗಿ ನರ್ಸರಿಗಳಲ್ಲಿ ವಿವಿಧ ಅಲಂಕಾರಿಕ ಗಿಡಗಳನ್ನು ಬೆಳೆಸುವ ಪದ್ಧತಿ ಇರುವುದನ್ನು ನಾವು ನೋಡುತ್ತೇವೆ. ಆದರೆ, ಇಲ್ಲಿನ ಪುಷ್ಪಗಿರಿ ನರ್ಸರಿಯಲ್ಲಿ ಒಂದು ವಿಶೇಷ ಪ್ರಯತ್ನ ನಡೆಯುತ್ತಿದೆ. ಇಲ್ಲಿ ಕೇವಲ ನೀರಿನಲ್ಲಿ ಬೆಳೆಯುವ ಹೂವಿನ ಗಿಡಗಳಾದ ತಾವರೆ ಮತ್ತು ನೈದಿಲೆಗಳನ್ನು ಮಾತ್ರ ಬೆಳೆಸಲಾಗುತ್ತಿದೆ. ಈ ವಿಶೇಷ ಪ್ರಯತ್ನದ ಹಿಂದಿರುವವರು ಪುಷ್ಪಲತಾ ಎಂಬ ಗೃಹಿಣಿ.

ಒಂದೂವರೆ ಎಕರೆ ಪ್ರದೇಶದಲ್ಲಿ ಸುಮಾರು ಐದು ಸಾವಿರಕ್ಕೂ ಹೆಚ್ಚು ಪಾಟ್ಗಳಲ್ಲಿ ವಿವಿಧ ಬಗೆಯ ತಾವರೆ ಮತ್ತು ನೈದಿಲೆ ಗಿಡಗಳನ್ನು ಬೆಳೆಸಿ, ಇಂದು ಅದನ್ನು ಯಶಸ್ವಿ ಉದ್ಯಮವಾಗಿ ರೂಪಿಸಿಕೊಂಡಿದ್ದಾರೆ. ಸುಮಾರು ಆರು ವರ್ಷಗಳ ಹಿಂದೆ ಹವ್ಯಾಸವಾಗಿ ಆರಂಭಿಸಿದ ಈ ಕೆಲಸ, ಈಗ ಕುಟುಂಬದ ಪ್ರಮುಖ ಆದಾಯದ ಮೂಲವಾಗಿ ಬೆಳೆಯುತ್ತಿದೆ.

ಪುಷ್ಪಲತಾ ಅವರು ಹೇಳುವಂತೆ, ಮೊದಲಿಗೆ ಬೇರೆ ಬೇರೆ ಕಡೆಗಳಲ್ಲಿ ನೀರಿನಲ್ಲಿ ಅರಳಿದ ತಾವರೆ ಹೂಗಳನ್ನು ನೋಡಿದಾಗ, ತಾನೂ ಇದನ್ನು ದೊಡ್ಡ ಪ್ರಮಾಣದಲ್ಲಿ ಬೆಳೆಸಬಹುದು ಎಂಬ ಆಸೆ ಮೂಡಿತು. ಆ ಆಸೆಯಿಂದಲೇ ಅವರು ಈ ಕೃಷಿಯನ್ನು ಆರಂಭಿಸಿದರು. ಆರಂಭದಲ್ಲಿ ಸಣ್ಣ ಮಟ್ಟದಲ್ಲಿ ಆರಂಭವಾದ ಈ ಪ್ರಯತ್ನ, ನಂತರ ಕ್ರಮೇಣ ವಿಸ್ತರಿಸಿಕೊಂಡು ಇಂದು ಸಾವಿರಾರು ಗಿಡಗಳ ನರ್ಸರಿಯಾಗಿ ಬೆಳೆದಿದೆ.

ಈ ನರ್ಸರಿಯಲ್ಲಿ ತಾವರೆ ಮತ್ತು ನೈದಿಲೆಯ ಹಲವು ವಿಭಿನ್ನ ಜಾತಿಗಳನ್ನು ಬೆಳೆಸಲಾಗುತ್ತಿದೆ. ಲೋಟಸ್‌ನಲ್ಲಿ ಟ್ರಾಪಿಕಲ್, ಸೆಮಿ ಟ್ರಾಪಿಕಲ್, ಹಾರ್ಡಿ, ಬೌಲ್ ಲೋಟಸ್ ಮತ್ತು ಮೈಕ್ರೋ ಬೌಲ್ ಲೋಟಸ್ ಸೇರಿದಂತೆ ಹಲವು ಬಗೆಯ ಗಿಡಗಳಿವೆ. ನೈದಿಲೆಯಲ್ಲೂ ವಿವಿಧ ಬಣ್ಣ ಮತ್ತು ಆಕಾರಗಳ ಗಿಡಗಳನ್ನು ಬೆಳೆಸಲಾಗುತ್ತಿದೆ. ಕೆಲವೊಂದು ಗಿಡಗಳು ಎಲೆಗಳಿಂದಲೇ ಹೊಸ ಗಿಡಗಳನ್ನು ಕೊಡುತ್ತವೆ. ಇನ್ನೂ ಕೆಲವು ಗಿಡಗಳು ಬೇರು ಅಥವಾ ಟ್ಯೂಬರ್ ಭಾಗದಿಂದ ಹೊಸ ಗಿಡಗಳನ್ನು ನೀಡುತ್ತವೆ. ಈ ರೀತಿಯ ತಂತ್ರಜ್ಞಾನ ಬಳಸಿ ಗಿಡಗಳನ್ನು ಹೆಚ್ಚಿಸುವ ಮೂಲಕ ನರ್ಸರಿಯನ್ನು ವಿಸ್ತರಿಸಲಾಗುತ್ತಿದೆ.

ಪುಷ್ಪಗಿರಿ ನರ್ಸರಿಯ ಮತ್ತೊಂದು ವಿಶೇಷತೆ ಎಂದರೆ, ಇಲ್ಲಿ ಬೆಳೆದ ಗಿಡಗಳಿಗೆ ದೇಶದ ವಿವಿಧ ಭಾಗಗಳಿಂದ ಬೇಡಿಕೆ ಇದೆ. ದೆಹಲಿ, ಕೊಲ್ಕತ್ತಾ, ಕಾನ್ಪುರ ಸೇರಿದಂತೆ ಉತ್ತರ ಮತ್ತು ದಕ್ಷಿಣ ಭಾರತದ ಅನೇಕ ರಾಜ್ಯಗಳಿಗೆ ಈ ಗಿಡಗಳನ್ನು ಕಳುಹಿಸಲಾಗುತ್ತಿದೆ.



ಇತ್ತೀಚೆಗೆ ಆನ್‌ಲೈನ್ ಮೂಲಕವೂ ಹೆಚ್ಚಿನ ಪ್ರಮಾಣದಲ್ಲಿ ಮಾರಾಟ ನಡೆಯುತ್ತಿದೆ. ಇದರಿಂದ ಈ ನರ್ಸರಿ ಒಂದು ಸ್ಥಳೀಯ ಉದ್ಯಮದಿಂದ ರಾಷ್ಟ್ರೀಯ ಮಟ್ಟದ ವ್ಯಾಪಾರವಾಗಿ ಬೆಳೆಯುತ್ತಿರುವುದು ಗಮನಾರ್ಹವಾಗಿದೆ.

ಪುಷ್ಪಲತಾ ಅವರ ಪತಿ ವಿಜಯ್ ಕುಮಾರ್ ಅವರು ಹೇಳುವಂತೆ, ಅವರು ಈ ಸ್ಥಳದಲ್ಲಿ ಸುಮಾರು ಇಪ್ಪತ್ತು ವರ್ಷಗಳಿಂದ ನರ್ಸರಿ ನಡೆಸುತ್ತಾ ಬಂದಿದ್ದಾರೆ. ಮೊದಲಿನಿಂದಲೂ ವಿವಿಧ ಗಿಡಗಳನ್ನು ಬೆಳೆಸುತ್ತಿದ್ದರೂ, ನಂತರ ಸ್ಪರ್ಧೆ ಹೆಚ್ಚಾದ ಹಿನ್ನೆಲೆಯಲ್ಲಿ ತಾವರೆ ಮತ್ತು ನೈದಿಲೆ ಗಿಡಗಳತ್ತ ಗಮನ ಹರಿಸಿದ್ದಾರೆ. ಈಗ ಬೇರೆ ಗಿಡಗಳನ್ನು ಬಹುತೇಕ ಬಿಟ್ಟು, ಈ ಗಿಡಗಳನ್ನೇ ಕೇಂದ್ರೀಕರಿಸಿಕೊಂಡು ಬೆಳೆಯಿಸಿ ವ್ಯಾಪಾರ ಮಾಡುತ್ತಿದ್ದಾರೆ.

ಕುಟುಂಬದ ಎಲ್ಲಾ ಸದಸ್ಯರು ಈ ಕೆಲಸದಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ. ಗಿಡಗಳ ಬೆಳವಣಿಗೆ, ಪಾಟಿಂಗ್, ನೀರಿನ ವ್ಯವಸ್ಥೆ, ಮಾರಾಟ ಮತ್ತು ಸಾಗಣೆ ಸೇರಿದಂತೆ ಎಲ್ಲಾ ಕೆಲಸಗಳನ್ನು ಕುಟುಂಬದ ಸಹಕಾರದಿಂದಲೇ ನಿರ್ವಹಿಸಲಾಗುತ್ತಿದೆ. ಇದರಿಂದ ಈ ಉದ್ಯಮವು ಒಂದು ಕುಟುಂಬ ಆಧಾರಿತ ಯಶಸ್ವಿ ಮಾದರಿಯಾಗಿ ಬೆಳೆಯುತ್ತಿದೆ. ಪುಷ್ಪಲತಾ ಅವರು ಈ ಬಗ್ಗೆ ಮಾತನಾಡಿ "ನಾನು ಸುಮಾರು ಆರು ವರ್ಷಗಳಿಂದ ತಾವರೆ ಕೃಷಿ ಮಾಡ್ತಾ ಇದ್ದೀನಿ. ಮೊದಲು ಇದು ಒಂದು ಹವ್ಯಾಸವಾಗಿ ಆರಂಭವಾದರೂ, ನಂತರ ಅದನ್ನು ದೊಡ್ಡ ಮಟ್ಟದಲ್ಲಿ ಬೆಳೆಸಬೇಕು ಎಂಬ ಆಸೆ ಮೂಡಿತು. ಈಗ ಈ ಗಿಡಗಳ ಬೆಳವಣಿಗೆ ಮತ್ತು ಮಾರಾಟದಿಂದ ಉತ್ತಮ ಫಲಿತಾಂಶ ಸಿಗುತ್ತಿದೆ. ಇತರರು ಕೂಡ ಹೊಸ ಪ್ರಯತ್ನಗಳನ್ನು ಮಾಡಲು ಹೆದರಬಾರದು. ಸರಿಯಾದ ಶ್ರಮ ಮತ್ತು ಆಸಕ್ತಿ ಇದ್ದರೆ ಯಶಸ್ಸು ಸಾಧ್ಯ" ಎನ್ನುತ್ತಾರೆ. ಪುಷ್ಪಗಿರಿ ನರ್ಸರಿಯಲ್ಲಿ ಅರಳುತ್ತಿರುವ ತಾವರೆ ಹೂಗಳು ಕೇವಲ ಒಂದು ಹೂವಿನ ತೋಟವಷ್ಟೇ ಅಲ್ಲ, ಅದು ಒಂದು ಮಹಿಳೆಯ ಶ್ರಮ, ಧೈರ್ಯದ ಪ್ರತೀಕವಾಗಿದೆ. ಹೊಸ ರೀತಿಯ ಕೃಷಿಯನ್ನು ಅಳವಡಿಸಿಕೊಂಡು ಯಶಸ್ಸು ಸಾಧಿಸಿದ ಈ ಪ್ರಯತ್ನ, ಇತರರಿಗೂ ಪ್ರೇರಣೆಯಾಗಬಹುದಾಗಿದೆ.

# ವರನಿಗೆ ತಾಲೂಕು ಆಡಳಿತ ನೋಟಿಸ್– ನವ ದಂಪತಿಗೆ ಸಂಕಷ್ಟ!

**ಭಟ್ಕಳ:** ದೇಶದಾದ್ಯಂತ ಎಲ್‌ಪಿಜಿ ಗ್ಯಾಸ್ ಕೊರತೆ ತೀವ್ರವಾಗುತ್ತಿದ್ದು, ಸಾಮಾನ್ಯ ಜನತೆ ಸಂಕಷ್ಟ ಅನುಭವಿಸುತ್ತಿದ್ದಾರೆ. ದಿನ ಬೆಳಗಾದರೆ ಗ್ಯಾಸ್ ಏಜೆನ್ಸಿಗಳ ಮುಂದೆ ಗ್ರಾಹಕರು ಸರತಿ ಸಾಲಿನಲ್ಲಿ ನಿಂತು ಸಿಲಿಂಡರ್ ಪಡೆಯಲು ಪರದಾಡುತ್ತಿರುವ ದೃಶ್ಯಗಳು ಕಂಡು ಬರುತ್ತಿವೆ.



ಇದೇ ವೇಳೆ ಭಟ್ಕಳದಲ್ಲಿ ನವ ದಂಪತಿಗೆ ಸಂಬಂಧಿಕರೊಬ್ಬರು ಎಲ್‌ಪಿಜಿ ಸಿಲಿಂಡರ್ ಉಡುಗೊರೆಯಾಗಿ ನೀಡಿದ ಘಟನೆ ಭಾರೀ ಸಂಚಲನ ಮೂಡಿಸಿದೆ. ವಿವೇಕ್ ಮಹಾಲೆ ಮತ್ತು ನಾಗಸಂಧ್ಯಾ ಶಾಂತಿ ಅವರಿಗೆ ಎಲ್‌ಪಿಜಿ ಸಿಲಿಂಡರ್ ಉಡುಗೊರೆಯಾಗಿ ನೀಡಲಾಗಿದೆ. ಆದರೆ ಗ್ಯಾಸ್ ಸಿಲಿಂಡರ್ ಅನ್ನು ಉಡುಗೊರೆಯಾಗಿ ನೀಡುವುದನ್ನು ಜನರು ಫೋಟೋ ತೆಗೆದು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಪೋಸ್ಟ್ ಮಾಡಿದ ನಂತರ ದಂಪತಿಗೆ ಸಂಕಷ್ಟ ಎದುರಾಗಿದೆ. ತಾಲ್ಲೂಕು ಆಡಳಿತವು ವರನಿಗೆ ನೋಟಿಸ್ ನೀಡಿದೆ. ಉತ್ತರ ಕನ್ನಡದಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ತೀವ್ರ ಕೊರತೆ ಕಂಡುಬಂದಿದ್ದು ತಾಲ್ಲೂಕು ಆಡಳಿತವು ವಿವರಣೆ ಕೋರಿ ವರನಿಗೆ ನೋಟಿಸ್ ಕಳುಹಿಸಿದೆ ಎಂದು ದಂಪತಿಯ ಸಂಬಂಧಿಕರು ತಿಳಿಸಿದ್ದಾರೆ. ಮದುವೆ ನಂತರ ವರ ತಿರುಪತಿಗೆ ಹೋಗಿದ್ದಾರೆ. ಆದರೆ ಸುದ್ದಿ ತಲುಪಿದ ನಂತರ ಅವರು ಅಸಮಾಧಾನಗೊಂಡಿದ್ದಾರೆ ಎಂದು ಸಂಬಂಧಿಕರೊಬ್ಬರು ಹೇಳಿದರು. ಭಟ್ಕಳ ತಹಶೀಲ್ದಾರ್ ನಾಗೇಂದ್ರ ಕೊಲಶೆಟ್ಟಿ ಅವರು ಮದುವೆಯಲ್ಲಿ ಎಲ್‌ಪಿಜಿ ಸಿಲಿಂಡರ್ ಉಡುಗೊರೆಯಾಗಿ ನೀಡಿದ ಬಗ್ಗೆ ತಾನು ಎಂದಿಗೂ ಕೇಳಿಲ್ಲ ನಮಗೆ ಆಶ್ಚರ್ಯವಾಗಿದೆ ಎಂದು ಹೇಳಿದ್ದಾರೆ.

ಭಟ್ಕಳ ತಾಲ್ಲೂಕಿನಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆಯಿಲ್ಲ. ಆದರೆ ಗ್ಯಾಸ್ ಸಿಲಿಂಡರ್ ಗಿಫ್ಟ್ ಮಾಡಲು ಸಾಧ್ಯವಿಲ್ಲ ಮತ್ತು ಮಾಡಬಾರದು. ಈ ಸಂಬಂಧ ನಾನು ಆಹಾರ ನಿರೀಕ್ಷಕರಿಂದ ವರದಿ ಕೇಳಿದ್ದೇನೆ. ಆಹಾರ ನಿರೀಕ್ಷಕರು ಇಂದು ವರದಿಯನ್ನು ಕಳುಹಿಸುತ್ತಾರೆ. ಇದೇ ವರದಿಯನ್ನು ಕಾರವಾರದ ಜಿಲ್ಲಾಡಳಿತಕ್ಕೆ ಕಳುಹಿಸಲಾಗುವುದು ಎಂದು ಅವರು ಟಿಎನ್‌ಐಇಗೆ ತಿಳಿಸಿದರು.

Printed, Published, & owned by : YOGESH, Printed at: SNEHA PRINTERS, No. 129, Kempe gowda Nagar, Magadi Main Road, Bangalore 560 091.
Published at : No. 10, 2nd Floor, 7th Block, Sir M. Visweswaraiah Layout, Muddayanapalya Circle, Bangalore 560 091.
Editor : YOGESH : Mobile : 9912220350 Email : info.southindiatimes@gmail.com